24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 83 | ನವದೆಹಲಿ | ಬೆಲೆ ₹10 | ಸೆಪ್ಟಂಬರ್ 18 2026 ಶುಕ್ರವಾರ



## ನಿತ್ಯ ಪಂಚಾಂಗ 18.09.2026 ಶುಕ್ರವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯಣ ಗ್ರೀಷ್ಮ ಋತು, ಚಾಂದ್ರಮಾನ ಶ್ರಾವಣ-ಭಾದ್ರಪದ ಮಾಸ

ಭಾದ್ರಪದ ಶುದ್ಧ, ಸಪ್ತಮಿ, ಜ್ಯೇಷ್ಠ ನಕ್ಷತ್ರ, ವಿಶ್ವಕರ್ಮ ಜಯಂತಿ, ಅಮುಕ್ತಾಭರಣ ಸಪ್ತಮಿ, ಜ್ಯೇಷ್ಠಾಲಕ್ಷ್ಮೀ ವ್ರತ, ಅಗಡಿ ಶೇಷಾಚಲ ಆರಾಧನೆ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20– 9.04 | 10.30–12.00 | 1.30– 3.00 |
| ಮಂಗಳ | ಮ. 3.25– 4.59 | 9.00–10.30 | 12.00– 1.30 |
| ಬುಧ | ಮ.12.16– 1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42–12.16 | 3.00– 4.30 | 7.30– 9.00 |
| ಶನಿ | ಬೆ. 9.07–10.41 | 1.30– 3.00 | 6.00– 7.30 |

# ಗಾಣಗಾಪುರಕ್ಕೆ ಸಿಎಂ ಭೇಟಿ: ನಾಡಿನ ಸಮೃದ್ಧಿ-ಅಭಿವೃದ್ಧಿಗೆ ದತ್ತಾತ್ರೇಯನಲ್ಲಿ ವಿಶೇಷ ಪ್ರಾರ್ಥನೆ



**ಕಲಬುರಗಿ, ಸೆ.17:** ರಾಜ್ಯದಲ್ಲಿ ತಲೆದೋರಿರುವ ಭೀಕರ ಬರಗಾಲದಿಂದ ಜನತೆಗೆ ಮುಕ್ತಿ ಸಿಗಲಿ, ನಾಡಿನಲ್ಲಿ ಉತ್ತಮ ಮಳೆ- ಬೆಳೆಯಾಗಿ ಶಾಂತಿ, ನೆಮ್ಮದಿ ನೆಲೆಸಲಿ ಎಂದು ಗಾಣಗಾಪುರ ದತ್ತಾತ್ರೇಯನಲ್ಲಿ ಪ್ರಾರ್ಥಿಸಿದ್ದೇನೆ ಎಂದು ಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದರು.

ಗಾಣಗಾಪುರದ ಶ್ರೀ ದತ್ತಾತ್ರೇಯ ಸ್ವಾಮಿಯ ಸನ್ನಿಧಿಗೆ ಗುರುವಾರ ಭೇಟಿ ನೀಡಿ ಪೂಜೆ ಸಲ್ಲಿಸಿದ ಬಳಿಕ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿ, ಗಾಣಗಾಪುರ ದಕ್ಷಿಣ ಭಾರತದ ಅತ್ಯಂತ ಪವಿತ್ರ ಪುಣ್ಯಕ್ಷೇತ್ರವಾಗಿದೆ. ಇಲ್ಲಿಗೆ ಆಗಮಿಸುವ ಭಕ್ತರ ಮನೋಕಾಮನೆಗಳು ಈಡೇರುತ್ತವೆ ಎಂಬ ದೃಢ ನಂಬಿಕೆಯಿದೆ. ನನ್ನ ಕಷ್ಟಕಾಲದಲ್ಲಿ ಹಾಗೂ ಅಭಿವೃದ್ಧಿಯ ಪಯಣದಲ್ಲಿ ಇಲ್ಲಿನ ಅರ್ಚಕರು ಮತ್ತು ಅಭಿಮಾನಿಗಳು ತಮಗಾಗಿ ಹಾಗೂ ರಾಜ್ಯದ ಶ್ರೇಯಸ್ಸಿಗೆ ನಿರಂತರ ಪ್ರಾರ್ಥನೆ ಸಲ್ಲಿಸಿದ್ದರು. ಇವತ್ತು ಬಹಳ ಪುಣ್ಯದಿನ. 79ನೇ ಕಲ್ಯಾಣ ಕರ್ನಾಟಕ ಉತ್ಸವ ಸಂದರ್ಭದಲ್ಲಿ ಭಗವಂತನ ಪ್ರಾರ್ಥನೆ ಮಾಡುವ ಭಾಗ್ಯ ನನಗೆ ದೊರೆತಿದೆ ಎಂದರು.

**ಗಾಣಗಾಪುರಕ್ಕೆ ಮೂಲಸೌಕರ್ಯ ಅಭಿವೃದ್ಧಿ**

ಗಾಣಗಾಪುರ ಕ್ಷೇತ್ರದ ಸಮಗ್ರ ಅಭಿವೃದ್ಧಿ ಹಾಗೂ ಭಕ್ತಾದಿಗಳಿಗೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಲು ನಮ್ಮ ಸರ್ಕಾರ ಈಗಾಗಲೇ ಸೂಕ್ತ ಯೋಜನೆಗಳನ್ನು ಘೋಷಿಸಿದೆ. ಸ್ಥಳೀಯ ಶಾಸಕರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರ ಮನವಿಯಂತೆ ಹಂತ- ಹಂತವಾಗಿ ಕ್ಷೇತ್ರದ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು" ಎಂದು ಅವರು ಭರವಸೆ ನೀಡಿದರು.



ಅಖಿಲ ಭಾರತ ವೀರಶೈವ – ಲಿಂಗಾಯತ ಮಹಾಸಭಾ, ಮಳವಳ್ಳಿ ತಾಲ್ಲೂಕು ವಿಭಾಗದ ಪುರುಷ, ಮಹಿಳಾ ಮತ್ತು ಯುವ ಘಟಕದ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಕೃಷಿ ಮತ್ತು ಕೊಡಗು ಜಿಲ್ಲಾ ಉಸ್ತುವಾರಿ ಸಚಿವ ಪಿ.ಎಂ.ನರೇಂದ್ರಸ್ವಾಮಿ ಅವರ ವಿಧಾನಸೌಧದ ಕಚೇರಿ ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಿ, ಸಚಿವರಿಗೆ ಅಭಿನಂದನೆ ಸಲ್ಲಿಸಿದರು. ಇದೇ ಸಂದರ್ಭ ಮಳವಳ್ಳಿಯಲ್ಲಿ ವೀರಶೈವ ಮಹಾಸಭಾಕ್ಕೆ ನಿವೇಶನ ಕೋರಿ ಮನವಿ ಪತ್ರ ಸಲ್ಲಿಸಲಾಯಿತು. ಇದಕ್ಕೆ ಸ್ಪಂದಿಸಿದ ಸಚಿವರು ತಹಶೀಲ್ದಾರ್‌ಗೆ ಸೂಚನೆ ಕೊಡುತ್ತೇನೆ. ಸರ್ಕಾರಿ ಜಾಗವನ್ನು ಗುರುತಿಸಿ ತಮಗೆ ನಿವೇಶನ ಕೊಡಿಸುತ್ತೇನೆ ಎಂದು ಭರವಸೆ ನೀಡಿದರು.

# ನಾನೀಗ ಸಿಎಂ ಅಲ್ಲ, ನನ್ನ ಮಾತು ಎಷ್ಟು ನಡೆಯುತ್ತೆ ಅನ್ನೋದು ನನಗೆ ಮಾತ್ರ ಗೊತ್ತು: ಸಿದ್ದರಾಮಯ್ಯ ಮಾರ್ಮಿಕ ನುಡಿ



**ಬೆಂಗಳೂರು, ಸೆ.17:** ನಾನೀಗ ಮುಖ್ಯಮಂತ್ರಿ ಅಲ್ಲ, ನನ್ನ ಮಾತು ಎಷ್ಟು ನಡೆಯುತ್ತೆ, ಎಷ್ಟು ನಡೆಯಲ್ಲ ಅನ್ನೋದು ನನಗೆ ಮಾತ್ರ ಗೊತ್ತು ಎಂದು ಮಾಜಿ ಸಿಎಂ ಸಿದ್ದರಾಮಯ್ಯ ಮಾರ್ಮಿಕವಾಗಿ ಹೇಳಿದ್ದಾರೆ.

ವಿಧಾನಸೌಧದ ಸಿಎಲ್‌ಪಿ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯುನ್ನುದ್ದೇಶಿಸಿ ಮಾತನಾಡಿ, ನಾನೀಗ ಮುಖ್ಯಮಂತ್ರಿ ಅಲ್ಲ. ನನ್ನ ಮಾತು ಈಗಲೂ ನಡೆಯುತ್ತೆ ಅಂತ ಬಹಳ ಜನ ಅನ್ಕೊಂಡಿದ್ದಾರೆ. ನಾನೂ ಹಾಗೇ ಅನ್ಕೊಂಡಿದ್ದೇನೆ. ಆದ್ರೆ ನನ್ನ ಮಾತು ಎಷ್ಟು ನಡೆಯುತ್ತೆ, ಎಷ್ಟು ನಡೆಯಲ್ಲ ಅಂತ ನನಗೆ ಮಾತ್ರ ಗೊತ್ತು ಎಂದು ಹೇಳಿದ್ದಾರೆ.

ನಿನ್ನೆಯಷ್ಟೇ ಬೆಂಗಳೂರಿನಲ್ಲಿ ಎಐಸಿಸಿ ನಾಯಕರ ಜೊತೆ ಸಿದ್ದರಾಮಯ್ಯ. ಪ್ರತ್ಯೇಕ ಮಾತುಕತೆ ನಡೆಸಿದ್ದರು. ಈ ಬೆನ್ನಲ್ಲೇ ಮಾರ್ಮಿಕ ಮಾತುಗಳನ್ನಾಡಿರುವುದು ಚರ್ಚೆಗೆ ಗ್ರಾಸವಾಗಿದೆ. ಸದ್ಯದ ಸರ್ಕಾರದಲ್ಲಿ ತಮ್ಮ ಮಾತು ಎಷ್ಟು ನಡೆಯುತ್ತೆ ಎಷ್ಟು ನಡೆಯಲ್ಲ ಅಂತ ತಮಗೆ ಮಾತ್ರ ಗೊತ್ತಿದೆ ಎಂದು ಹೇಳುವ ಮೂಲಕ ತಮ್ಮ ಸಲಹೆಗಳಿಗೆ ಮನ್ನಣೆ ಸಿಕ್ತಿಲ್ಲ ಅಂತ ಪರೋಕ್ಷವಾಗಿ ಬೇಸರ ಹೊರಹಾಕಿದ್ದಾರೆ.

ನರೇಂದ್ರ ಮೋದಿ ಪ್ರಧಾನಿಯಾಗಬೇಕಾದರೂ ಸಂವಿಧಾನವೇ ಕಾರಣ. ಆದ್ರೆ ಜಾತಿ ವ್ಯವಸ್ಥೆ ಬದಲಾವಣೆ ಆಗಬಾರದು ಅಂತ ಕೆಲವರು ಇದ್ದಾರೆ. ನಾನು 8 ವರ್ಷ ಸಿಎಂ ಆಗಿದ್ದಾಗ ಬದಲಾವಣೆಗೆ ಪ್ರಯತ್ನ ಪಟ್ಟೆ. SCSP-TSP ಕಾಯ್ದೆಯನ್ನ ಕೇಂದ್ರ ಸರ್ಕಾರ ಯಾಕೆ ಮಾಡಿಲ್ಲ. ಬಿಜೆಪಿಗೆ ವೋಟು ಕೊಟ್ಟು ಜನ ಕಳಿಸಿದ್ದಾರಲ್ಲಾ, ಬಹಳ ಜನ ಹುಡುಗರು ಮೋದಿ ಮೋದಿ ಅಂತಿದ್ರು, ಈಗ ಸೈಲೆಂಟ್ ಆಗಿದ್ದಾರೆ ಎಂದು ಕುಟುಕಿದ್ದಾರೆ.

# ಉಮರ್ ಖಾಲಿದ್ ದೇಶದ್ರೋಹಿ ಎನ್ನುವವರೇ ನಿಜವಾದ ರಾಷ್ಟ್ರದ್ರೋಹಿಗಳು: ಬಿ.ಕೆ. ಹರಿಪ್ರಸಾದ್

**ಬೆಂಗಳೂರು, ಸೆ.17:** ಎನ್‌ಎಲ್‌ಎಸ್‌ಐಯುನಲ್ಲಿ ಉಮರ್ ಖಾಲಿದ್ ಕುರಿತ ಡಾಕ್ಯುಮೆಂಟರಿ ಪ್ರದರ್ಶನ ವಿವಾದದ ನಡುವೆ ಖಾಲಿದ್ ಒಬ್ಬ 'ದೇಶಪ್ರೇಮಿ' ಎಂಬ ತಮ್ಮ ಹೇಳಿಕೆಯನ್ನು ಮತ್ತೊಮ್ಮೆ ಸಮರ್ಥಿಸಿ ಕೊಂಡಿರುವ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್, ದೇಶದ ಜನರ ಪರವಾಗಿ ಮಾತನಾಡಿದ ವಿದ್ಯಾವಂತ, ಜನಪರ ಚಳವಳಿಗಾರ ಉಮರ್ ಖಾಲಿದ್‌ನನ್ನು ದೇಶದ್ರೋಹಿ ಎನ್ನುವವರೇ ನಿಜವಾದ ರಾಷ್ಟ್ರದ್ರೋಹಿಗಳು ಎಂದಿದ್ದಾರೆ.

ಉಮರ್ ಖಾಲಿದ್ ಆರ್‌ಎಸ್‌ಎಸ್‌ನಂತೆ ಪಾಕಿಸ್ತಾನದ ಜೊತೆ ಗುಪ್ತ ಚರ್ಚೆ ನಡೆಸಿಲ್ಲ. ಸಂಘ ಪರಿವಾರದವರಂತೆ ಐಎಸ್‌ಐ ಏಜೆಂಟ್‌ಗಳ ಜೊತೆ ಮಾತುಕತೆಯನ್ನೂ ನಡೆಸಿಲ್ಲ. ಕನಿಷ್ಟಪಕ್ಷ ಆಮಂತ್ರಣವೇ ಇಲ್ಲದೆ ಪಾಕ್ ಪ್ರಧಾನಿಯ ಕುಟುಂಬದ ಕಾರ್ಯಕ್ರಮಕ್ಕೆ ಹೋಗಿ ಬಿರಿಯಾನಿ ತಿಂದಿಲ್ಲ ಎಂದು ವ್ಯಂಗ್ಯವಾಡಿದ್ದಾರೆ.

ಬಿಜೆಪಿ ರಾಜ್ಯಾಧ್ಯಕ್ಷರು ರಾಜಕೀಯವಾಗಿ ಉತ್ತರ ಕೊಡಬೇಕಾದ ಪ್ರಶ್ನೆಗಳಿಗೆ 'ದೇಶದ್ರೋಹ' ಎಂಬ ಪದವನ್ನು ಬಳಸುತ್ತಿದ್ದಾರೆ. ಭಿನ್ನಾಭಿಪ್ರಾಯ ವ್ಯಕ್ತಪಡಿಸುವ ಪ್ರತಿಯೊಬ್ಬರನ್ನೂ ದೇಶದ್ರೋಹಿ ಎಂದು ಕರೆಯುವುದು ಪ್ರಜಾಪ್ರಭುತ್ವದ ಭಾಷೆಯಲ್ಲ ಎಂದು ಕಿಡಿ ಕಾರಿದ್ದಾರೆ.

## ಬಿಜೆಪಿ ಮನೆಗೀಗ ನೂರು ಬಾಗಿಲು!



ಕಾಂಗ್ರೆಸ್ ಪಕ್ಷದ ಮನೆ ಮೂರು ಬಾಗಿಲು ಎಂದು ಹೇಳುವ ವಿಜಯೇಂದ್ರ ಮೊದಲು ತಮ್ಮ ಮನೆಯ ಬಾಗಿಲುಗಳೆಷ್ಟು ಎನ್ನುವುದನ್ನು ಎಣಿಸಿಕೊಳ್ಳಲಿ. ಕಾಂಗ್ರೆಸ್ ಮನೆಗೆ ಮೂರು ಬಾಗಿಲುಗಳಿವೆ ಎಂದು ಹೇಳುವ ಬಿಜೆಪಿಯ ಮನೆ ಈಗ 'ನೂರು ಬಾಗಿಲು ಆಗಿದೆ. ಇಷ್ಟಕ್ಕೂ ಕಾಂಗ್ರೆಸ್ ಪಕ್ಷದ ಕಚೇರಿಯ ಬಾಗಿಲು, ಕಿಟಕಿಗಳನ್ನು ಎಣಿಸುತ್ತಾ ಕೂರಲು ವಿಜಯೇಂದ್ರ ಕೆಪಿಸಿಸಿಯ ವಾಚ್‌ಮನ್ ಆಗಿದ್ದಾರೆಯೇ. ವಿಜಯೇಂದ್ರ ಕಾಂಗ್ರೆಸ್ ಪಕ್ಷದ ಮನೆಯ ಬಾಗಿಲು ಎಣಿಸುವುದನ್ನು ಬಿಟ್ಟು, ಮೊದಲು ಬಿಜೆಪಿಯೊಳಗಿನ ಭಿನ್ನಾಭಿಪ್ರಾಯಗಳಿಗೆ ಉತ್ತರಿಸಲಿ ಎಂದು ಬಿ.ಕೆ. ಹರಿಪ್ರಸಾದ್ ತಿರುಗೇಟು ನೀಡಿದ್ದಾರೆ.

ಕೆಪಿಎಸ್ಸಿಯ ಅಧ್ಯಕ್ಷರನ್ನು ಪೇಮೆಂಟ್ ಮೇಲೆ ಆಯ್ಕೆಮಾಡಿ ಅದೇ ಹಣದಲ್ಲೇ ಬಿಜೆಪಿಯ ಅಧ್ಯಕ್ಷನಾಗಿದ್ದಾರೆ ಎಂದು ಬಸವನಗೌಡ ಪಾಟೀಲ್ ಯತ್ನಾಳ್ ಅವರ ಪ್ರಶ್ನೆಗಳಿಗೆ ಉತ್ತರ ನೀಡಲಿ. ಆಮೇಲೆ ಕೆಪಿಸಿಸಿ ಕಚೇರಿಯ ಸುತ್ತ ಅಲೆದು ನಮ್ಮ ಕಚೇರಿಯ ಬಾಗಿಲಿನ ಲೆಕ್ಕ ಹಾಕುತ್ತಿರಲಿ. ಮುಂದಿನ ಐದು ವರ್ಷವೂ ವಿಜಯೇಂದ್ರಗೆ ಇದೇ ಕೆಲಸವನ್ನು ನಾವು ವಹಿಸಲಿದ್ದೇವೆ ಎಂದು ಹರಿಪ್ರಸಾದ್ ಹೇಳಿದ್ದಾರೆ.

# ಯಾರ ತಂಟೆಗೂ ಹೋಗಲ್ಲ, ನನ್ನ ತಂಟೆಗೆ ಬಂದರೆ ಬಿಡಲ್ಲ: ಜನಾರ್ದನರೆಡ್ಡಿಗೆ ಸಚಿವ ತಂಗಡಗಿ ಎಚ್ಚರಿಕೆ

**ಬೆಂಗಳೂರು, ಸೆ.17:** ಜನಾರ್ದನ ರೆಡ್ಡಿ ನನ್ನನ್ನು ಏಕವಚನದಲ್ಲಿ ಸಂಬೋಧಿಸಿದ್ದಕ್ಕೆ ಹಾಗೂ ನಾನು ಸಹಾಯ ಪಡೆದಿದ್ದೇನೆ ಎಂದಿದ್ದಕ್ಕೆ ಸೇರಿ ಎಲ್ಲದಕ್ಕೂ ಎಕ್ಸ್ ಖಾತೆ ಮೂಲಕ ತಕ್ಕ ಉತ್ತರ ಕೊಟ್ಟಿದ್ದೇನೆ. ನಾನು ಯಾರ ತಂಟೆಗೂ ಹೋಗುವುದಿಲ್ಲ, ನನ್ನ ತಂಟೆಗೆ ಬಂದರೆ ಬಿಡುವುದಿಲ್ಲ ಎಂದು ಸಚಿವ ಶಿವರಾಜ ತಂಗಡಗಿ ಎಚ್ಚರಿಕೆ ನೀಡಿದ್ದಾರೆ.

ಕಲ್ಯಾಣ ಕರ್ನಾಟಕದ 79ನೇ ವರ್ಷದ ಉತ್ಸವದಲ್ಲಿ ಭಾಗಿಯಾದ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜನಾರ್ದನ ರೆಡ್ಡಿ ನನ್ನನ್ನು ಲೇ ಎಂದಿದ್ದಾರೆ. ಶಾಸಕ ಗಣೇಶ್ ಅವರನ್ನು ಅವಾಚ್ಯ ಪದ ಬಳಸಿ ದರ್ಪ ಮೆರೆದಿದ್ದಾರೆ. ಅವರಿಗೆ ಮದ ನೆತ್ತಿಗೇರಿದೆ ಎಂದು ಕಿಡಿಕಾರಿದ್ದಾರೆ.

ನನ್ನ ಸಹಾಯದ ಬಗ್ಗೆಯೂ ಜನಾರ್ದನ ರೆಡ್ಡಿ ನೆನಪು ಮಾಡಿಕೊಳ್ಳಲಿ. ಅವರು ನನಗೆ ಸಹಾಯ ಮಾಡಿದ್ದಾರೆ ಎಂದು ಹೇಳಿದ್ದೆ. ನನ್ನ ಜಮೀನು ಮಾರಾಟ ಮಾಡಿದೆ. ಅವರ ಆಪ್ತರೊಬ್ಬರು ನನ್ನ ಜಮೀನು ಪಡೆದು ಹಣ ನೀಡಿದ್ದರು. ಅದನ್ನು ನಾನು ಹೇಳಿದ್ದೇನೆ. ಅದಕ್ಕೆ ಕನಕಗಿರಿ ಕ್ಷೇತ್ರದ ಜನರನ್ನು ನಾನೇ ಸಾಕಿದ್ದೀನಿ, ತಂಗಡಿಗೆ ನಾನೇ ಸಲಹಿದ್ದೀನಿ ಎನ್ನುತ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಇದೇ ಜನಾರ್ದನ ರೆಡ್ಡಿ ರಾಜ್ಯಸಭೆ ಚುನಾವಣೆ ವೇಳೆ ನನ್ನಿಂದ ಏನು ಸಹಾಯ ಪಡೆದಿದ್ದಾರೆ ಹೇಳಲಿ. 'ಕೊಟ್ಟು ಹಂಗಿಸಬೇಡ, ಕೊಟ್ಟು ಕುದಿಯಲು ಬೇಡ, ಎಷ್ಟುಂಡರೆಂದು ಅನಬೇಡ. ಇವು ಮೂರು ಮುಟ್ಯಾವ ಶಿವನ ಸದರೀಗೆ' ಇದು ನಮ್ಮ ಜನಪದರು ಕಟ್ಟಿ ಹಾಡಿದ ಜಾನಪದ ಹಾಡು. ಇದರ ಅರ್ಥ ಯಾರೇ ಆಗಲಿ ಕೊಟ್ಟ ನಂತರ ಅಯ್ಯೋ ಯಾಕೆ ಕೊಟ್ಟೆ ಅಂತಾ ಮನಸ್ಸಿನಲ್ಲಿ ಕುದಿಯಬಾರದು. ಒಂದೊಮ್ಮೆ ಅವರೇ ಬೇಡಿದಾಗ ಕೊಟ್ಟಿದ್ದರೂ, ನಂತರ ಸಮಯ ಬಂದಾಗ ಅಯ್ಯೋ ಆಗ ಕೊಟ್ಟೆನಲ್ಲ ಎಂದು ಹಂಗಿಸಬಾರದು. ಮನೆಗೆ ಊಟಕ್ಕೆ ಕರೆದಾಗ ಅಬ್ಬಾ ಎಷ್ಟು ಊಟ ಮಾಡಿದನಲ್ಲ ಅಂತಾ ಅಂದುಕೊಳ್ಳಬಾರದು. ಕೊಡುವುದು, ಇಡುವುದು, ಊಟ ಹಾಕಿದ್ದು ಸಾಕ್ಷಾತ್ ಶಿವನ ಪಾದಕ್ಕೆ ಸಲ್ಲಿಸಿದಂತೆ. ಒಂದೊಮ್ಮೆ ಹೀಗೆ ಹೀಯಾಳಿಸಿದರೆ ಅದು ವ್ಯರ್ಥ ಎಂಬುದು ನಮ್ಮ ಜನಪದರು ಕಂಡುಕೊಂಡ ಸತ್ಯ. ಇದನ್ನು ರೆಡ್ಡಿ ಅರ್ಥ ಮಾಡಿಕೊಂಡರೆ ಸಾಕು ಎಂದು ತಂಗಡಗಿ ಹೇಳಿದ್ದಾರೆ.

# ಕರಾವಳಿ-ಮಲೆನಾಡಿಗೆ ಹೊಸರೂಪ: ಸಿಎಂ ಡಿ.ಕೆ.ಶಿವಕುಮಾರ್

**30-40 ವರ್ಷಗಳ ಬೇಡಿಕೆಗಳತ್ತ ಸರ್ಕಾರದ ಗಮನ**

**ಬರ, ಕಸ್ತೂರಿರಂಗನ್: ರೈತರ ವಾಸ್ತವಾಂಶ ಅರಿಯಲು ವಿಶೇಷ ಅಧಿವೇಶನ**



**ಮಂಗಳೂರು, ಸೆ 17:** ಕರಾವಳಿ ಮತ್ತು ಮಲೆನಾಡು ಭಾಗಗಳಿಗೆ ಹೊಸರೂಪ ನೀಡುವ ಮೂಲಕ ಇಲ್ಲಿನ ಮಾನವ ಸಂಪತ್ತು ಹಾಗೂ ನೈಸರ್ಗಿಕ ಸಂಪನ್ಮೂಲಗಳನ್ನು ಸಮರ್ಪಕವಾಗಿ ಬಳಸಿಕೊಳ್ಳಲು ಸರ್ಕಾರ ಮುಂದಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದರು. ಮಂಗಳೂರು ವಿಮಾನ ನಿಲ್ದಾಣದಲ್ಲಿ ಗುರುವಾರ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಕರಾವಳಿ ಭಾಗಕ್ಕೆ 340 ಕಿ.ಮೀ. ಉದ್ದದ ಕರಾವಳಿ ತೀರವಿದೆ. ಇದನ್ನು ಸಮರ್ಪಕವಾಗಿ ಬಳಸಿಕೊಂಡು ಈ ಭಾಗದ ಅಭಿವೃದ್ಧಿಗೆ ಹೊಸ ದಿಕ್ಕು ನೀಡಬೇಕು. ಕರಾವಳಿ ಹಾಗೂ ಮಲೆನಾಡಿನಲ್ಲಿ ವಲಸೆ ಹೋಗುವುದನ್ನು ತಡೆಯುವಂತಹ ಅವಕಾಶಗಳನ್ನು ಸೃಷ್ಟಿಸಬೇಕು ಎಂದರು.

ಕರ್ನಾಟಕದಲ್ಲೇ ಕರಾವಳಿ–ಮಲೆನಾಡು ಭಾಗದಲ್ಲಿ ಹೆಚ್ಚು ವಿದ್ಯಾವಂತರು, ಪ್ರಜ್ಞಾವಂತರು ಹಾಗೂ ಪ್ರತಿಭಾವಂತ ಮಾನವ ಸಂಪನ್ಮೂಲವಿದೆ. ಈ ಮಾನವ ಸಂಪತ್ತಿಗೆ ಸ್ಥಳೀಯವಾಗಿಯೇ ಅವಕಾಶ ಮತ್ತು ಶಕ್ತಿ ತುಂಬುವ ಅಗತ್ಯವಿದೆ. ಈ ನಾಡು ಯಾವುದಕ್ಕೂ ಕಡಿಮೆಯಿಲ್ಲ ಎಂದು ಹೇಳಿದರು.

**30–40 ವರ್ಷಗಳ ಬೇಡಿಕೆಗಳತ್ತ ಸರ್ಕಾರದ ಗಮನ**

ಕರಾವಳಿ ಭಾಗದ ಜನರು ಕಳೆದ 30–40 ವರ್ಷಗಳಿಂದ ಹಲವು ಬೇಡಿಕೆಗಳನ್ನು ಮುಂದಿಟ್ಟಿದ್ದಾರೆ. ಈ ಬಗ್ಗೆ ಜನಪ್ರತಿನಿಧಿಗಳು, ಪಕ್ಷದವರು ಸೇರಿದಂತೆ ಬಿಜೆಪಿ ಶಾಸಕರು ಹಾಗೂ ಸಂಸದರೂ ತಮ್ಮ ಅಭಿಪ್ರಾಯ ಮತ್ತು ಬೇಡಿಕೆಗಳನ್ನು ತಿಳಿಸಿದ್ದಾರೆ. ?ನಾವು ಕೈಹಿಡಿಯದಿದ್ದರೆ ಇನ್ನಾರು ಕೈಹಿಡಿಯುತ್ತಾರೆ ಎಂಬ ನಿರೀಕ್ಷೆಯನ್ನು ಅವರು ವ್ಯಕ್ತಪಡಿಸಿದ್ದಾರೆ. ಅವರ ಹಲವು ಬೇಡಿಕೆಗಳನ್ನು ಗಮನದಲ್ಲಿಟ್ಟು ಕೊಂಡಿದ್ದೇನೆ ಎಂದು ಹೇಳಿದರು.

ಈ ಎಲ್ಲ ವಿಚಾರಗಳ ಕುರಿತು ಶುಕ್ರವಾರ ನಡೆಯಲಿರುವ ವಿಶೇಷ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಿ, ಸರ್ಕಾರ ಕೈಗೊಳ್ಳುವ ತೀರ್ಮಾನಗಳನ್ನು ಬಳಿಕ ತಿಳಿಸಲಾಗುವುದು ಎಂದರು.

**ಕಸ್ತೂರಿರಂಗನ್: ರೈತರ ವಾಸ್ತವಾಂಶ ಅರಿಯಲು ವಿಶೇಷ ಅಧಿವೇಶನ**

ಕಸ್ತೂರಿರಂಗನ್ ವರದಿ ಜಾರಿ ವಿಚಾರದಲ್ಲಿ ರೈತರು ಹಾಗೂ ಮಲೆನಾಡು–ಕರಾವಳಿ ಭಾಗದ ಜನರಿಗೆ ಎದುರಾಗಬಹುದಾದ ಸಮಸ್ಯೆಗಳ ಬಗ್ಗೆಯೂ ಪ್ರತಿಕ್ರಿಯಿಸಿದ ಅವರು, ಸರ್ಕಾರ ಈಗಾಗಲೇ ವರದಿಯನ್ನು ತಿರಸ್ಕರಿಸುವ ನಿಲುವು ಹೊಂದಿದ್ದರೂ, ಈ ವಿಚಾರದಲ್ಲಿ ವಿವಿಧ ಒತ್ತಡಗಳು ಮತ್ತು ಅಭಿಪ್ರಾಯಗಳಿವೆ ಎಂದರು.

ಈ ಹಿನ್ನೆಲೆಯಲ್ಲಿ ವಿಶೇಷ ಅಧಿವೇಶನದಲ್ಲಿ ಎಲ್ಲ ಶಾಸಕರಿಗೂ ತಮ್ಮ ಅಭಿಪ್ರಾಯ ವ್ಯಕ್ತಪಡಿಸಲು ಅವಕಾಶ ನೀಡಲಾಗುವುದು. ಅಧಿವೇಶನಕ್ಕೂ ಮುನ್ನ ತಾವೇ ವಿವಿಧ ಜಿಲ್ಲೆಗಳಿಗೆ ಭೇಟಿ ನೀಡಿ ವಾಸ್ತವ ಪರಿಸ್ಥಿತಿ ಅರಿಯುತ್ತಿರುವುದಾಗಿ ಎಂದು ಹೇಳಿದರು.

ಅಸೆಂಬ್ಲಿಯಲ್ಲಿ ಚರ್ಚೆ ಮಾಡುವ ಮೊದಲು, ಯಾವುದೇ ಅಂತಿಮ ಅಭಿಪ್ರಾಯಕ್ಕೆ ಬರುವ ಮೊದಲು ವಾಸ್ತವಾಂಶ ತಿಳಿದುಕೊಳ್ಳಬೇಕು. ಸಾಮಾನ್ಯ ರೈತರು, ಸ್ಥಳೀಯ ಜನರು, ಜನಪ್ರತಿನಿಧಿಗಳು ಹಾಗೂ ಹೋರಾಟಗಾರರನ್ನು ಭೇಟಿ ಮಾಡಿ ಅವರ ಸಮಸ್ಯೆಗಳನ್ನು ತಿಳಿದುಕೊಳ್ಳುತ್ತಿದ್ದೇನೆ ಎಂದರು.

**ಬರ, ರೈತರ ಸಮಸ್ಯೆಗೂ ವಿಶೇಷ ಅಧಿವೇಶನ**

ವಿಶೇಷ ಅಧಿವೇಶನದಲ್ಲಿ ಕಸ್ತೂರಿರಂಗನ್ ವರದಿ ಮಾತ್ರವಲ್ಲದೆ, ರೈತರ ಸಮಸ್ಯೆಗಳು ಮತ್ತು ಬರ ಪರಿಸ್ಥಿತಿಯ ಬಗ್ಗೆಯೂ ಚರ್ಚಿಸಲಾಗುವುದು. ರೈತರ ಬದುಕಿನ ಮೇಲೆ ನೇರವಾಗಿ ಪರಿಣಾಮ ಬೀರುವ ಸಮಸ್ಯೆಗಳನ್ನು ಅರಿತುಕೊಂಡು ಚರ್ಚಿಸಲು ಅಧಿವೇಶನ ಕರೆದಿರುವುದಾಗಿ ಎಂದು ತಿಳಿಸಿದರು.

# ಪ್ರಧಾನಿ ನರೇಂದ್ರ ಮೋದಿ ಜನ್ಮದಿನ ಚನ್ನಪಟ್ಟಣದಲ್ಲಿ ಪೌರಕಾರ್ಮಿಕರಿಗೆ ಗೌರವ: ಬಾಗಿನ ಅರ್ಪಿಸಿದ ಸಂಸದ ಡಾ.ಸಿ.ಎನ್. ಮಂಜುನಾಥ್



**ಚನ್ನಪಟ್ಟಣ, ಸೆ.17:** ಗುರುವಾರ ಚನ್ನಪಟ್ಟಣದ ಕೊಲ್ಲಾಪುರದಮ್ಮನವರ ದೇವಸ್ಥಾನದ ಆವರಣದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಜನ್ಮದಿನದ ಅಂಗವಾಗಿ ಸಂಸದ ಡಾ.ಸಿ.ಎನ್.ಮಂಜುನಾಥ್ ಪೌರ ಕಾರ್ಮಿಕರಿಗೆ ಹೂವು ಸುರಿಸಿ, ಬಾಗಿನ ಅರ್ಪಿಸಿ ಗೌರವಿಸಿದರು.

ಪೌರಕಾರ್ಮಿಕರು ನಮ್ಮ ಸಮಾಜದ ಸ್ವಚ್ಛತೆಯ ರಾಯಭಾರಿಗಳು. ತಮ್ಮ ಆರೋಗ್ಯವನ್ನೂ ಲೆಕ್ಕಿಸದೆ ಪ್ರತಿದಿನ ಶ್ರಮಿಸುವ ಅವರ ಸೇವೆ ಅತ್ಯಂತ ಅನನ್ಯ ಮತ್ತು ಶ್ಲಾಘನೀಯ. ಸ್ವಚ್ಛ ಹಾಗೂ ಆರೋಗ್ಯಕರ ಸಮಾಜ ನಿರ್ಮಾಣದಲ್ಲಿ ಅವರ ಕೊಡುಗೆ ಅಪಾರ. ಅವರ ಪರಿಶ್ರಮವನ್ನು ಗೌರವಿಸುವುದು ನಮ್ಮೆಲ್ಲರ ಕರ್ತವ್ಯ ಎಂದು ಡಾ.ಮಂಜುನಾಥ್ ಅವರು ಹೇಳಿದರು.

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಗೆ ಹೃತ್ಪೂರ್ವಕ ಹುಟ್ಟುಹಬ್ಬದ ಶುಭಾಶಯ ಸಲ್ಲಿಸಿದ ಅವರು, ಗುಜರಾತ್ ಮುಖ್ಯಮಂತ್ರಿಯಾಗಿ 13 ವರ್ಷ ಹಾಗೂ ದೇಶದ ಪ್ರಧಾನಮಂತ್ರಿಯಾಗಿ 12 ವರ್ಷಕ್ಕೂ ಹೆಚ್ಚು ಕಾಲ ನಿರಂತರ ರಾಷ್ಟ್ರಸೇವೆ ಸಲ್ಲಿಸುತ್ತಿರುವ ನರೇಂದ್ರ ಮೋದಿ ಅವರು ಸುಶಾಸನ, ಅಭಿವೃದ್ಧಿ ಮತ್ತು ಜನಕಲ್ಯಾಣದ ಸಂಕಲ್ಪದೊಂದಿಗೆ ಮುನ್ನಡೆಯುತ್ತಿದ್ದಾರೆ. ಅವರಿಗೆ ಉತ್ತಮ ಆರೋಗ್ಯ, ಶಕ್ತಿ ಹಾಗೂ ದೀರ್ಘಾಯುಷ್ಯ ದೊರೆಯಲಿ. ವಿಕಸಿತ, ಬಲಿಷ್ಠ ಹಾಗೂ ಸ್ವಾವಲಂಬಿ ಭಾರತ ನಿರ್ಮಾಣದ ಅವರ ಸಂಕಲ್ಪ ಮತ್ತಷ್ಟು ಯಶಸ್ವಿಯಾಗಲಿ ಎಂದು ಹಾರೈಸಿದರು.

ಈ ಸಂದರ್ಭದಲ್ಲಿ ಬೆಂಗಳೂರು ದಕ್ಷಿಣ ಜಿಲ್ಲಾ ಬಿಜೆಪಿ ಅಧ್ಯಕ್ಷ ಆನಂದಸ್ವಾಮಿ, ಜೆಡಿಎಸ್ ಅಧ್ಯಕ್ಷ ಜಯಮುತ್ತು, ಚನ್ನಪಟ್ಟಣ ತಾಲ್ಲೂಕು ಬಿಜೆಪಿ ಅಧ್ಯಕ್ಷ ಚೇತನ್ ಸೇರಿದಂತೆ NDA ಮೈತ್ರಿಕೂಟದ ಮುಖಂಡರು, ಪದಾಧಿಕಾರಿಗಳು, ಗಣ್ಯರು ಹಾಗೂ ಸಾರ್ವಜನಿಕರು ಹಾಜರಿದ್ದರು.

# ಮೈಸೂರು ದಸರಾ ಉದ್ಘಾಟನೆಗೆ ನ್ಯಾ.ಬಿ.ವಿ.ನಾಗರತ್ನಗೆ ಅವಕಾಶ ನೀಡಿ: ಸಿಎಂಗೆ ಗೂಳಿಗೌಡ ಮನವಿ

- ಮೈಸೂರು ದಸರಾ ಉದ್ಘಾಟನೆಗೆ ಆಹ್ವಾನಿಸುವಂತೆ ಮನವಿ
- ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ಗೆ ಶಾಸಕ ದಿನೇಶ್ ಗೂಳಿಗೌಡ ಪತ್ರ
- ದೇಶದ ಮೊದಲ ಮಹಿಳಾ ಮುಖ್ಯ ನ್ಯಾಯಮೂರ್ತಿ ನ್ಯಾ. ನಾಗರತ್ನ ಹೆಸರನ್ನು ಪರಿಗಣಿಸಲು ಮನವಿ
- ಮಂಡ್ಯದ ಮಗಳಿಗೆ ದಸರಾ ಗೌರವ ನೀಡಲು ಮನವಿ
- ಮಹಿಳಾ ಸಬಲೀಕರಣಕ್ಕೆ ಹೊಸ ಸಂದೇಶ ರವಾನಿಸುವಂತೆ ಇಂಗಿತ



**ಬೆಂಗಳೂರು, ಸೆ.17:** ವಿಶ್ವವಿಖ್ಯಾತ ಮೈಸೂರು ದಸರಾ ಮಹೋತ್ಸವದ ಉದ್ಘಾಟನೆಗೆ ಕರ್ನಾಟಕದ ಹೆಮ್ಮೆಯ ಸುಪುತ್ರಿ ಹಾಗೂ ಸರ್ವೋಚ್ಚ ನ್ಯಾಯಾಲಯದ ನ್ಯಾಯಮೂರ್ತಿ ಬಿ.ವಿ. ನಾಗರತ್ನ ಅವರನ್ನು ಆಹ್ವಾನಿಸಬೇಕೆಂದು ವಿಧಾನ ಪರಿಷತ್ ಶಾಸಕ ಹಾಗೂ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ರಾಜ್ಯ ಉಪಾಧ್ಯಕ್ಷ ದಿನೇಶ್ ಗೂಳಿಗೌಡ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಈ ಸಂಬಂಧ ಅವರು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಸಮಗ್ರ ಮನವಿ ಸಲ್ಲಿಸಿದ್ದಾರೆ.

ಮೈಸೂರು ದಸರಾ ನಾಡಿನ ಕಲೆ, ಸಂಸ್ಕೃತಿ ಮತ್ತು ಪರಂಪರೆಯನ್ನು ಜಗತ್ತಿಗೆ ಪರಿಚಯಿಸುವ ಅತಾರಾಷ್ಟ್ರೀಯ ಉತ್ಸವವಾಗಿದ್ದು, ನಾಡಿನ ಕೀರ್ತಿಯನ್ನು ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ಎತ್ತಿಹಿಡಿದ ಗಣ್ಯರಿಂದ ಉದ್ಘಾಟನೆ ಮಾಡಿಸುತ್ತಾ ಬರಲಾಗುತ್ತಿದೆ. 2027ರ ಸೆಪ್ಟೆಂಬರ್ 25ರಂದು ಭಾರತದ ಪ್ರಥಮ ಮಹಿಳಾ ಮುಖ್ಯ ನ್ಯಾಯಮೂರ್ತಿಯಾಗಿ ಅಧಿಕಾರ ಸ್ವೀಕರಿಸಿ ದೇಶದ ನ್ಯಾಯಾಂಗ ಇತಿಹಾಸದಲ್ಲೇ ನೂತನ ಮೈಲಿಗಲ್ಲು ಸ್ಥಾಪಿಸಲಿರುವ ನ್ಯಾಯಮೂರ್ತಿ ಬಿ.ವಿ. ನಾಗರತ್ನ ಅವರನ್ನು ಈ ಬಾರಿಯ ದಸರಾ ಉದ್ಘಾಟನೆಗೆ ಆಯ್ಕೆ ಮಾಡುವುದು ಅತ್ಯಂತ ಅರ್ಥಪೂರ್ಣ ಎಂದು ಅವರು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

**ತಂದೆಯ ನಂತರ ಮಗಳು: ಅಪರೂಪದ ಐತಿಹಾಸಿಕ ಸಾಧನೆ**

ಮಂಡ್ಯ ಜಿಲ್ಲೆ ಪಾಂಡವಪುರ ತಾಲ್ಲೂಕಿನ ಇಂಗಲಗುಪ್ಪೆ ಮೂಲದವರಾದ ನ್ಯಾಯಮೂರ್ತಿ ಬಿ.ವಿ. ನಾಗರತ್ನ ಅವರು, ಸುಪ್ರೀಂ ಕೋರ್ಟ್‌ನ ಮಾಜಿ ಮುಖ್ಯ ನ್ಯಾಯಮೂರ್ತಿ ದಿವಂಗತ ಇ.ಎಸ್. ವೆಂಕಟರಾಮಯ್ಯ ಅವರ ಪುತ್ರಿ. ತಂದೆಯ ಬಳಿಕ ಮಗಳೂ ಸರ್ವೋಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿಯಾಗುತ್ತಿರುವುದು ಭಾರತೀಯ ನ್ಯಾಯಾಂಗ ವ್ಯವಸ್ಥೆಯಲ್ಲೇ ಪ್ರಪ್ರಥಮ ಹಾಗೂ ಅತ್ಯಂತ ಅಪರೂಪದ ದಾಖಲೆಯಾಗಿದೆ. ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ಸೇವೆ ಸಲ್ಲಿಸಿ ಪ್ರಸ್ತುತ ಸರ್ವೋಚ್ಚ ನ್ಯಾಯಾಲಯದಲ್ಲಿ ನ್ಯಾಯಮೂರ್ತಿಯಾಗಿ ಕಾರ್ಯನಿರ್ವಹಿಸುತ್ತಿರುವ ಇವರು, ಸುಪ್ರೀಂ ಕೋರ್ಟ್‌ನ 'ಕೋರ್ಟ್ಸ್ ಆಫ್ ಇಂಡಿಯಾ' ಪುಸ್ತಕ ರಚನೆ ಹಾಗೂ ಅದರ ಕನ್ನಡ ಅನುವಾದದ ಉಸ್ತುವಾರಿ ಸಮಿತಿ ಅಧ್ಯಕ್ಷರಾಗಿ, ಕರ್ನಾಟಕ ನ್ಯಾಯಾಂಗ ಅಕಾಡೆಮಿ ಮತ್ತು ಬೆಂಗಳೂರು ಮಧ್ಯಸ್ಥಿಕೆ ಕೇಂದ್ರದ ಅಧ್ಯಕ್ಷರಾಗಿಯೂ ಗಣನೀಯ ಸೇವೆ ಸಲ್ಲಿಸಿದ್ದಾರೆ.



**ಮಹಿಳಾ ಸಬಲೀಕರಣಕ್ಕೆ ಮಾದರಿ ಸಂದೇಶ**

ಹಲವು ಜನಪರ ಹಾಗೂ ಐತಿಹಾಸಿಕ ತೀರ್ಪುಗಳ ಮೂಲಕ ಗುರುತಿಸಿಕೊಂಡಿರುವ ನಾಗರತ್ನ ಅವರನ್ನು ದಸರಾ ಉದ್ಘಾಟನೆಗೆ ಆಹ್ವಾನಿಸುವುದರಿಂದ ಮಹಿಳಾ ಸಬಲೀಕರಣಕ್ಕೆ ಮುಂಚೂಣಿಯಲ್ಲಿರುವ ಕರ್ನಾಟಕ ರಾಜ್ಯವು ದೇಶಕ್ಕೆ ಒಂದು ಗಟ್ಟಿಯಾದ ಸಂದೇಶ ನೀಡಿದಂತಾಗುತ್ತದೆ.

ಚಾಮುಂಡಿ ಬೆಟ್ಟದಲ್ಲಿ ನಾಡದೇವತೆ ಶ್ರೀ ಚಾಮುಂಡೇಶ್ವರಿಯ ಸನ್ನಿಧಿಯಲ್ಲಿ ನ್ಯಾಯಾಂಗ ಕ್ಷೇತ್ರದ ಈ ಧೀಮಂತ ವ್ಯಕ್ತಿತ್ವ ನೀಡುವ ಸಂದೇಶವು ನಾಡಹಬ್ಬದ ಘನತೆ ಹಾಗೂ ಮೆರುಗನ್ನು ಇಮ್ಮಡಿಗೊಳಿಸಲಿದೆ. ಆದ್ದರಿಂದ ಅವರ ಅಪರಿಮಿತ ಸೇವೆ ಮತ್ತು ಕೊಡುಗೆಯನ್ನು ಗೌರವಿಸಿ ಉದ್ಘಾಟಕರನ್ನಾಗಿ ಆಹ್ವಾನಿಸಬೇಕೆಂದು ದಿನೇಶ್ ಗೂಳಿಗೌಡ ಮುಖ್ಯಮಂತ್ರಿಗೆ ಕೋರಿದ್ದಾರೆ.

# ಪ್ರಧಾನಿ ನರೇಂದ್ರ ಮೋದಿ ಭಾರತವನ್ನು 4ನೇ ಆರ್ಥಿಕ ಶಕ್ತಿಯನ್ನಾಗಿ ರೂಪಿಸಿದ್ದಾರೆ: ಬೊಮ್ಮಾಯಿ ಶ್ಲಾಘನೆ

**ಹುಬ್ಬಳ್ಳಿ, ಸೆ.17:** ಭಾರತವು ಅತ್ಯಂತ ಕಷ್ಟದ ಸ್ಥಿತಿಯಲ್ಲಿದ್ದಾಗ ಪ್ರಧಾನಿ ನರೇಂದ್ರ ಮೋದಿ ಅವರು ದೇಶದ ಚುಕ್ಕಾಣಿ ಹಿಡಿದು, ಇಂದು ಭಾರತವನ್ನು ಅತ್ಯಂತ ಪ್ರಬಲ ರಾಷ್ಟ್ರವನ್ನಾಗಿ ಹಾಗೂ ಜಗತ್ತಿನ 4ನೇ ಆರ್ಥಿಕ ಶಕ್ತಿಯನ್ನಾಗಿ ರೂಪಿಸಿದ್ದಾರೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಬಣ್ಣಿಸಿದರು

ಹುಬ್ಬಳ್ಳಿಯಲ್ಲಿ ಮಾಧ್ಯಮ ಹೇಳಿಕೆ ನೀಡಿರುವ ಅವರು, ದೇಶದ ನೆಚ್ಚಿನ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ತಮ್ಮ 76ನೇ ವರ್ಷದ ಹುಟ್ಟುಹಬ್ಬವನ್ನು ಆಚರಿಸಿಕೊಂಡಿದ್ದು, ದೇಶಾದ್ಯಂತ ಅವರಿಗೆ ಶುಭಾಶಯಗಳ ಮಹಾಪೂರವೇ ಹರಿದುಬರುತ್ತಿದೆ. ಪ್ರಧಾನಿ ನರೇಂದ್ರ ಮೋದಿಯವರಿಗೆ ದೇಶವ್ಯಾಪಿ 130 ಕೋಟಿ ಜನರ ಆಶೀರ್ವಾದ ಸಿಗುತ್ತಿದೆ. ದೇಶದಾದ್ಯಂತ ಎಲ್ಲ ದೇವಸ್ಥಾನಗಳಲ್ಲಿ ಪೂಜೆಗಳು ನಡೆಯುತ್ತಿವೆ ಮತ್ತು ಸಾಯಂಕಾಲ ದೀಪ ಬೆಳಗುವ ಕಾರ್ಯಕ್ರಮದೊಂದಿಗೆ ಒಂದು ತಿಂಗಳು 'ಸೇವಾ ಸಂಕಲ್ಪ' ಕಾರ್ಯಕ್ರಮ ವನ್ನು ಹಮ್ಮಿಕೊಳ್ಳಲು ದೃಢ ಸಂಕಲ್ಪ ಮಾಡಲಾಗಿದೆ ಎಂದು ತಿಳಿಸಿದರು.

**ಕಷ್ಟದ ಪರಿಸ್ಥಿತಿಯಿಂದ ಭಾರತವನ್ನು ಉತ್ತುಂಗಕ್ಕೆ:**

ಭಾರತವು ಅತ್ಯಂತ ಕಷ್ಟದ ಸ್ಥಿತಿಯಲ್ಲಿದ್ದಾಗ ಆರ್ಥಿಕ, ಸಾಮಾಜಿಕವಾಗಿ ಎಲ್ಲ ರಂಗಗಳಲ್ಲೂ ಹಿಂದುಳಿದಿದ್ದಾಗ ಪ್ರಧಾನಿ ಮೋದಿ ಅವರು ದೇಶದ ಚುಕ್ಕಾಣಿ ಹಿಡಿದು, ಇಂದು ಭಾರತವನ್ನು ಅತ್ಯಂತ ಪ್ರಬಲ ರಾಷ್ಟ್ರವನ್ನಾಗಿ ಹಾಗೂ ಜಗತ್ತಿನ 4ನೇ ಆರ್ಥಿಕ ಶಕ್ತಿಯನ್ನಾಗಿ ರೂಪಿಸಿದ್ದಾರೆ ಎಂದು ಬಣ್ಣಿಸಿದರು. ಬಡತನದಿಂದ ಬಳಲುತ್ತಿದ್ದ ಸುಮಾರು 25 ಕೋಟಿ ಜನರನ್ನು ಬಡತನದಿಂದ ನಿರ್ಮೂಲನೆ ಮಾಡುವಲ್ಲಿ ಅವರು ಧೀರ ಸಾಹಸವನ್ನು ಮೆರೆದಿದ್ದಾರೆ ಎಂದರು.

**'ಸಬ್ ಕಾ ಸಾಥ್, ಸಬ್ ಕಾ ವಿಕಾಸ್':**

'ಸಬ್ ಕಾ ಸಾಥ್, ಸಬ್ ಕಾ ವಿಕಾಸ್', 'ಸಬ್ ಕಾ ಪ್ರಯಾಸ್' ಮಂತ್ರದೊಂದಿಗೆ 'ಏಕ್ ಭಾರತ್, ಶ್ರೇಷ್ಠ ಭಾರತ್' ನಿರ್ಮಾಣಕ್ಕೆ ಪ್ರಧಾನಿಯವರು ಶ್ರಮಿಸುತ್ತಿದ್ದಾರೆ. ಮುಂಬರುವ ದಿನಗಳಲ್ಲಿ 'ಆತ್ಮನಿರ್ಭರ ಭಾರತ' ಹಾಗೂ 2047ರ ವೇಳೆಗೆ 'ವಿಕಸಿತ ಭಾರತ' ನಿರ್ಮಾಣ ಮಾಡುವ ಅವರ ಸಂಕಲ್ಪವನ್ನು ಈಡೇರಿಸಲು ನಾವೆಲ್ಲರೂ ಕೈಜೋಡಿಸಬೇಕು ಎಂದು ಬಸವರಾಜ ಬೊಮ್ಮಾಯಿ ಕರೆ ನೀಡಿದರು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

ಸೆಪ್ಟಂಬರ್ 18 2026 ಶುಕ್ರವಾರ

## ಒಳಪುಟಗಳಲ್ಲಿ

ಯುಪಿಐ ಪಾವತಿಗೆ ಶುಲ್ಕ: ಪಿಕ್‌ಪಾಕೆಟ್‌ನಲ್ಲಿ ಕೇಂದ್ರದ ಸಚಿವರಿಗೆ ಪಿಎಚ್‌ಡಿ-ಸಿಎಂ ಡಿ.ಕೆ.ಶಿವಕುಮಾರ್ ವ್ಯಂಗ್ಯ - ಪು.4

ಜಿಬಿಎನಲ್ಲಿ ಎ-ಖಾತೆ ಪರಿವರ್ತನೆ: ಪಾಲಿಕೆಗಳಿಗೆ 3 ತಿಂಗಳಲ್ಲಿ 58 ಕೋಟಿ ರೂ. ಆದಾಯ - ಪು.5

ಬಳ್ಳಾರಿಯಲ್ಲಿ ವಿಜೃಂಭಣೆಯ ವಿಶ್ವಕರ್ಮ ಜಯಂತಿ ಕರಕುಶಲದ ಜೊತೆ ಶಿಕ್ಷಣವೂ ಅನಿವಾರ್ಯ: ಲಿಡ್ಕರ್ ಅಧ್ಯಕ್ಷ ಮುಂಡರಗಿ ನಾಗರಾಜ

# ಭಾರತವನ್ನು ಜಾಗತಿಕ ಚಿಪ್ ತಯಾರಿಕಾ ಕೇಂದ್ರವಾಗಿಸುವ ಗುರಿ: ಪ್ರಧಾನಿ ಮೋದಿ



**ನವದೆಹಲಿಯ ಯಶೋಭೂಮಿಯ ಕನ್ವೆನ್ಷನ್ ಸೆಂಟರ್‌ನಲ್ಲಿ ಸೆಮಿಕಾನ್ ಇಂಡಿಯಾ-2026ಕ್ಕೆ ಚಾಲನೆ**

**ನವದೆಹಲಿ, ಸೆ.17:** ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಗುರುವಾರ ನವದೆಹಲಿಯ ಯಶೋಭೂಮಿ ಕನ್ವೆನ್ಷನ್ ಸೆಂಟರ್‌ನಲ್ಲಿ SEMICON India-2026 ಸಮಾವೇಶಕ್ಕೆ ಚಾಲನೆ ನೀಡಿದರು. ಸೆಪ್ಟೆಂಬರ್ 17ರಿಂದ 19ರವರೆಗೆ ನಡೆಯಲಿರುವ ಸಮಾವೇಶದ ಈ ವರ್ಷದ ಧ್ಯೇಯವಾಕ್ಯ Silicon to Systems: Building the Ecosystem ಆಗಿದೆ.

ಸೆಮಿಕಂಡಕ್ಟರ್ ಕ್ಷೇತ್ರದಲ್ಲಿ ಭಾರತವನ್ನು ಜಾಗತಿಕವಾಗಿ ಪ್ರಮುಖ ತಯಾರಿಕಾ ತಾಣವನ್ನಾಗಿ ರೂಪಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳನ್ನು ಮೋದಿ ಪ್ರಸ್ತಾಪಿಸಿದರು. ಭಾರತವು ಚಿಪ್‌ಗಳ ಬಳಕೆಯ ಪ್ರಮುಖ ಮಾರುಕಟ್ಟೆಯಿಂದ ಚಿಪ್ ವಿನ್ಯಾಸ, ತಯಾರಿಕಾ, ಪ್ಯಾಕೇಜಿಂಗ್, ಎಲೆಕ್ಟ್ರಾನಿಕ್ಸ್ ಮತ್ತು ಸಂಪೂರ್ಣ ಸೆಮಿಕಂಡಕ್ಟರ್ ಮೌಲ್ಯ ಸರಪಳಿಯ ಪ್ರಮುಖ ಭಾಗವಾಗುವತ್ತ ಸಾಗುತ್ತಿದೆ ಎಂದು ಹೇಳಿದರು.

ಸಮಾವೇಶದಲ್ಲಿ ಪ್ರಧಾನಿ ವಿವಿಧ ಪ್ರದರ್ಶನ ಮಳಿಗೆಗಳಿಗೆ ಭೇಟಿ ನೀಡಿ ಉದ್ಯಮ ಪ್ರತಿನಿಧಿಗಳು, ಸಂಶೋಧಕರು, ಸ್ಟಾರ್ಟ್‌ಅಪ್‌ಗಳು ಹಾಗೂ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು. ವಿದ್ಯಾರ್ಥಿಗಳು ಮತ್ತು ಯುವ ಪ್ರತಿಭೆಗಳಿಗೆ ಸೆಮಿಕಂಡಕ್ಟರ್ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ಹಾಗೂ ಹೊಸ ಆವಿಷ್ಕಾರಗಳಿಗೆ ಅವಕಾಶ ಕಲ್ಪಿಸುವುದಕ್ಕೂ ಒತ್ತು ನೀಡಲಾಗಿದೆ.

SEMICON India-2026ರಲ್ಲಿ 600ಕ್ಕೂ ಹೆಚ್ಚು ಕಂಪನಿಗಳು, 52 ದೇಶಗಳ ಪ್ರತಿನಿಧಿಗಳು, 150ಕ್ಕೂ ಹೆಚ್ಚು ಭಾಷಣಕಾರರು ಭಾಗವಹಿಸುತ್ತಿದ್ದಾರೆ. ಜಪಾನ್, ದಕ್ಷಿಣ ಕೊರಿಯಾ, ಮಲೇಷ್ಯಾ, ನೆದರ್‌ಲ್ಯಾಂಡ್ಸ್, ಸಿಂಗಾಪುರ ಮತ್ತು ಸ್ವೀಡನ್ ಸೇರಿದಂತೆ ಆರು ದೇಶಗಳ ಪೆವಿಲಿಯನ್‌ಗಳು, 12 ರಾಜ್ಯಗಳ ಮಳಿಗೆಗಳು, ಸ್ಟಾರ್ಟ್‌ಅಪ್ ಪೆವಿಲಿಯನ್, ವಿದ್ಯಾರ್ಥಿಗಳ ಹ್ಯಾಕಥಾನ್ ಹಾಗೂ ಕೌಶಲ್ಯಾಭಿವೃದ್ಧಿ ವಿಭಾಗಗಳಿವೆ.

ಸಮಾವೇಶದ ವೇಳೆ ಪಂಜಾಬ್‌ನ ಮೊಹಾಲಿಯ CDIL Semiconductor ATMP ಘಟಕ ಮತ್ತು ಗುಜರಾತ್‌ನ ಪಾಲ್ಸಾನಾದ Suchi Semicon OSAT ಘಟಕದಲ್ಲಿ ವಾಣಿಜ್ಯ ತಯಾರಿಕೆ ಆರಂಭಿಸುವುದಕ್ಕೂ ಪ್ರಧಾನಿ ಚಾಲನೆ ನೀಡಿದರು. ಇದನ್ನು ಭಾರತದ ಸೆಮಿಕಂಡಕ್ಟರ್ ಉತ್ಪಾದನಾ ಸಾಮರ್ಥ್ಯ ವಿಸ್ತರಣೆಯ ಪ್ರಮುಖ ಹೆಜ್ಜೆಯಾಗಿ ಪರಿಗಣಿಸಲಾಗಿದೆ.

ಸೆಮಿಕಂಡಕ್ಟರ್ ಕ್ಷೇತ್ರದಲ್ಲಿ ಭಾರತವು ನೀತಿ ರೂಪಿಸುವ ಹಂತದಿಂದ ವಾಸ್ತವಿಕ ಕಾರ್ಖಾನೆ ತಯಾರಿಕೆಯ ಹಂತಕ್ಕೆ ಪ್ರವೇಶಿಸಿದೆ ಎಂದು ಮೋದಿ ಒತ್ತಿ ಹೇಳಿದರು. ಸಂಶೋಧನೆ ಮತ್ತು ಅಭಿವೃದ್ಧಿಯಲ್ಲಿ ಖಾಸಗಿ ವಲಯದ ಹೆಚ್ಚಿನ ಹೂಡಿಕೆಯ ಅಗತ್ಯವನ್ನೂ ಅವರು ಪ್ರತಿಪಾದಿಸಿದರು.

ಸೆಪ್ಟೆಂಬರ್ 17ರಿಂದ 19ರವರೆಗೆ ನಡೆಯುವ ಈ ಸಮಾವೇಶದಲ್ಲಿ ಜಾಗತಿಕ ಚಿಪ್ ಉದ್ಯಮ, ಹೂಡಿಕೆದಾರರು, ಸಂಶೋಧಕರು, ನೀತಿ ನಿರೂಪಕರು, ಸ್ಟಾರ್ಟ್‌ಅಪ್‌ಗಳು, ಶಿಕ್ಷಣ ಸಂಸ್ಥೆಗಳು ಮತ್ತು ವಿದ್ಯಾರ್ಥಿಗಳು ಒಂದೇ ವೇದಿಕೆಯಲ್ಲಿ ಸೇರಿ ಭಾರತದ ಸೆಮಿಕಂಡಕ್ಟರ್ ಹಾಗೂ ಎಲೆಕ್ಟ್ರಾನಿಕ್ಸ್ ಪರಿಸರ ವ್ಯವಸ್ಥೆಯ ವಿಸ್ತರಣೆ ಕುರಿತು ಚರ್ಚಿಸಲಿದ್ದಾರೆ.

### ಸ್ಯಾಮ್ಸಂಗ್, ಎರಿಕ್ಸನ್ ಮತ್ತಿತರ ಕಂಪನಿಗಳ ಜತೆ ಎಂ.ಬಿ. ಪಾಟೀಲ್ ಚರ್ಚೆ



**ನವದೆಹಲಿ, ಸೆ.17:** ಸೆಮಿಕಾನ್ ಇಂಡಿಯಾ–2026 ಸಮಾವೇಶದ ಮೊದಲ ದಿನವಾದ ಗುರುವಾರ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಅವರು ಮಲೇಷ್ಯಾ ಮತ್ತು ನೆದರ್‌ಲೆಂಡ್ಸ್ ದೇಶಗಳ ಹೂಡಿಕೆದಾರರೊಂದಿಗೆ ಮಾತುಕತೆ ನಡೆಸಿದರು. ಜತೆಗೆ ಯೂಲರ್ ಮೋಟಾರ್ಸ್, ನೆಕ್ಸ್‌ಪೀರಿಯಾ, ಸ್ಯಾಮ್‌ಸಂಗ್ ಎಲೆಕ್ಟ್ರಾನಿಕ್ಸ್, ಎರಿಕ್ಸನ್, ಸಿ.ಜಿ.ಸೆಮಿ, ಆಕ್ಸಿರೋ ಮತ್ತು ಲಿಂಡೆ ಕಂಪನಿಗಳೊಂದಿಗೂ ಅವರು ವಿಸ್ತೃತ ಮಾತುಕತೆ ನಡೆಸಿದರು. ಸಮಾವೇಶದ ಎರಡನೆಯ ದಿನವಾದ ಶುಕ್ರವಾರವೂ ಹಲವು ಕಂಪನಿಗಳೊಂದಿಗೆ ಮಾತುಕತೆ ನಿಗದಿಯಾಗಿದೆ. ಈ ಬಗ್ಗೆ ಮಾಧ್ಯಮ ಪ್ರಕಟಣೆ ನೀಡಿರುವ ಅವರು, ದೆಹಲಿ ಮೂಲದ ಯೂಲರ್ ಮೋಟಾರ್ಸ್ ವಿದ್ಯುತ್ ಚಾಲಿತ ತ್ರಿಚಕ್ರ ಮತ್ತು ಚತುಶ್ಚಕ್ರ ವಾಹನಗಳನ್ನು ರಾಜ್ಯದಲ್ಲಿ ತಯಾರಿಸುವ ಯೋಜನೆಯನ್ನು ಮುಂದಿಟ್ಟಿದೆ. ನಾವು ಇದಕ್ಕೆ ವಿಜಯಪುರ ಸೂಕ್ತ ಸ್ಥಳವೆಂದು ಹೇಳಿದ್ದೇವೆ. ಇದು ಈಡೇರಿದರೆ ಸರಕು ಸಾಗಣೆ ಮತ್ತು ನಗರ ಪ್ರದೇಶಗಳ ವ್ಯಾಪ್ತಿಯಲ್ಲಿನ ವಾಣಿಜ್ಯೋದ್ದೇಶದ ಸಂಚಾರ ಎರಡೂ ಸುಗಮವಾಗಲಿವೆ. ಅಲ್ಲದೆ, ತನ್ನ ಅಗತ್ಯಗಳಿಗೆ ಅನುಗುಣವಾಗಿ ಕೌಶಲ್ಯಾಭಿವೃದ್ಧಿ ತರಬೇತಿ ಕೊಡಲಿದೆ ಎಂದಿದ್ದಾರೆ. ನಮ್ಮ ದೇಶದ್ದೇ ಆದ ಎಲ್ ಟಿ ಫುಡ್ಸ್ ಸಮೂಹವು ಬ್ರ್ಯಾಂಡೆಡ್ ಬಾಸ್ಮತಿ ಅಕ್ಕಿ, ವಿಶೇಷವಾದ ಅಕ್ಕಿ, ಸಾವಯವ ಪದಾರ್ಥಗಳ ವಹಿವಾಟಿಗೆ ಹೆಸರಾಗಿದೆ, ಇದು ರಾಯಚೂರಿನಲ್ಲಿ ಈಗಾಗಲೇ ತನ್ನ ಘಟಕ ಹೊಂದಿರುವ ಕಂಪನಿಯು ಭತ್ತ ಬೆಳೆಯುವ ಪ್ರದೇಶದಲ್ಲಿ ಬಂಡವಾಳ ಹೂಡಲು ಮುಂದೆ ಬಂದಿದ್ದು, ನಮ್ಮಲ್ಲಿ ವಿಶೇಷವಾಗಿ ಬೆಳೆಯುವ ಸೋನಾ ಮಸೂರಿ ಮತ್ತು ಕೋಲಂ ಅಕ್ಕಿಯ ಕಡೆಗೆ ಗಮನ ಹರಿಸಿದೆ. ಇಂತಹ ಯೋಜನೆಯಿಂದ ರೈತರಿಗೆ ಅನುಕೂಲವಾಗುವ ಜತೆಗೆ ಇಳುವರಿ ಹೆಚ್ಚಳದ ಲಾಭ ತಂದುಕೊಡಲಿದೆ ಎಂದು ಹೇಳಿದ್ದಾರೆ. ಸ್ಯಾಮ್ಸಂಗ್ ಕಂಪನಿಯು ರಾಜ್ಯದಲ್ಲಿ ಸಂಶೋಧನೆ ಮತ್ತು ಅಭಿವೃದ್ಧಿ ಕೇಂದ್ರದ ಜತೆಗೆ ಸೆಮಿಕಂಡಕ್ಟರ್ ಕ್ಷೇತ್ರದಲ್ಲಿ ನೆಲೆಯೂರಿದೆ. ಕಂಪನಿಯು ರಾಜ್ಯದಲ್ಲಿ ತನ್ನ ತಯಾರಿಕಾ ಸ್ಥಾವರನ್ನು ಸ್ಥಾಪಿಸಬೇಕು ಎನ್ನುವ ವಿಚಾರವನ್ನು ನಾವು ಮುಂದಿಟ್ಟಿದ್ದೇವೆ. ಅವರಿಂದ ಸಕಾರಾತ್ಮಕ ಸ್ಪಂದನ ಸಿಗುವ ನಿರೀಕ್ಷೆ ಇದೆ ಎಂದು ತಿಳಿಸಿದ್ದಾರೆ. ಕರ್ನಾಟಕ ಸರ್ಕಾರದ ಕೈಗಾರಿಕಾ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್ ಮತ್ತು ಆಯುಕ್ತೆ ಖುಷ್ಬೂ ಗೋಯೆಲ್ ಸಚಿವರೊಂದಿಗೆ ತೆರಳಿದ್ದಾರೆ.

# ಪ್ರಾಥಮಿಕ ಶಾಲೆ ಶಿಕ್ಷಕರಿಗಿನ್ನು 6 ತಿಂಗಳ ವಿಶೇಷ ಬ್ರಿಡ್ಜ್ ಕೋರ್ಸ್




**ನವದೆಹಲಿ, ಸೆ.17:** ಶೈಕ್ಷಣಿಕ ಗುಣಮಟ್ಟಕ್ಕೆ ಪ್ರಾಮುಖ್ಯತೆ ನೀಡುತ್ತಿರುವ ಕೇಂದ್ರ ಸರ್ಕಾರ, ಇದೀಗ ಪ್ರಾಥಮಿಕ ಶಿಕ್ಷಕರಿಗೆ ಹೊಸದಾಗಿ 6 ತಿಂಗಳ 'ಬ್ರಿಡ್ಜ್ ಕೋರ್ಸ್' ಜಾರಿಗೊಳಿಸಿದೆ.

■ **ತಳಮಟ್ಟದಿಂದಲೇ ಶೈಕ್ಷಣಿಕ ಗುಣಮಟ್ಟ ವೃದ್ಧಿಗೆ ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಮಹತ್ತರ ಹೆಜ್ಜೆ**

ಮಕ್ಕಳಿಗೆ ಪ್ರಾಥಮಿಕ ಹಂತದಿಂದಲೇ ಗುಣಮಟ್ಟದ ಶಿಕ್ಷಣ ಒದಗಿಸುವಲ್ಲಿ ಮಹತ್ತರ ಹೆಜ್ಜೆ ಇಟ್ಟಿರುವ ಕೇಂದ್ರ ಶಿಕ್ಷಣ ಸಚಿವ ಪ್ರಲ್ಹಾದ ಜೋಶಿ ಅವರು ಕೋರ್ಸ್ ಗೆ ಚಾಲನೆ ನೀಡಿದ್ದಾರೆ. ಅಲ್ಲದೆ, ಶೈಕ್ಷಣಿಕ ಗುಣಮಟ್ಟ ಹೆಚ್ಚಿಸಲು ಈಗಾಗಲೇ ಸೇವೆಯಲ್ಲಿರುವ ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಬ್ರಿಡ್ಜ್ ಕೋರ್ಸ್ ಸಮಗ್ರ ತರಬೇತಿ ಒದಗಿಸಲಿದೆ ಎಂದೂ ಪ್ರತಿಪಾದಿಸಿದ್ದಾರೆ.

ಪ್ರಾಥಮಿಕ ಹಂತದಲ್ಲಿ ಬೋಧನೆಗೆ ಅನುವಾಗುವಂತೆ ಪ್ರಾಥಮಿಕ ಶಿಕ್ಷಕರ ಶಿಕ್ಷಣದಲ್ಲಿ (PTE) ಆರು ತಿಂಗಳ ಅವಧಿಯ ಈ ಪ್ರಮಾಣಪತ್ರ (ಬ್ರಿಡ್ಜ್) ಕೋರ್ಸ್ ಅನ್ನು ಬಿ.ಇಡಿ. ಪದವಿಧರರು ಮತ್ತು ಸೇವಾನಿರತ ಪ್ರಾಥಮಿಕ ಶಾಲಾ ಶಿಕ್ಷಕರಿಗಾಗಿ ವಿಶೇಷವಾಗಿ ರೂಪಿಸಲಾಗಿದೆ. ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಓಪನ್ ಸ್ಕೂಲಿಂಗ್ ಮೂಲಕ ಶಿಕ್ಷಕರಿಗಾಗಿ ಈ ಬ್ರಿಡ್ಜ್ ಕೋರ್ಸ್ ಜಾರಿ ಗೊಳಿಸುತ್ತಿದ್ದು, ಮಕ್ಕಳ ವಿಕಾಸಕ್ಕೆ ಸೂಕ್ತ ಬೋಧನಾ ಪದ್ಧತಿ ಅಳವಡಿಕೆಗೆ ಶಿಕ್ಷಕರನ್ನು ಸಜ್ಜು ಗೊಳಿಸುವುದು ಹಾಗೂ ಶೈಕ್ಷಣಿಕ ಗುಣಮಟ್ಟ ಬಲಪಡಿಸುವ ಗುರಿ ಹೊಂದಿದೆ.

**ಕೋರ್ಸ್ ವಿಶೇಷ:** ಶೈಕ್ಷಣಿಕ ಕಲಿಕೆ, ಕನಿಷ್ಠ 10 ದಿನಗಳ ಆನ್‌ಲೈನ್ ಸಂಪರ್ಕ ತರಗತಿಗಳು ಹಾಗೂ ಕನಿಷ್ಠ 20 ದಿನಗಳ ಶಾಲಾ–ಆಧಾರಿತ ಅನುಭವದೊಂದಿಗೆ ಶಿಕ್ಷಕರಿಗೆ ಬೋಧನಾ ಸಾಮರ್ಥ್ಯವನ್ನು ವೃದ್ಧಿಸಲಿದೆ. ಬ್ರಿಡ್ಜ್ ಕೋರ್ಸ್. ಶಿಕ್ಷಕರಿಗೆ ಚಿಕ್ಕ ಮಕ್ಕಳ ವೈವಿಧ್ಯಮಯ ಕಲಿಕಾ ಅಗತ್ಯಗಳನ್ನು ಪೂರೈಸುವುದಲ್ಲದೆ, 6 ಸೈದ್ಧಾಂತಿಕ ಕೋರ್ಸ್‌ಗಳು ಮತ್ತು ಶಾಲಾ–ಆಧಾರಿತ ಪ್ರಾಯೋಗಿಕ ತರಬೇತಿ ಸಹ ಒಳಗೊಂಡಿದೆ.

ಸುಪ್ರೀಂ ಕೋರ್ಟ್ 2024ರ ತೀರ್ಪೊಂದರಲ್ಲಿ D.El.Ed ಅರ್ಹತೆ ಹೊಂದಿಲ್ಲದಿದ್ದರೂ ಪ್ರಾಥಮಿಕ ಶಾಲಾ ಶಿಕ್ಷಕರಾಗಿ ನೇಮಕಗೊಂಡವರಿಗೆ 'ಬ್ರಿಡ್ಜ್ ಕೋರ್ಸ್' ರೂಪಿಸಲು NCTEಗೆ ಅಧಿಕಾರ ನೀಡಿತ್ತು. ಅದರಂತೆ 28 ಜೂನ್ 2018 ಮತ್ತು 11 ಆಗಸ್ಟ್ 2023ರ ನಡುವೆ B.Ed. ಪದವಿಯೊಂದಿಗೆ ಪ್ರಾಥಮಿಕ ಹಂತದಲ್ಲಿ (1 ರಿಂದ 5 ನೇ ತರಗತಿ) ಬೋಧಿಸಲು ನೇಮಕಗೊಂಡ ಸೇವೆಯಲ್ಲಿರುವ ಪ್ರಾಥಮಿಕ ಶಾಲಾ ಶಿಕ್ಷಕರಿಗಾಗಿ ಈ ಬ್ರಿಡ್ಜ್ ಕೋರ್ಸ್ ಅನ್ನು ವಿನ್ಯಾಸಗೊಳಿಸಲಾಗಿದೆ.

**ಹಿಂದಿ, ಇಂಗ್ಲಿಷ್ ಬೋಧನಾ ಮಾಧ್ಯಮ:** NCTE ಗೆಜೆಟ್ ಅಧಿಸೂಚನೆ F.No. NCTE-Reg. 012/2018ರ ಅಡಿ ನೇಮಕಾತಿ ರಕ್ಷಣೆ ಪಡೆದ ಶಿಕ್ಷಕರಿಗಾಗಿ ಈ ಕೋರ್ಸ್ ಅನ್ನು ನಿರ್ದಿಷ್ಟವಾಗಿ ರೂಪಿಸಲಾಗಿದೆ. ಹಿಂದಿ ಮತ್ತು ಇಂಗ್ಲಿಷ್ ಭಾಷೆಗಳಲ್ಲಿ ಬೋಧನಾ ಮಾಧ್ಯಮವಿರುತ್ತದೆ. ಆದಾಗ್ಯೂ, ಶಿಕ್ಷಕರು ಸಂವಿಧಾನದ 8ನೇ ಅನುಸೂಚಿಯಲ್ಲಿ ಪಟ್ಟಿ ಮಾಡಲಾದ 22 ಅಧಿಕೃತ ಭಾಷೆಗಳ ಪೈಕಿ ಯಾವುದಾದರೂ ಒಂದರಲ್ಲಿ ಬರೆಯಲು ಅವಕಾಶವಿರುತ್ತದೆ.

**ಮುಕ್ತ–ದೂರಶಿಕ್ಷಣ ಮುಖೇನ;** ಮುಕ್ತ ಮತ್ತು ದೂರಶಿಕ್ಷಣ ವಿಧಾನದ ಮೂಲಕವೂ ಈ ಬ್ರಿಡ್ಜ್ ಕೋರ್ಸ್ ನಡೆಸಲಾಗುತ್ತಿದ್ದು, ಸಂಪರ್ಕ ಕಾರ್ಯಕ್ರಮ, ಶಾಲಾ–ಆಧಾರಿತ ಪ್ರಾಯೋಗಿಕ ತರಬೇತಿ, ವೀಡಿಯೊ ಟ್ಯುಟೋರಿಯಲ್‌ಗಳು, ಇ–ಕಲಿಕಾ ಸಾಮಗ್ರಿ ಮತ್ತು ಡಿಜಿಟಲ್ ವೇದಿಕೆಗಳನ್ನು ಒಳಗೊಂಡಿರುತ್ತದೆ.

**ಬ್ರಿಡ್ಜ್ ಕೋರ್ಸ್‌ಗೆ ಪ್ರವೇಶ:** NIOS ನ ಅಧಿಕೃತ ಪೋರ್ಟಲ್ (https://bridge.nios.ac.in) ಮೂಲಕ ಆನ್‌ಲೈನ್‌ನಲ್ಲಿ ನೋಂದಣಿ ಅವಕಾಶವಿದ್ದು, ಅರ್ಹ ಶಿಕ್ಷಕರು ಅಗತ್ಯ ದಾಖಲೆ ಅಪ್ಲೋಡ್, ನೋಂದಣಿ ಮಾಡಬಹುದು.

# ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ದಶ ಯೋಜನೆ: ಸಿಎಂ ಡಿ.ಕೆ.ಶಿವಕುಮಾರ್

### ಕಲ್ಯಾಣ ಕರ್ನಾಟಕ ಉತ್ಸವದಲ್ಲಿ ಘೋಷಣೆ



**ಕಲಬುರಗಿ, ಸೆ.17:** 50 ಸಾವಿರ ನಿವೇಶನ ಹಂಚಿಕೆ, 30 ಎಕರೆ ಪ್ರದೇಶದಲ್ಲಿ ಐಟಿ ಪಾರ್ಕ್ ಅಭಿವೃದ್ಧಿ, ಕೀಡೆಗೆ ಪ್ರೋತ್ಸಾಹ ನೀಡಲು ಹಡಗಿಲ ಹಾರುತಿ ಗ್ರಾಮದಲ್ಲಿ ಕ್ರೀಡಾ ನಗರ ಸ್ಥಾಪನೆ, ಕೋಟಿ ವೃಕ್ಷ ಅಭಿಯಾನ ಸೇರಿ ಕಲ್ಯಾಣ ಕರ್ನಾಟಕ ವಿಮೋಚನಾ ದಿನದ ಅಂಗವಾಗಿ ಕಲ್ಯಾಣ ಕರ್ನಾಟಕ ಅಭಿವೃದ್ಧಿಗೆ ಸಿಎಂ ಡಿ.ಕೆ.ಶಿವಕುಮಾರ್ 10 ಹೊಸ ಕಾರ್ಯಕ್ರಮಗಳನ್ನು ಘೋಷಿಸಿದರು.

ಕಲಬುರಗಿಯಲ್ಲಿ 79ನೇ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ ಅಂಗವಾಗಿ ಧ್ವಜಾರೋಹಣ ನೆರವೇರಿಸಿ ಮಾತನಾಡಿ, ಕಲ್ಯಾಣ ಕರ್ನಾಟಕ ಭಾಗದಲ್ಲಿ ಗಂಭೀರ ಸಮಸ್ಯೆಯಾದ ರಕ್ತಹೀನತೆ ಆರೋಗ್ಯ ತಡೆ ಯೋಜನೆ, ಅಪರಾಧ ತಡೆ, ಸಂಚಾರ ನಿಯಂತ್ರಣ ಕ್ಕೆ ಎಐ ಆಧಾರಿತ ಸಿಸಿಟಿವಿ ಕ್ಯಾಮೆರಾ, ಸೇಡಂ ರಸ್ತೆಯ ರಿಂಗ್ ರೋಡ್‌ನಲ್ಲಿ ಮೇಲ್ಸೇತುವೆ ನಿರ್ಮಾಣ, ಹೊಸ ಪೆರಿಫೆರಲ್ ರಿಂಗ್ ರಸ್ತೆಗೆ ಯೋಜನಾ ವರದಿ, ಸ್ಟಾರ್ಟ್‌ಅಪ್‌ಗಳು ಮತ್ತು ಯುವ ಉದ್ಯಮಿಗಳನ್ನು ಉತ್ತೇಜಿಸಲು ಕ್ರಿಯಾ (KRIYA - Kalaburagi Research, Innovation and Youth Accelerator) ಸ್ಥಾಪನೆ, ಕಲ್ಯಾಣ ಕರ್ನಾಟಕ ಎಕಾನಮಿ ಮಿಷನ್ ಸ್ಥಾಪನೆ, ಜೈವಿಕ ಆರ್ಥಿಕ ಮಿಷನ್, 50 ಕೋಟಿ ವೆಚ್ಚದಲ್ಲಿ ಪ್ರವಾಸೋದ್ಯಮ ತಾಣಗಳ ಅಭಿವೃದ್ಧಿ ಈ ಹೊಸ ಘೋಷಣೆಗಳಲ್ಲಿ ಒಳಗೊಂಡಿದೆ ಎಂದರು.

**ಬೆಂಗಳೂರು ಕರ್ನಾಟಕದ ಕಿರೀಟ. ಕಲ್ಯಾಣ ಕರ್ನಾಟಕ ಶಕ್ತಿಪೀಠ:** ಬೆಂಗಳೂರು ಕರ್ನಾಟಕದ ಕಿರೀಟ, ಕಲ್ಯಾಣ ಕರ್ನಾಟಕ ಶಕ್ತಿಪೀಠ. ಕಲ್ಯಾಣ ಕರ್ನಾಟಕದ ಕಲ್ಯಾಣವೇ ನಮ್ಮ ಆದ್ಯತೆ. ಕಲ್ಯಾಣ ಕರ್ನಾಟಕದಲ್ಲಿ ತುಂಗಭದ್ರಾ, ಕೃಷ್ಣೆಯಂತೆ ಅಭಿವೃದ್ಧಿ ತುಂಬಿ ಹರಿಯುತ್ತಿದೆ. ಈ ಭಾಗದ ಅಭಿವೃದ್ಧಿಗೆ ಕಾಂಗ್ರೆಸ್ ಸರ್ಕಾರ ಪ್ರತಿವರ್ಷ 5 ಸಾವಿರ ಕೋಟಿ ನೀಡಿದೆ. ಕಲ್ಯಾಣ ಕರ್ನಾಟಕ ಅಭಿವೃದ್ಧಿಯಿಂದ ಸಮಗ್ರ ಕರ್ನಾಟಕದ ಪ್ರಗತಿ ಎಂದು ಹೇಳಿದರು.

**ಕಲ್ಯಾಣ ಕರ್ನಾಟಕದ ವಿಮೋಚನೆಗೆ ಕಾಂಗ್ರೆಸ್ ಪಕ್ಷ ರಕ್ತ, ಬೆವರು ಹರಿಸಿದೆ:** ನಮ್ಮೊಂದಿಗೆ ನೀವು, ನಿಮ್ಮೊಂದಿಗೆ ನಾವು ಸೇರಿ ಮುನ್ನಡೆಯುವುದೇ ಅಭಿವೃದ್ಧಿ. ಬಸವಣ್ಣನವರ ಹೋರಾಟದ ನೆಲ. ಸಮಾನತೆ, ಮಾನವೀಯತೆ, ಸಹಬಾಳ್ವೆಯ ಸಂದೇಶ ನೀಡಿದ ಪುಣ್ಯಭೂಮಿ ಕಲ್ಯಾಣ ಕರ್ನಾಟಕ. ಆಗ ಬಾ, ಈಗ ಬಾ, ಹೋಗಿ ಬಾ ಎನ್ನದೇ, ಈಗಲೇ ಕೊಡುವುದೇ ಮಾನವಧರ್ಮ ಎಂದು ವಚನಕಾರ ಸರ್ವಜ್ಞ ಹೇಳಿದ್ದಾರೆ. ನೀರಿನಿಂದ ಸ್ನಾನ ಮಾಡಿದವನು ಬಟ್ಟೆ ಬದಲಾಯಿಸುತ್ತಾನೆ.ಬೆವರಿನಿಂದ ಸ್ನಾನ ಮಾಡಿದವನು ಇತಿಹಾಸ ನಿರ್ಮಿಸುತ್ತಾನೆ ಎಂದು ಸಂತ ಸೇವಾಲಾಲ್ ಹೇಳಿದ್ದಾರೆ. ಕಾಂಗ್ರೆಸ್ ಪಕ್ಷ ಕಲ್ಯಾಣ ಕರ್ನಾಟಕದ ವಿಮೋಚನೆಗೆ ರಕ್ತ, ಬೆವರು ಹರಿಸಿದೆ ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

ಇಡುವ ಹೆಜ್ಜೆ ಚಿಕ್ಕದಿರಬಹುದು. ಆದರೆ ಆಲೋಚನೆ ದೊಡ್ಡದಿರಬೇಕು. ಸರ್ದಾರ್ ವಲ್ಲಭಾಯಿ ಪಟೇಲ್, ನೆಹರು ಅವರು ಕಲ್ಯಾಣ ಕರ್ನಾಟಕವನ್ನು ಕಾಪಾಡಿದರು.

ಕಟ್ಟಡಗಳ ನಿರ್ಮಾಣದ ಜೊತೆಗೆ ಕಟ್ಟ ಕಡೆಯ ವ್ಯಕ್ತಿಯ ನೆಮ್ಮದಿ ಬದುಕೇ ಅಭಿವೃದ್ಧಿ ಈ ನಿಟ್ಟಿನಲ್ಲಿ ಸೋನಿಯಾ ಗಾಂಧಿ, ಮನಮೋಹನ್ ಸಿಂಗ್, ಮಲ್ಲಿಕಾರ್ಜುನ ಖರ್ಗೆ, ಸಿದ್ದರಾಮಯ್ಯ ಅವರು ಈ ಭಾಗದ ಅಭಿವೃದ್ಧಿಗೆ ಮುನ್ನುಡಿ ಬರೆದರು.

1990 ರಲ್ಲಿ ಮಾಜಿ ಸಿಎಂ ಧರ್ಮಸಿಂಗ್ ಅವರ ನೇತೃತ್ವದಲ್ಲಿ ಹೈದರಾಬಾದ್–ಕರ್ನಾಟಕ ಅಭಿವೃದ್ಧಿ ಮಂಡಳಿ ಸ್ಥಾಪನೆಯಾಯಿತು. ಹೀಗೆ ಪ್ರಾರಂಭವಾದ ಅಭಿವೃದ್ಧಿ ಪರ್ವ ಮುಂದುವರೆಯುತ್ತಿದೆ" ಎಂದರು.

ಎಲ್ಲರೂ ಒಟ್ಟಾಗಿ ನಡೆಯೋಣ. ನವ ಕರ್ನಾಟಕ ಸದೃಢ ಕರ್ನಾಟಕ ನಮ್ಮ ಸಂಕಲ್ಪ. ಅಭಿವೃದ್ಧಿ ಪರವಾದ ಗ್ಯಾರಂಟಿಯನ್ನು ನಮ್ಮ ಸರ್ಕಾರ ನೀಡಿದೆ, ನೀಡಲಿದೆ" ಎಂದು ಹೇಳಿದರು.

# ಯುಪಿಐ ಮೇಲೆ ಶುಲ್ಕ: ಭಾರತದ ಡಿಜಿಟಲ್ ಪಾವತಿ ಪ್ರಗತಿಗೆ ಹಿನ್ನಡೆ

**ಬೆಂಗಳೂರು, ಆ.17:** ಯುಪಿಐ ಯಶಸ್ವಿಯಾಗಲು ಪ್ರಮುಖ ಕಾರಣವೆಂದರೆ ಅದರ ಬಳಕೆಯಲ್ಲಿನ ಸರಳ ವಿಧಾನ, ಸುಲಭ ಮತ್ತು ಉಚಿತ ಲಭ್ಯತೆ. ಸಾಮಾನ್ಯ ನಾಗರಿಕರಿಂದ ಹಿಡಿದು ಸಣ್ಣ ವ್ಯಾಪಾರಿಗಳವರೆಗೆ ಎಲ್ಲರನ್ನೂ ನಗದು ವಹಿವಾಟಿನಿಂದ ಡಿಜಿಟಲ್ ಆರ್ಥಿಕತೆಯತ್ತ ಕರೆದೊಯ್ಯುವಲ್ಲಿ ಇದು ಪ್ರಮುಖ ಪಾತ್ರ ವಹಿಸಿತ್ತು. ರೂ. 2,000ಕ್ಕಿಂತ ಹೆಚ್ಚಿನ ನಿರ್ದಿಷ್ಟ ವ್ಯವಹಾರಗಳ ಮೇಲೆ ಶೇ.0.4ರ ವ್ಯಾಪಾರ ರಿಯಾಯಿತಿ ದರ (ಎಂಡಿಆರ್) ವಿಧಿಸುವ ಈಗಿನ ನಿರ್ಧಾರವು ಈ ಮೂಲಭೂತ ವ್ಯವಸ್ಥೆಯನ್ನು ದುರ್ಬಲಗೊಳಿಲಿದೆ ಎಂದು ಡಿಸಿಎಂ ಡಾ. ಜಿ. ಪರಮೇಶ್ವರ್ ಹೇಳಿದ್ದಾರೆ. ಗ್ರಾಹಕರಿಗೆ ನೇರವಾಗಿ ಯಾವುದೇ ಶುಲ್ಕ ವಿಧಿಸಲಾಗುವುದಿಲ್ಲ ಎಂದು ಸರ್ಕಾರ ಹೇಳುತ್ತಿದೆ. ಆದರೆ, ಪಾವತಿ ಸ್ವೀಕರಿಸುವುದಕ್ಕಾಗಿ ವ್ಯಾಪಾರಿಗೆ ಹೆಚ್ಚುವರಿ ವೆಚ್ಚ ವಿಧಿಸಿದಾಗ, ಅದನ್ನು ಯಾರು ಭರಿಸುತ್ತಾರೆ ಎಂಬುದೇ ನಿಜವಾದ ಪ್ರಶ್ನೆ. ಈ ಹೆಚ್ಚುವರಿ ವೆಚ್ಚವು ವಸ್ತುಗಳ ಬೆಲೆ ಅಥವಾ ಇತರ ಶುಲ್ಕಗಳ ರೂಪದಲ್ಲಿ ಸಾಮಾನ್ಯ ಗ್ರಾಹಕರ ಮೇಲೆಯೇ ಬೀಳುವ ಸಾಧ್ಯತೆಯ ಬಗ್ಗೆ ಸಹಜವಾಗಿಯೇ ಆತಂಕವಿದೆ ಎಂದಿದ್ದಾರೆ.

ಈ ಕುರಿತು ಹೇಳಿಕೆ ಬಿಡುಗಡೆ ಮಾಡಿರುವ ಅವರು, ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಹೇಳಿರುವಂತೆ, ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಮತ್ತೊಮ್ಮೆ ಅಮೆರಿಕದ ಒತ್ತಡಕ್ಕೆ ಮಣಿದ ಭಾರತ ದೇಶದ ಡಿಜಿಟಲ್ ಪಾವತಿ ವ್ಯವಸ್ಥೆಯನ್ನು ಅಮೆರಿಕದ ಕಾರ್ಪೊರೇಟ್ ಹಿತಾಸಕ್ತಿಗಳಿಗೆ ಮುಕ್ತಗೊಳಿಸುತ್ತಿದೆ ಎಂಬುದು ಸ್ಪಷ್ಟವಾಗಿದೆ. ಭಾರತದ ಡಿಜಿಟಲ್ ಪಾವತಿ ಆರ್ಥಿಕತೆಯ ಇಷ್ಟು ದೊಡ್ಡ ಭಾಗದ ಮೇಲೆ ಶುಲ್ಕ ವಿಧಿಸುವ ವ್ಯವಸ್ಥೆ ಜಾರಿಗೆ ಬರುತ್ತಿದ್ದರೆ, ನೀತಿಯಲ್ಲಿ ಬದಲಾವಣೆ ಮಾಡುವ ಅಗತ್ಯವೇನಿತ್ತು ಮತ್ತು ಅಂತಿಮವಾಗಿ ಯಾರ ಹಿತಾಸಕ್ತಿಗಾಗಿ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂಬುದನ್ನು ಕೇಂದ್ರ ಸರ್ಕಾರ ಉತ್ತರಿಸಬೇಕಿದೆ ಎಂದಿದ್ದಾರೆ.

ಗೂಗಲ್‌ಪೇ ಮತ್ತು ವಾಲ್‌ಮಾರ್ಟ್ ಬೆಂಬಲಿತ ಫೋನ್‌ಪೇಗಳು ಭಾರತದ ಯುಪಿಐ ವ್ಯವಸ್ಥೆಯ ಬಹುಪಾಲು ವಹಿವಾಟುಗಳನ್ನು ನಿಯಂತ್ರಿಸುತ್ತಿವೆ. ಇದರ ಹೊರೆ ಭಾರತೀಯ ವ್ಯಾಪಾರಿಗಳ ಮೇಲೆ ಬೀಳುತ್ತಿದ್ದರೆ, ಕೆಲವು ದೊಡ್ಡ ಹಣಕಾಸು ಮತ್ತು ತಂತ್ರಜ್ಞಾನ ಕಂಪನಿಗಳು ಅದರಿಂದ ಲಾಭ ಪಡೆಯುವಂತಾಗುತ್ತದೆ. ಹಾಗಾಗಿ ಯುಪಿಐ ಇನ್ನೂ ಉಚಿತವಾಗಿಯೇ ಉಳಿದಿದೆ ಎಂಬ ಸರ್ಕಾರದ ಹೇಳಿಕೆಯನ್ನು ಒಪ್ಪಲಾಗುವುದಿಲ್ಲ ಎಂದು ಹೇಳಿದ್ದಾರೆ.



**ನಮ್ಮ ಡಿಜಿಟಲ್ ಆರ್ಥಿಕತೆಯ ಉದ್ದೇಶ ವ್ಯಾಪಾರ ನಡೆಸುವ ವೆಚ್ಚವನ್ನು ಕಡಿಮೆ ಮಾಡುವುದಾಗಿರಬೇಕು. ಹೊಸ ಹೊರೆಗಳನ್ನು ಸೃಷ್ಟಿಸುವುದಲ್ಲ. ತಂತ್ರಜ್ಞಾನವು ಸಾಮಾನ್ಯ ಜನರನ್ನು ಸಬಲಗೊಳಿಸಬೇಕು ಮತ್ತು ನಮ್ಮ ವ್ಯಾಪಾರಿಗಳನ್ನು ಬಲಪಡಿಸಬೇಕು. ಪ್ರತಿಯೊಂದು ಡಿಜಿಟಲ್ ವ್ಯವಹಾರವನ್ನೂ ಮತ್ತೊಂದು ಶುಲ್ಕ ವಿಧಿಸುವ ಅವಕಾಶವನ್ನಾಗಿ ಪರಿವರ್ತಿಸಬಾರದು. ಡಿಜಿಟಲ್ ಪಾವತಿ ವ್ಯವಸ್ಥೆಯನ್ನು ರಕ್ಷಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಈ ನಿರ್ಧಾರವನ್ನು ಮರುಪರಿಶೀಲಿಸಬೇಕು ಎಂದು ಒತ್ತಾಯಿಸಿದ್ದಾರೆ.**

# ಸಚಿವ ಕೆ.ಜೆ. ಜಾರ್ಜ್ ನಿಯೋಗದಿಂದ ಶಾರ್ಜಾದ 'ಸ್ಟ್ರಿಂಗ್ ಟ್ರಾನ್ಸ್‌ಪೋರ್ಟ್' ವ್ಯವಸ್ಥೆ ವೀಕ್ಷಣೆ

**ಶಾರ್ಜಾ, ಸೆ.17:** ಕರ್ನಾಟಕದ ಪ್ರಮುಖ ಪ್ರವಾಸಿ ತಾಣಗಳಲ್ಲಿ ಸಂಪರ್ಕ ವ್ಯವಸ್ಥೆಯನ್ನು ಸುಧಾರಿಸುವುದು ಹಾಗೂ ಆಧುನಿಕ ಸಾರಿಗೆ ತಂತ್ರಜ್ಞಾನಗಳ ಬಳಕೆಯ ಸಾಧ್ಯತೆಯನ್ನು ಪರಿಶೀಲಿಸುವ ಉದ್ದೇಶದಿಂದ ಇಂಧನ ಹಾಗೂ ಪ್ರವಾಸೋದ್ಯಮ ಸಚಿವ ಕೆ.ಜೆ. ಜಾರ್ಜ್ ನೇತೃತ್ವದ ಕರ್ನಾಟಕ ಪ್ರವಾಸೋದ್ಯಮ ನಿಯೋಗವು ಶಾರ್ಜಾದಲ್ಲಿರುವ ಸ್ಟ್ರಿಂಗ್ ಟ್ರಾನ್ಸ್‌ಪೋರ್ಟ್ / ಎಲಿವೇಟೆಡ್ ಪಾಡ್ ಸಾರಿಗೆ ವ್ಯವಸ್ಥೆಯನ್ನು ಪರಿಶೀಲಿಸಿತು.

**ಪ್ರವಾಸಿ ತಾಣಗಳಲ್ಲಿ ಸಂಪರ್ಕ ವ್ಯವಸ್ಥೆ ಸುಧಾರಣೆ, ಆಧುನಿಕ ಸಾರಿಗೆ ತಂತ್ರಜ್ಞಾನಗಳ ಬಳಕೆಯ ಸಾಧ್ಯತೆ ಕುರಿತು ಪರಿಶೀಲನೆ**

ನಿಯೋಗವು ವ್ಯವಸ್ಥೆಯ ತಾಂತ್ರಿಕ ವಿನ್ಯಾಸ, ಕಾರ್ಯಾಚರಣಾ ವಿಧಾನ, ಪ್ರಯಾಣಿಕರ ಸಾಗಣೆ ಸಾಮರ್ಥ್ಯ, ಸುರಕ್ಷತಾ ಅಂಶಗಳು ಹಾಗೂ ಕಡಿಮೆ ಭೂಬಳಕೆಯೊಂದಿಗೆ ಸಂಪರ್ಕ ಕಲ್ಪಿಸುವ ಸಾಧ್ಯತೆಗಳ ಕುರಿತು ಮಾಹಿತಿ ಪಡೆದುಕೊಂಡಿತು.

ಸಾಂಪ್ರದಾಯಿಕ ರಸ್ತೆ ಅಥವಾ ರೈಲು ಮೂಲಸೌಕರ್ಯಕ್ಕೆ ಹೋಲಿಸಿದರೆ, ಈ ಮಾದರಿಯ ಸಾರಿಗೆ ವ್ಯವಸ್ಥೆ ನೆಲಮಟ್ಟದಲ್ಲಿ ಕಡಿಮೆ ಜಾಗವನ್ನು ಬಳಸಿಕೊಂಡು ಎತ್ತರದ ಮಾರ್ಗದ ಮೂಲಕ ಪ್ರಯಾಣಿಕರನ್ನು ಸಾಗಿಸುವ ವ್ಯವಸ್ಥೆಯಾಗಿದೆ. ಪ್ರತ್ಯೇಕ ಪಾಡ್‌ಗಳ ಮೂಲಕ ಸಂಚಾರ ನಡೆಸುವ ಈ ತಂತ್ರಜ್ಞಾನವನ್ನು ಪ್ರವಾಸಿ ತಾಣಗಳ ಒಳಾಂಗಣ ಸಂಪರ್ಕ, ಕೊನೆಯ ಹಂತದ ಸಂಪರ್ಕ ಹಾಗೂ ಸ್ಥಳಾವಕಾಶ ಸೀಮಿತ ಪ್ರದೇಶಗಳಲ್ಲಿ ಬಳಸುವ ಸಾಧ್ಯತೆಗಳ ಕುರಿತು ನಿಯೋಗ ಅಧ್ಯಯನ ನಡೆಸಿತು.

ಹಂಪಿಯಂತಹ ವಿಶಾಲ ಪ್ರವಾಸಿ ವಲಯಗಳು, ಬೆಟ್ಟ ಪ್ರದೇಶಗಳು, ನಗರಗಳಿಗೆ ಹೊಂದಿಕೊಂಡಿರುವ ಪ್ರವಾಸಿ ತಾಣಗಳು ಹಾಗೂ ಭೂಸ್ವಾಧೀನಕ್ಕೆ ಅವಕಾಶ ಕಡಿಮೆ ಇರುವ ಪ್ರದೇಶಗಳಲ್ಲಿ ಇಂತಹ ಎಲಿವೇಟೆಡ್ ಸಾರಿಗೆ ವ್ಯವಸ್ಥೆಗಳ ಉಪಯುಕ್ತತೆ ಕುರಿತು ಮುಂದಿನ ಹಂತದಲ್ಲಿ ಪರಿಶೀಲನೆ ನಡೆಸಬಹುದಾಗಿದೆ.

ವ್ಯವಸ್ಥೆಯನ್ನು ಪರಿಶೀಲಿಸಿದ ಬಳಿಕ ಮಾತನಾಡಿದ ಸಚಿವ ಕೆ.ಜೆ. ಜಾರ್ಜ್, ಪ್ರವಾಸೋದ್ಯಮ ಅಭಿವೃದ್ಧಿ ಎಂದರೆ ಕೇವಲ ತಾಣಗಳ ಅಭಿವೃದ್ಧಿಯಲ್ಲ. ಪ್ರವಾಸಿಗರು ತಾಣವನ್ನು ಸುಲಭವಾಗಿ ತಲುಪುವುದು ಮತ್ತು ತಾಣದೊಳಗೆ ಸುಗಮವಾಗಿ ಸಂಚರಿಸುವುದೂ ಅಷ್ಟೇ ಮುಖ್ಯ. ಜಗತ್ತಿನ ವಿವಿಧ ಭಾಗಗಳಲ್ಲಿ ಬಳಕೆಯಾಗುತ್ತಿರುವ ಹೊಸ ಸಾರಿಗೆ ತಂತ್ರಜ್ಞಾನಗಳನ್ನು ಅಧ್ಯಯನ ಮಾಡಿ, ಕರ್ನಾಟಕದ ಅಗತ್ಯಗಳಿಗೆ ಯಾವ ಮಾದರಿ ಸೂಕ್ತ ಎಂಬುದನ್ನು ಪರಿಶೀಲಿಸುವುದು ನಮ್ಮ ಉದ್ದೇಶವಾಗಿದೆ. ಶಾರ್ಜಾದಲ್ಲಿ ನೋಡಿದ ಈ ವ್ಯವಸ್ಥೆಯ ತಾಂತ್ರಿಕ, ಆರ್ಥಿಕ, ಸುರಕ್ಷತಾ ಹಾಗೂ ಕಾರ್ಯಾಚರಣಾ ಸಾಧ್ಯತೆಗಳನ್ನು ಅಧ್ಯಯನ ಮಾಡಿ, ರಾಜ್ಯದ ಆಯ್ದ ಪ್ರದೇಶಗಳಲ್ಲಿ ಇದರ ಬಳಕೆಗೆ ಇರುವ ಅವಕಾಶಗಳನ್ನು ಪರಿಶೀಲಿಸಲಾಗುವುದು ಎಂದರು.

ಕೆಎಸ್‌ಟಿಡಿಸಿ ಅಧ್ಯಕ್ಷ ಶ್ರೀನಿವಾಸ್ ಎಂ., ಪ್ರವಾಸೋದ್ಯಮ ಇಲಾಖೆ ಆಯುಕ್ತ ಹಾಗೂ ಕೆಎಸ್‌ಟಿಡಿಸಿ ವ್ಯವಸ್ಥಾಪಕ ನಿರ್ದೇಶಕ ಶಿವಪ್ರಸಾದ್ ಪಿ.ಆರ್. ಹಾಜರಿದ್ದರು.



### ಪ್ರವಾಸಿ ತಾಣಗಳಲ್ಲಿ ಬಳಕೆಗೆ ಉಪಯುಕ್ತ

ಪ್ರವಾಸೋದ್ಯಮ ಇಲಾಖೆ ಕಾರ್ಯದರ್ಶಿ ಡಾ. ರಾಮ್‌ಪ್ರಸಾತ್ ಮನೋಹರ್, ಐಎಎಸ್ ಮಾತನಾಡಿ, ಕಡಿಮೆ ಭೂಬಳಕೆಯೊಂದಿಗೆ ಸಂಪರ್ಕ ಒದಗಿಸುವ ಇಂತಹ ತಂತ್ರಜ್ಞಾನಗಳು ರಾಜ್ಯದ ಕೆಲವು ಆಯ್ದ ಪ್ರವಾಸಿ ತಾಣಗಳಲ್ಲಿ ಉಪಯುಕ್ತವಾಗಬಹುದಾದ ಸಾಧ್ಯತೆ ಇದೆ. ಮಾನ್ಯ ಪ್ರವಾಸೋದ್ಯಮ ಸಚಿವರ ನಿರ್ದೇಶನದ ಮೇರೆಗೆ ಸ್ಥಳೀಯ ಭೌಗೋಳಿಕ ಪರಿಸ್ಥಿತಿ, ಪ್ರಯಾಣಿಕರ ಪ್ರಮಾಣ, ವೆಚ್ಚ, ನಿರ್ವಹಣೆ ಮತ್ತು ಸುರಕ್ಷತೆ ಸೇರಿದಂತೆ ಎಲ್ಲ ಅಂಶಗಳನ್ನು ಒಳಗೊಂಡ ಸಮಗ್ರ ಸಾಧ್ಯತಾ ಅಧ್ಯಯನ ನಡೆಸಿ, ಅನುಕೂಲಕರ ಸ್ಥಳಗಳನ್ನು ಗುರುತಿಸುವ ಕುರಿತು ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

# ಯುಪಿಐ ಪಾವತಿಗೆ ಶುಲ್ಕ; ಪಿಕ್‌ಪಾಕೆಟ್‌ನಲ್ಲಿ ಕೇಂದ್ರದ ಸಚಿವರಿಗೆ ಪಿಎಚ್‌ಡಿ–ಸಿಎಂ ಡಿ.ಕೆ.ಶಿವಕುಮಾರ್ ವ್ಯಂಗ್ಯ



**ಕಲಬುರಗಿ, ಸೆ.17:** ಯುಪಿಐ ಪಾವತಿಗೆ ವರ್ತಕರ ಮೇಲೆ ಶುಲ್ಕ ವಿಧಿಸಿರುವ ಕೇಂದ್ರ ಸರ್ಕಾರ ಪಿಕ್ ಪಾಕೆಟ್ ಮಾಡುತ್ತಿದೆ. ಶಿಕ್ಷಕರಿಗೆ, ಎಂಜಿನಿಯರ್‌ಗಳಿಗೆ ಪದನಾಮ ನೀಡಿರುವಂತೆ ಪಿಕ್‌ಪಾಕೆಟ್‌ನಲ್ಲಿ ಕೇಂದ್ರ ಸರ್ಕಾರದ ಎಲ್ಲಾ ಸಚಿವರಿಗೂ ಪಿಎಚ್‌ಡಿ ನೀಡಬೇಕಿದೆ" ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ವ್ಯಂಗ್ಯವಾಡಿದರು.

ಐವಾನ್ ಇ ಶಾಹಿ ಅತಿಥಿಗೃಹದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಈಗ ಕೇಂದ್ರ ವಿಧಿಸಲು ಹೊರಟಿರುವ ಯುಪಿಐ ಶುಲ್ಕದ ಭಾರವನ್ನು ವರ್ತಕರು ಗ್ರಾಹಕರ ಮೇಲೆ ಹಾಕುತ್ತಾರೆ. ಇದು ಕೇಂದ್ರ ಸರ್ಕಾರದಿಂದ ಜನಸಾಮಾನ್ಯರ ಹೊಸ ಪಿಕ್‌ಪಾಕೆಟ್. ಇದನ್ನು ಖಂಡಿಸುತ್ತೇನೆ. ಯುಪಿಐ ಶುಲ್ಕ ಜಾರಿಯ ವಿರುದ್ಧ ವಿರುದ್ಧ ಪ್ರತಿಭಟನೆ ಮಾಡಲೇಬೇಕಾಗುತ್ತದೆ. ಹೊರಗಿನ ದೇಶದ ವರ್ತಕರಿಗೆ ಅನುಕೂಲ ಮಾಡಿಕೊಡಲು ಇಂಥ ಘೋರ ತೀರ್ಮಾನ ಮಾಡಲಾಗಿದೆ. ಇದನ್ನು ವಾಪಸ್ಸು ಪಡೆದು ಮೊದಲಿನ ಸ್ಥಿತಿಯನ್ನೇ ತರಲು ಒತ್ತಾಯ ಮಾಡುತ್ತೇವೆ" ಎಂದರು.

ಯಾವ ಕಾರಣಕ್ಕೆ ಕ್ಯಾಶ್‌ಲೆಸ್ ಇಂಡಿಯಾ ಎಂದು ಅವರು ಕರೆದರು. ನೋಟು ಬ್ಯಾನ್ ಮಾಡಿದ್ದು ಯಾವ ಕಾರಣಕ್ಕೆ ಈಗ ಮತ್ತೆ ಹಳೆಯ ಪದ್ಧತಿ ಕಡೆಗೆ ಹೋಗುವಂತೆ ಮಾಡಲಾಗುತ್ತಿದೆ. ಕೇಂದ್ರ ಸರ್ಕಾರಕ್ಕೆ ಎನ್‌ಪಿಸಿಐ (NPCI) ತೆರಿಗೆ ರಹಿತ ಲಾಭವೇ 6,119 ಕೋಟಿಯಾಗಿದೆ ಎಂದು ಹೇಳಿದರು.

## ಸೋನಿಯಾ, ಮಲ್ಲಿಕಾರ್ಜುನ ಖರ್ಗೆ, ಸಿದ್ದರಾಮಯ್ಯ ಕೊಡುಗೆ ಕೊಂಡಾಡಿದ ಮುಖ್ಯಮಂತ್ರಿ ಡಿಕೆಶಿ

ಸೋನಿಯಾ ಗಾಂಧಿ, ಮಲ್ಲಿಕಾರ್ಜುನ್ ಖರ್ಗೆ, ಮಾಜಿ ಸಿಎಂ ಸಿದ್ದರಾಮಯ್ಯ, ಹಾಗೂ ಕಾಂಗ್ರೆಸ್ ನಾಯಕರ ಅಪ್ರತಿಮ ಶ್ರಮದಿಂದಾಗಿ ಇಂದು ಕಲ್ಯಾಣ ಕರ್ನಾಟಕ ಭಾಗದಲ್ಲಿ ನಿರಂತರ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿವೆ. 'ನೀರಿನಿಂದ ಸ್ನಾನ ಮಾಡಿದಾತ ಬಟ್ಟೆ ಬದಲಾಯಿಸುತ್ತಾನೆ, ಆದರೆ ಬೆವರಿನಿಂದ ಸ್ನಾನ ಮಾಡಿದವರು ಇತಿಹಾಸವನ್ನೇ ಬದಲಾಯಿಸುತ್ತಾರೆ' ಎಂದು ಸಂತ ಸೇವಾಲಾಲ್ ಹೇಳಿದ್ದಾರೆ. ಅವರ ಹಾದಿಯಲ್ಲೇ ನಾವು ನಡೆಯುತ್ತಿದ್ದೇವೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿ, ಇದೇ ಹಸ್ತದಿಂದ ಈ ದೇಶದ ಅಭಿವೃದ್ಧಿಯಾಗಿದೆ, ಕರ್ನಾಟಕದ ಪ್ರಗತಿಯೂ ಇದೇ ಹಸ್ತದಿಂದಲೇ ಸಾಧ್ಯವಾಗುತ್ತಿದೆ. ನಾವು ಕೇವಲ ಮತಬ್ಯಾಂಕ್‌ಗಾಗಿ ಅಥವಾ ಚುನಾವಣೆಗಾಗಿ ಕೆಲಸ ಮಾಡುತ್ತಿಲ್ಲ; ರಾಜ್ಯದ ಸಮಗ್ರ ಹಿತಾಸಕ್ತಿಗಾಗಿ ಶ್ರಮಿಸುತ್ತಿದ್ದೇವೆ. ಪ್ರತಿ ಮನೆ–ಮನೆಗೂ ಸರ್ಕಾರದ ಸೇವೆ ತಲುಪಿಸಲು 2ನೇ ಮತ್ತು 4ನೇ ಶನಿವಾರ 'ಪ್ರಜಾಸೇವೆ' ಎಂಬ ಹೊಸ ಯೋಜನೆಯನ್ನು ಆರಂಭಿಸಲಾಗಿದೆ" ಎಂದರು.




ಸಿಎಂ ಡಿ.ಕೆ.ಶಿವಕುಮಾರ್ ಕಲ್ಯಾಣ ಕರ್ನಾಟಕ ಉತ್ಸವದ ಅಂಗವಾಗಿ ಕಲ್ಬುರ್ಗಿಯ ಪೊಲೀಸ್ ಪರೇಡ್ ಮೈದಾನದಲ್ಲಿ ಗುರುವಾರ ಆಯೋಜಿಸಿದ್ದ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ವೀಕ್ಷಿಸಿದರು. ಸಾಂಪ್ರದಾಯಿಕ ಉಡುಗೆಯುಟ್ಟ ಬಂಜಾರ ಸಮುದಾಯದ ಮಹಿಳೆಯರೊಟ್ಟಿಗೆ ಫೋಟೊ ತೆಗೆಸಿಕೊಂಡರು. ಇದೇ ವೇಳೆ ಕೆಕೆಆರ್ ಟಿಸಿ ಕಲ್ಯಾಣ ರಥ 24 ನೂತನ ಬಸ್‌ಗಳನ್ನು ಲೋಕಾರ್ಪಣೆಗೊಳಿಸಿದರು.

# ನಗರಸೇವೆಗಳ ಡಿಜಿಟಲೀಕರಣಕ್ಕೆ ಆದ್ಯತೆ: ಸಚಿವ ಯತೀಂದ್ರ




**ಮಂಗಳೂರು, ಸೆ.17:** ಎಲ್ಲಾ ಇಲಾಖೆಗಳು ಪರಸ್ಪರ ಸಮನ್ವಯ ಮತ್ತು ಸಹಕಾರದೊಂದಿಗೆ ಕಾರ್ಯನಿರ್ವಹಿಸಿ, ಕೈಗೆತ್ತಿಕೊಂಡಿರುವ ಅಭಿವೃದ್ಧಿ ಯೋಜನೆಗಳನ್ನು ನಿಗದಿತ ಅವಧಿಯೊಳಗೆ ಗುಣಮಟ್ಟದೊಂದಿಗೆ ಪೂರ್ಣಗೊಳಿಸಬೇಕು ಎಂದು ನಗರಾಭಿವೃದ್ಧಿ ಸಚಿವರಾದ ಡಾ. ಯತೀಂದ್ರ ಸಿದ್ದರಾಮಯ್ಯ ಅಧಿಕಾರಿಗಳಿಗೆ ಸೂಚಿಸಿದರು.

ಮಂಗಳೂರು ಮಹಾನಗರ ಪಾಲಿಕೆ, ಮಂಗಳೂರು ನಗರಾಭಿವೃದ್ಧಿ ಪ್ರಾಧಿಕಾರ, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಹಾಗೂ ಕರ್ನಾಟಕ ನಗರ ಮೂಲಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ನಿಗಮದ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಗುರುವಾರ ಮಾತನಾಡಿ, ರಾಜ್ಯದ 13 ಮಹಾನಗರ ಪಾಲಿಕೆಗಳನ್ನು ಡಿಜಿಟಲೀಕರಣಗೊಳಿಸುವ ಪ್ರಕ್ರಿಯೆ ನಡೆಯುತ್ತಿದ್ದು, ಪಾಲಿಕೆಗಳ ಎಲ್ಲಾ ಸೇವೆಗಳು ಹಾಗೂ ಅಗತ್ಯ ಮಾಹಿತಿಗಳು ಸಾರ್ವಜನಿಕರಿಗೆ ಸುಲಭವಾಗಿ ಡಿಜಿಟಲ್ ರೂಪದಲ್ಲಿ ಲಭ್ಯವಾಗುವಂತೆ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

ಮುಂದಿನ 25 ವರ್ಷಗಳ ನಗರದ ಅಗತ್ಯವನ್ನು ಗಮನದಲ್ಲಿಟ್ಟುಕೊಂಡು ನೀರು ಸಂಗ್ರಹಣಾ ಘಟಕಗಳನ್ನು ಮೇಲ್ದರ್ಜೆಗೇರಿಸಬೇಕು. ಮಂಗಳೂರಿನಲ್ಲಿ ಒಟ್ಟು 96,300 ಮನೆಗಳ ನಳ ಸಂಪರ್ಕಗಳ ಪೈಕಿ 39,182 ಸಂಪರ್ಕಗಳು ಪೂರ್ಣಗೊಂಡಿದ್ದು, ಬಾಕಿ ಇರುವ 57,118 ಸಂಪರ್ಕ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು. ಪ್ರಸ್ತುತ ನಗರದ ಶೇ.65ರಷ್ಟು ಪ್ರದೇಶದಲ್ಲಿ, ಅಂದರೆ 86.09 ಚದರ ಕಿಲೋಮೀಟರ್ ಪ್ರದೇಶದಲ್ಲಿ ಒಳಚರಂಡಿ ವ್ಯವಸ್ಥೆ ಲಭ್ಯವಿದ್ದು, ಉಳಿದ ಪ್ರದೇಶಗಳಿಗೂ ಒಳಚರಂಡಿ ವ್ಯವಸ್ಥೆಯನ್ನು ಹಂತ ಹಂತವಾಗಿ ವಿಸ್ತರಿಸಲು ಸೂಚಿಸಿದರು.

### ಬೀದಿದೀಪಗಳ ಅಳವಡಿಕೆಗೆ ವೇಗ

ನಗರದಲ್ಲಿ ಈಗಾಗಲೇ ಶೇ.55.6ರಷ್ಟು, ಅಂದರೆ 36,643 ಬೀದಿ ದೀಪಗಳನ್ನು ಅಳವಡಿಸಲಾಗಿದ್ದು, ಉಳಿದ ಪ್ರದೇಶಗಳಲ್ಲಿಯೂ ಬೀದಿ ದೀಪಗಳನ್ನು ಶೀಘ್ರವಾಗಿ ಅಳವಡಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಯಿತು. ಸರ್ಕಾರಿ–ಖಾಸಗಿ ಸಹಭಾಗಿತ್ವದ ಮಾದರಿಯಲ್ಲಿ ಸುಮಾರು 150 ಕೋಟಿ ರೂ. ವೆಚ್ಚದಲ್ಲಿ 586 ಮಳಿಗೆಗಳೊಂದಿಗೆ ನಿರ್ಮಾಣಗೊಳ್ಳುತ್ತಿರುವ ಸೆಂಟ್ರಲ್ ಮಾರುಕಟ್ಟೆ ಕಾಮಗಾರಿ ಬಹುತೇಕ ಪೂರ್ಣಗೊಂಡಿರುವ ಕುರಿತು ಸಭೆಯಲ್ಲಿ ಪರಿಶೀಲಿಸಲಾಯಿತು. ಇದಲ್ಲದೆ, ಕಂಕನಾಡಿ, ಕದ್ರಿ, ಉರ್ವ ಹಾಗೂ ಸುರತ್ಕಲ್ ಮಾರುಕಟ್ಟೆಗಳ ನಿರ್ಮಾಣ ಕಾಮಗಾರಿಗಳ ಪ್ರಗತಿಯನ್ನೂ ಪರಿಶೀಲಿಸಿ, ಬಾಕಿ ಇರುವ ಕಾಮಗಾರಿಗಳನ್ನು ಶೀಘ್ರವಾಗಿ ಪೂರ್ಣಗೊಳಿಸುವಂತೆ ಸೂಚಿಸಲಾಯಿತು.

### ತ್ಯಾಜ್ಯ ವಿಂಗಡಣೆಗೆ ಕಟ್ಟುನಿಟ್ಟಿನ ಸೂಚನೆ

ನಗರದಲ್ಲಿ ಪ್ರತಿದಿನ ಉತ್ಪತ್ತಿಯಾಗುವ ಸುಮಾರು 120 ಟನ್ ಹಸಿಕಸ, 125 ಟನ್ ಮಿಶ್ರಿತ ಕಸ, 15 ಟನ್ ಎಳನೀರು/ತೆಂಗಿನಕಾಯಿ ತ್ಯಾಜ್ಯ ಹಾಗೂ 5 ಟನ್ ಸ್ಯಾನಿಟರಿ ತ್ಯಾಜ್ಯ, ಜೊತೆಗೆ ವಾರಕ್ಕೆ ಉತ್ಪತ್ತಿಯಾಗುವ ಸುಮಾರು 250 ಟನ್ ಒಣಕಸವನ್ನು ಶೇ.100ರಷ್ಟು ಮೂಲದಲ್ಲಿಯೇ ವಿಂಗಡಿಸುವಂತೆ ಸಚಿವರು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು. ತ್ಯಾಜ್ಯ ವಿಂಗಡಣೆ ಹಾಗೂ ವೈಜ್ಞಾನಿಕ ತ್ಯಾಜ್ಯ ನಿರ್ವಹಣೆಗೆ ಹೆಚ್ಚಿನ ಆದ್ಯತೆ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಮಂಗಳೂರು ನಗರದಲ್ಲಿ ಒಟ್ಟು 2,22,256 ಇ–ಖಾತಾಗಳ ಪೈಕಿ 68,603 ಇ–ಖಾತಾಗಳನ್ನು ವಿತರಿಸಲಾಗಿದ್ದು, ಬಾಕಿ ಇರುವ ಇ–ಖಾತಾಗಳ ವಿತರಣೆ ಪ್ರಕ್ರಿಯೆಯನ್ನು ತ್ವರಿತಗೊಳಿಸುವಂತೆ ಸೂಚಿಸಿದರು. ಸಾರ್ವಜನಿಕ ಶೌಚಾಲಯಗಳನ್ನು ಸ್ವಚ್ಛವಾಗಿ ಹಾಗೂ ಸುಸ್ಥಿತಿಯಲ್ಲಿಡಬೇಕು. ನಗರದ ಸಮಗ್ರ ನಿರ್ವಹಣೆ ಹಾಗೂ ಸಾರ್ವಜನಿಕ ಸೇವೆಗಳ ಮೇಲ್ವಿಚಾರಣೆಗೆ ಸ್ಮಾರ್ಟ್ ಸಿಟಿ ಯೋಜನೆಯ ಕಮಾಂಡ್ ಸೆಂಟರ್ ಅನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಬೇಕು ಎಂದು ಸೂಚಿಸಿದರು.

# 2ನೇ ಹಂತದಲ್ಲಿ 23 ತಾಲ್ಲೂಕುಗಳು ಬರಪೀಡಿತ ಸರ್ಕಾರ ಘೋಷಣೆ: ಡಿಸಿಎಂ ಡಾ.ಜಿ.ಪರಮೇಶ್ವರ್



**ಬೆಂಗಳೂರು, ಸೆ.17:** ಮುಂಗಾರು ಹಂಗಾಮಿನಲ್ಲಿ ಮಳೆ ಕೊರತೆಯಿಂದಾಗಿ ರಾಜ್ಯದಲ್ಲಿ ಎರಡನೇ ಹಂತದಲ್ಲಿ 23 ತಾಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಿಸಲಾಗಿದ್ದು, ಮೂರನೇ ಹಂತದಲ್ಲಿ 53 ತಾಲ್ಲೂಕುಗಳ ಅಧ್ಯಯನ ನಡೆಸಲಾಗುತ್ತಿದೆ.

ಈಗಾಗಲೇ ಮೊದಲ ಹಂತದಲ್ಲಿ ಪ್ರತ್ಯಕ್ಷ ಪರಿಶೀಲನೆ ನಡೆಸಿ, 89 ತೀವ್ರ ಬರ ಹಾಗೂ 12 ಸಾಧಾರಣ ಸೇರಿ 101 ತಾಲ್ಲೂಕುಗಳನ್ನು ಬರ ಬಾಧಿತ ಎಂದು ಘೋಷಿಸಲಾಗಿದೆ. ಇದೀಗ ಎರಡನೇ ಹಂತದಲ್ಲಿ ಮತ್ತೆ ಹೆಚ್ಚುವರಿಯಾಗಿ 23 ತಾಲೂಕುಗಳನ್ನು ಘೋಷಿಸಿ ಆದೇಶ ಹೊರಡಿಸಲಾಗಿದೆ. ಈ ಪೈಕಿ 21 ತಾಲೂಕುಗಳು ತೀವ್ರ ಹಾಗೂ 2 ತಾಲೂಕುಗಳು ಸಾಧಾರಣ ಬರ ಬಾಧಿತವಾಗಿವೆ. ಈ ಮೂಲಕ ರಾಜ್ಯದ 124 ತಾಲ್ಲೂಕುಗಳು ಅಭಾವ ಪರಿಸ್ಥಿತಿಯಲ್ಲಿವೆ.

ಈ ಕುರಿತ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್, ರಾಜ್ಯದಲ್ಲಿ ಮುಂಗಾರು ಮಳೆಯ ಕೊರತೆಯಿಂದ ಉಂಟಾಗಿರುವ ಬರ ಪರಿಸ್ಥಿತಿಯನ್ನು ವೈಜ್ಞಾನಿಕವಾಗಿ ಮೌಲ್ಯಮಾಪನ ಮಾಡುತ್ತಿದ್ದು, ರೈತರ ಸಂಕಷ್ಟಕ್ಕೆ ತ್ವರಿತವಾಗಿ ಸ್ಪಂದಿಸುವ ನಿಟ್ಟಿನಲ್ಲಿ ಹಂತ ಹಂತವಾಗಿ ಕ್ರಮ ಕೈಗೊಳ್ಳಲಾಗುತ್ತಿದೆ ಎಂದಿದ್ದಾರೆ.

ಸೆಪ್ಟೆಂಬರ್ 19 ಮತ್ತು 20ರಂದು ಅಧಿಕಾರಿಗಳ ತಂಡಗಳು ಆಯ್ಕೆಯಾದ ಗ್ರಾಮಗಳ ಜಮೀನುಗಳಿಗೆ ಭೇಟಿ ನೀಡಿ ಬೆಳೆ ಹಾನಿಯನ್ನು ನೇರವಾಗಿ ಪರಿಶೀಲಿಸಲಿದ್ದು, ಸೆಪ್ಟೆಂಬರ್ 21ರೊಳಗೆ ಅಂತಿಮ ವರದಿ ಸಲ್ಲಿಸಲು ಜಿಲ್ಲಾಧಿಕಾರಿಗಳು ಹಾಗೂ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಗಿದೆ.

ರೈತರು ಎದುರಿಸುತ್ತಿರುವ ಸಂಕಷ್ಟದ ವಾಸ್ತವ ಸ್ಥಿತಿ ಸರ್ಕಾರದ ಗಮನಕ್ಕೆ ಬರಬೇಕು. ಯಾವ ರೈತನೂ ನೈಜ ಬೆಳೆ ಹಾನಿಯ ದಾಖಲೀಕರಣದಿಂದ ಹೊರಗುಳಿಯಬಾರದು ಎಂಬುದು ನಮ್ಮ ಆಶಯ. ವೈಜ್ಞಾನಿಕ ಪರಿಶೀಲನೆ, ಪಾರದರ್ಶಕ ಸಮೀಕ್ಷೆ ಮತ್ತು ನಿಖರ ವರದಿಯ ಆಧಾರದಲ್ಲಿ ಮುಂದಿನ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ.

### ಬರಪೀಡಿತ ತಾಲೂಕುಗಳು

ತಿಪಟೂರು, ಕಾರಟಗಿ, ಮಾನ್ವಿ, ಸಿಂಧನೂರು, ಸಿರವಾರ, ಅಫಜಲಪುರ, ಆಳಂದ, ಚಿತ್ತಾಪುರ, ಕಲಬುರಗಿ, ಯಡ್ರಾಮಿ, ಶಹಾಬಾದ್, ಭಾಲ್ಕಿ, ಬಸವನಬಾಗೇವಾಡಿ, ಬಬಲೇಶ್ವರ, ತಿಕೋಟಾ, ರಟ್ಟೀಹಳ್ಳಿ, ಹುಬ್ಬಳ್ಳಿ, ನವಲಗುಂದ, ಹುಬ್ಬಳ್ಳಿ ನಗರ, ಅಣ್ಣಿಗೇರಿ ಹಾಗೂ ಕಡೂರು ತೀವ್ರ ಬರಪೀಡಿತ ತಾಲೂಕುಗಳಾಗಿದ್ದು, ಪೊನ್ನಂಪೇಟೆ ಮತ್ತು ವೀರಾಜಪೇಟೆ ಸಾಧಾರಣ ಬರಪೀಡಿತ ತಾಲೂಕುಗಳಾಗಿವೆ. ಇದರ ಜೊತೆಗೆ, ಜೂನ್ 1ರಿಂದ ಸೆಪ್ಟೆಂಬರ್ 16ರವರೆಗಿನ ಮಳೆ ಪ್ರಮಾಣ, ಮಣ್ಣಿನ ತೇವಾಂಶ, ಬೆಳೆ ಸ್ಥಿತಿ ಸೇರಿದಂತೆ ವಿವಿಧ ವೈಜ್ಞಾನಿಕ ಮಾನದಂಡಗಳ ಆಧಾರದ ಮೇಲೆ ಇದೀಗ 17 ಜಿಲ್ಲೆಗಳ 53 ತಾಲೂಕುಗಳನ್ನು ಮೂರನೇ ಹಂತದ ಅಧ್ಯಯನಕ್ಕೆ ಆಯ್ಕೆ ಮಾಡಲಾಗಿದೆ.

# ರೇಷನ್‌ಕಾರ್ಡ್ ಇ–ಕೆವೈಸಿ ಗಡುವು ವಿಸ್ತರಣೆ: ಸಚಿವ ರಿಜ್ವಾನ್

**ಬೆಂಗಳೂರು, ಸೆ.17:** ಜನರಿಗೆ ಅನುಕೂಲ ಆಗುವ ಎರಡು ಮಹತ್ವದ ನಿರ್ಧಾರವನ್ನು ಸರ್ಕಾರ ಮತ್ತು ಆಹಾರ ಇಲಾಖೆ ತೆಗೆದುಕೊಂಡಿದೆ. ಇಲಾಖೆ ಸಚಿವ ರಿಜ್ವಾನ್ ಅರ್ಷದ್ ಈ ಬಗ್ಗೆ ಮಾಹಿತಿ ನೀಡಿದ್ದು, ರೇಷನ್ ಕಾರ್ಡ್ ಇ–ಕೆವೈಸಿ ಮಾಡಿಸುವ ಗಡುವನ್ನು ಸರ್ಕಾರ ವಿಸ್ತರಣೆ ಮಾಡಿದೆ. ಅ.20ರ ವರೆಗೂ ಅವಧಿ ವಿಸ್ತರಣೆ ಮಾಡಿ ಆಹಾರ ಇಲಾಖೆ ಆದೇಶ ಮಾಡಿದೆ. ಸರ್ವರ್ ಸಮಸ್ಯೆಯಿಂದಾಗಿ ಇ–ಕೆವೈಸಿ ಮಾಡಿಸಲು ಸಮಸ್ಯೆ ಆಗ್ತಿತ್ತು. ಈ ಹಿನ್ನೆಲೆ ಗಡುವು ವಿಸ್ತರಣೆ ಮಾಡಿರೋದಾಗಿ ಸಚಿವ ರಿಜ್ವಾನ್ ಅರ್ಷದ್ ಮಾಹಿತಿ ನೀಡಿದ್ದಾರೆ. ನ್ಯಾಯ ಬೆಲೆ ಅಂಗಡಿಗಳ ಸಮಯವನ್ನು ಸರ್ಕಾರ ಪರಿಷ್ಕರಣೆ ಮಾಡಿದೆ. ಕೂಲಿಕಾರ್ಮಿಕರು, ಆಟೋಚಾಲಕರು, ಕಟ್ಟಡ ಕಾರ್ಮಿಕರು ರೇಷನ್ ಪಡೆಯಲು ಸಹಕಾರಿ ಆಗುವಂತೆ ನ್ಯಾಯಬೆಲೆ ಅಂಗಡಿ ಸಮಯವನ್ನ ಪರಿಷ್ಕರಣೆ ಮಾಡಲಾಗಿದೆ. ಅ.1ರಿಂದ ನೂತನ ಸಮಯ ಜಾರಿ ಎಂದು ಸಚಿವ ರಿಜ್ವಾನ್ ಅರ್ಷದ್ ಮಾಹಿತಿ ನೀಡಿದ್ದಾರೆ.

# ಕೆಡಿಪಿ ಸಭೆಯಲ್ಲಿ ಅಧಿಕಾರಿಗಳನ್ನು ತರಾಟೆ ತೆಗೆದುಕೊಂಡ ಸಚಿವ ಕೃಷ್ಣಬೈರೇಗೌಡ



**ಬೆಂಗಳೂರು, ಸೆ.17:** ಕಳಪೆ ಗುಣಮಟ್ಟದ ರಸ್ತೆಗಳು, ಸಮರ್ಪಕ ತ್ಯಾಜ್ಯ ನಿರ್ವಹಣೆಯ ಕೊರತೆ ಹಾಗೂ ಅಭಿವೃದ್ಧಿ ಕಾಮಗಾರಿಗಳ ಅನುಷ್ಠಾನದಲ್ಲಿ ನಡೆದಿದೆ ಎನ್ನಲಾದ ಅಕ್ರಮಗಳ ಕುರಿತು ಬೆಂಗಳೂರು ನಗರಾಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅವರು ಅಧಿಕಾರಿಗಳನ್ನು ತರಾಟೆ ತೆಗೆದುಕೊಂಡ ಪ್ರಸಂಗ ನಡೆದಿದೆ.

ಬೆಂಗಳೂರು ನಗರ ಜಿಲ್ಲಾ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮ (ಕೆಡಿಪಿ) ಸಭೆಯಲ್ಲಿ ಅಧಿಕಾರಿಗಳ ವಿರುದ್ಧ ಗರಂ ಆದ ಸಚಿವರು, ಸರ್ಕಾರವು ಇತರ ರಾಜ್ಯಗಳಿಗಿಂತ ರಸ್ತೆ ನಿರ್ಮಾಣಕ್ಕೆ ಕಡಿಮೆ ಹಣ ಮೀಸಲಿಡುತ್ತಿದೆಯೇ ಎಂದು ಪ್ರಶ್ನಿಸಿದರು. ಒಂದೇ ಕಾಮಗಾರಿಗೆ ಎರಡು ವಿಭಿನ್ನ ಸ್ಥಳಗಳಲ್ಲಿ ಬಿಲ್‌ಗಳನ್ನು ಸೃಷ್ಟಿಸಲಾಗಿದೆ ಎಂಬ ಆರೋಪದ ಕುರಿತು ಅಧಿಕಾರಿಯೊಬ್ಬರನ್ನು ಪ್ರಶ್ನಿಸಿದರು. ಅಭಿವೃದ್ಧಿಗೆ ಸಾಮರ್ಥ್ಯ ಮತ್ತು ಸಂಪನ್ಮೂಲಗಳ ಕೊರತೆ ಇದೆಯೇ ಅಥವಾ ಎಲ್ಲವೂ ಇದ್ದರೂ ಅಧಿಕಾರಿಗಳು ಬಿಲ್ ತಯಾರಿಸುವುದಕ್ಕೆ ಕೆಲಸ ಮಾಡುತ್ತಿದ್ದಾರೆಯೇ ಎಂದು ಪ್ರಶ್ನಿಸಿದರು.

ಪಂಚಾಯಿತಿ ವ್ಯಾಪ್ತಿಗೆ ಒಳಪಡುವ ನಗರದ ಹೊರವಲಯದ ಪ್ರದೇಶಗಳಲ್ಲಿ ಕಳಪೆ ರಸ್ತೆಗಳ ಕುರಿತು ದೂರುಗಳು ಕೇಳಿಬರುತ್ತಿರುವ ಸಂದರ್ಭದಲ್ಲೇ ಸಚಿವರ ಈ ಹೇಳಿಕೆ ಬಂದಿದೆ.ಸಾರ್ವಜನಿಕರ ಹಣದಿಂದ ನಿರ್ಮಿಸಲಾದ ರಸ್ತೆ ಕನಿಷ್ಠ ಏಳೆಂಟು ವರ್ಷಗಳಾದರೂ ಬಾಳಿಕೆ ಬರಬೇಕು. ಕಳಪೆ ಗುಣಮಟ್ಟದ ಕಾಮಗಾರಿ ನಡೆಸಿ, ಎರಡು ವರ್ಷಗಳಲ್ಲೇ ರಸ್ತೆ ಮರು ಹಸ್ತರೀಕರಣಕ್ಕೆ ಹಣ ಕೋರುವ ಪದ್ಧತಿಯನ್ನೂ ಅವರು ಪ್ರಶ್ನಿಸಿದರು.

ಇತರ ರಾಜ್ಯಗಳಲ್ಲಿ ರಸ್ತೆಗಳ ಮೇಲೆ ವಾಹನಗಳ ದಟ್ಟಣೆ, ಸಂಚಾರ ಹಾಗೂ ಮಳೆಯ ಸಮಸ್ಯೆ ಇರುವುದಿಲ್ಲವೇ? ಈ ಎಲ್ಲ ಸಮಸ್ಯೆಗಳು ನಮ್ಮ ರಾಜ್ಯದಲ್ಲೇ ಮಾತ್ರ ಇವೆಯೇ ಎಂದು ರಸ್ತೆ ಹಾಳಾಗಿರುವುದಕ್ಕೆ ಅಧಿಕಾರಿಗಳು ನೀಡುತ್ತಿರುವ ಕಾರಣಗಳನ್ನು ಪ್ರಶ್ನಿಸುತ್ತಾ ಅವರು ಹೇಳಿದರು.ಗ್ರಾಮ ಪಂಚಾಯಿತಿಗಳಲ್ಲಿ ವೈಜ್ಞಾನಿಕ ತ್ಯಾಜ್ಯ ನಿರ್ವಹಣೆ ಇಲ್ಲದಿರುವುದಕ್ಕೂ ಸಚಿವರು ಅಸಮಾಧಾನ ವ್ಯಕ್ತಪಡಿಸಿದರು.

ಗ್ರಾಮ ಪಂಚಾಯಿತಿಗಳಿಗೆ ಬಿಡುಗಡೆ ಮಾಡುವ ಅನುದಾನದ ಒಂದು ಭಾಗವನ್ನು ಕುಡಿಯುವ ನೀರು ಮತ್ತು ತ್ಯಾಜ್ಯ ನಿರ್ವಹಣಾ ಸೌಲಭ್ಯಗಳು ಸೇರಿದಂತೆ ಶಾಶ್ವತ ಮೂಲಸೌಕರ್ಯ ನಿರ್ಮಾಣಕ್ಕೆ ಕಡ್ಡಾಯವಾಗಿ ಬಳಸಬೇಕು ಎಂದು ಹೇಳಿದರು.

# ಮಾಲಾಸೇರಿ ಡೂಂಗ್ರಿ, ಸವಾಯಿಭೋಜ್ ದೇಗುಲದಲ್ಲಿ ಪೂಜೆ ಸಲ್ಲಿಸಿದ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್

**ಭೀಲ್ವಾರಾ (ರಾಜಸ್ಥಾನ)/ಬೆಂಗಳೂರು, ಸೆ.17:**ಕರ್ನಾಟಕದ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್ ಅವರು ರಾಜಸ್ಥಾನದ ಭಿಲ್ವಾರಾ ಜಿಲ್ಲೆಯ ಆಸಿಂದ್ ಪ್ರದೇಶದಲ್ಲಿರುವ ಭಗವಾನ್ ಶ್ರೀ ದೇವನಾರಾಯಣ ಅವರ ಜನ್ಮಸ್ಥಳವಾದ ಮಾಲಾಸೇರಿ ಡೂಂಗ್ರಿ ಹಾಗೂ ಸವಾಯಿಭೋಜ್ ಮಹಾರಾಜ ದೇವಸ್ಥಾನಕ್ಕೆ ಭೇಟಿ ನೀಡಿ ದೇವರ ದರ್ಶನ ಪಡೆದು ಪೂಜೆ ಸಲ್ಲಿಸಿದರು. ನಂತರ ಅವರು ಸಾಡು, ಸವಾಯಿಭೋಜ್ ಮಹಾರಾಜ ಹಾಗೂ ಭಗವಾನ್ ಶ್ರೀ ದೇವನಾರಾಯಣ ಅವರ ದರ್ಶನ ಪಡೆದು ಕರ್ನಾಟಕ, ಮಧ್ಯಪ್ರದೇಶ, ರಾಜಸ್ಥಾನ ಸೇರಿದಂತೆ ದೇಶದಾದ್ಯಂತ ಸುಖ, ಶಾಂತಿ, ಸಮೃದ್ಧಿ, ಪ್ರಗತಿ ಹಾಗೂ ಜನಕಲ್ಯಾಣಕ್ಕಾಗಿ ಪ್ರಾರ್ಥನೆ ಸಲ್ಲಿಸಿದರು.

ಮಾಲಾಸೇರಿ ಡೂಂಗ್ರಿಗೆ ಆಗಮಿಸಿದ ಸಂದರ್ಭದಲ್ಲಿ ರಾಜ್ಯಪಾಲರ ವಿಶೇಷ ಕರ್ತವ್ಯಾಧಿಕಾರಿ ಶಂಕರ್ ಗುರ್ಜರ್ ಸೇರಿದಂತೆ ದೇವಸ್ಥಾನ ಸಮಿತಿಯ ಪದಾಧಿಕಾರಿಗಳು ಹಾಗೂ ಅರ್ಚಕರು ರಾಜ್ಯಪಾಲರನ್ನು ಆತ್ಮೀಯವಾಗಿ ಸ್ವಾಗತಿಸಿದರು. ಈ ಸಂದರ್ಭದಲ್ಲಿ ಹೇಮರಾಜ್ ಪೋಷ್ವಾಲ್ ಸೇರಿದಂತೆ ದೇವಸ್ಥಾನ ಸಮಿತಿಯ ಪದಾಧಿಕಾರಿಗಳು ಹಾಗೂ ಅಪಾರ ಸಂಖ್ಯೆಯ ಭಕ್ತರು ಉಪಸ್ಥಿತರಿದ್ದರು. ರಾಜ್ಯಪಾಲರು ವಿಧಿವತ್ತಾಗಿ ಪೂಜೆ ಸಲ್ಲಿಸಿ ಭಗವಾನ್ ದೇವನಾರಾಯಣ ಅವರ ಆಶೀರ್ವಾದ ಪಡೆದರು.

ಬಳಿಕ ರಾಜ್ಯಪಾಲರು ಆಸಿಂದ್‌ನ ಸವಾಯಿಭೋಜ್ ಮಹಾರಾಜ ದೇವಸ್ಥಾನಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ದೇವಸ್ಥಾನ ಟ್ರಸ್ಟ್‌ನ ಅಧ್ಯಕ್ಷರು, ಸದಸ್ಯರು ಹಾಗೂ ಗಾದಿಪತಿ ಮಹಂತ್ ಶ್ರೀ ಶ್ರೀ 1008 ಸುರೇಶ್‌ದಾಸ್ ಮಹಾರಾಜ ಅವರು ರಾಜ್ಯಪಾಲರನ್ನು ಬರಮಾಡಿಕೊಂಡರು. ರಾಜ್ಯಪಾಲರು ಸವಾಯಿಭೋಜ್ ಮಹಾರಾಜ ಅವರ ದರ್ಶನ ಪಡೆದು ಆಶೀರ್ವಾದ ಪಡೆದರು. ಈ ಸಂದರ್ಭದಲ್ಲಿ ಭಗವಾನ್ ಶ್ರೀ ದೇವನಾರಾಯಣ ಅವರ ದರ್ಶನಕ್ಕಾಗಿ ಆಗಮಿಸಿದ್ದ ಗುರ್ಜರ್ ಸಮಾಜ ಸೇರಿದಂತೆ ಸರ್ವ ಸಮಾಜದ ಭಕ್ತರು ಹಾಗೂ ದೇವಭಕ್ತರೊಂದಿಗೆ ರಾಜ್ಯಪಾಲರು ಆತ್ಮೀಯವಾಗಿ ಸಂವಾದ ನಡೆಸಿದರು.



ಅನಂತರ ರಾಜ್ಯಪಾಲ ಗೆಹ್ಲೋತ್ ಸವಾಯಿಭೋಜ್ ದೇವಸ್ಥಾನ ಆವರಣದಲ್ಲಿ ಮಹಂತ್ ಸುರೇಶ್‌ದಾಸ್ ಮಹಾರಾಜ, ನಾರಾಯಣನಾಥ್ ಮಹಾರಾಜ ಹಾಗೂ ಮಹೇಂದ್ರಪುರಿ ಮಹಾರಾಜ್ ಸಾನ್ನಿಧ್ಯದಲ್ಲಿ ಆಯೋಜಿಸಲಾದ ಭವ್ಯ ಭಜನೆ ಕಾರ್ಯಕ್ರಮದಲ್ಲಿ ಪಾಲ್ಗೊಂಡರು. ಈ ಸಂದರ್ಭದಲ್ಲಿ ಭಜನ ಸಮ್ರಾಟ್ ಪ್ರಕಾಶ್ ಮಾಲಿ ಅವರು ಪ್ರಸ್ತುತಪಡಿಸಿದ ಭಕ್ತಿರಸಪೂರ್ಣ ಭಜನೆಗಳನ್ನು ರಾಜ್ಯಪಾಲರು ಆಲಿಸಿದರು. ಭಕ್ತಿ ಮತ್ತು ಶ್ರದ್ಧೆಯಿಂದ ಕೂಡಿದ ಈ ಭಜನ ಸಂಧ್ಯೆಯಲ್ಲಿ ಅಪಾರ ಸಂಖ್ಯೆಯ ಭಕ್ತರು ಭಾಗವಹಿಸಿದ್ದರು.

ಕಾರ್ಯಕ್ರಮದ ಅಂತ್ಯದಲ್ಲಿ ರಾಜ್ಯಪಾಲರು ಭಗವಾನ್ ಶ್ರೀ ದೇವನಾರಾಯಣ ಅವರ ಸನ್ನಿಧಿಯಲ್ಲಿ ದೇಶದ ಸರ್ವಜನರ ಸುಖ, ಶಾಂತಿ ಮತ್ತು ಸಮೃದ್ಧಿಗಾಗಿ ಮತ್ತೊಮ್ಮೆ ಪ್ರಾರ್ಥನೆ ಸಲ್ಲಿಸಿ ರಾಷ್ಟ್ರದ ಸರ್ವಾಂಗೀಣ ಅಭಿವೃದ್ಧಿಗಾಗಿ ಆಶೀರ್ವಾದ ಕೋರಿದರು.

# ಜನನ, ಮರಣ ನೋಂದಣಿ ವಿಳಂಬ ವಿರುದ್ಧ ಅ.1ರಿಂದ ಹೊಸ ನಿಯಮ

**ನವದೆಹಲಿ,ಸೆ.17:** ಜನನ ಮತ್ತು ಮರಣ ನೋಂದಣಿಯನ್ನು ವಿಳಂಬವಾಗಿ ಮಾಡಿಸುವ ಪ್ರಕ್ರಿಯೆಯನ್ನು ಮತ್ತಷ್ಟು ಕಠಿಣಗೊಳಿಸುವ ಜನನ ಮತ್ತು ಮರಣ ನೋಂದಣಿ (ತಿದ್ದುಪಡಿ) ಕಾಯ್ದೆ 2026ರ ನೂತನ ನಿಯಮಗಳು ಅಕ್ಟೋಬರ್ 1ರಿಂದ ಜಾರಿಗೆ ಬರಲಿವೆ. ಈ ಕುರಿತು ಭಾರತದ ರಿಜಿಸ್ಟ್ರಾರ್ ಜನರಲ್ ಮೃತ್ಯುಂಜಯ್ ಕುಮಾರ್ ನಾರಾಯಣ್ ಅವರು ಅಧಿಸೂಚನೆ ಹೊರಡಿಸಿದ್ದಾರೆ.

ಜನನ ಅಥವಾ ಮರಣ ಸಂಭವಿಸಿದ ದಿನಾಂಕದಿಂದ ಒಂದು ವರ್ಷ ಕಳೆದ ಬಳಿಕ, ಎರಡು ವರ್ಷ ಪೂರ್ಣಗೊಳ್ಳುವ ಮುನ್ನ ನೋಂದಣಿಗೆ ಅರ್ಜಿ ಸಲ್ಲಿಸಿದರೆ, ಸಂಬಂಧಪಟ್ಟ ಜಿಲ್ಲಾಧಿಕಾರಿ, ಉಪವಿಭಾಗಾಧಿಕಾರಿ ಅಥವಾ ಅಧಿಕಾರ ಪಡೆದ ಕಾರ್ಯನಿರ್ವಾಹಕ ಮ್ಯಾಜಿಸ್ಟ್ರೇಟ್ ಅವರ ಆದೇಶ ಅಗತ್ಯವಾಗಲಿದೆ. ಘಟನೆಗೆ ಸಂಬಂಧಿಸಿದ ವಿವರಗಳ ನಿಖರತೆಯನ್ನು ಪರಿಶೀಲಿಸಿದ ಬಳಿಕ, ನಿಗದಿತ ಶುಲ್ಕ ಪಾವತಿಗೆ ಒಳಪಟ್ಟು ನೋಂದಣಿಗೆ ಅನುಮತಿ ನೀಡಲಾಗುತ್ತದೆ.

ಜನನ ಅಥವಾ ಮರಣ ಸಂಭವಿಸಿ ಎರಡು ವರ್ಷಕ್ಕಿಂತ ಹೆಚ್ಚು ಸಮಯದ ಬಳಿಕ ನೋಂದಣಿಗೆ ಅರ್ಜಿ ಸಲ್ಲಿಸಿದರೆ, ಇನ್ನು ಮುಂದೆ ಪ್ರಥಮ ದರ್ಜೆ ನ್ಯಾಯಾಂಗ ಮ್ಯಾಜಿಸ್ಟ್ರೇಟ್ ಅವರ ಆದೇಶ ಪಡೆಯಬೇಕಾಗುತ್ತದೆ. ಇದರಿಂದ ಇಂತಹ ತಡವಾದ ನೋಂದಣಿಗಳ ಪರಿಶೀಲನೆಗೆ ಹೆಚ್ಚಿನ ಮಟ್ಟದ ನ್ಯಾಯಾಂಗ ಪರಿಶೀಲನೆ ಬರಲಿದೆ.

1969ರ ಜನನ ಮತ್ತು ಮರಣ ನೋಂದಣಿ ಕಾಯ್ದೆಯ ಸೆಕ್ಷನ್ 13(3)ಕ್ಕೆ ತಿದ್ದುಪಡಿ ತಂದು ಈ ಬದಲಾವಣೆ ಮಾಡಲಾಗಿದೆ. ಜನನ ಮತ್ತು ಮರಣ ಘಟನೆಗಳನ್ನು ಸಮಯಕ್ಕೆ ಸರಿಯಾಗಿ ನೋಂದಾಯಿಸುವಂತೆ ಜನರನ್ನು ಉತ್ತೇಜಿಸುವುದು ತಿದ್ದುಪಡಿಯ ಉದ್ದೇಶ ಎಂದು ಕೇಂದ್ರ ಸರ್ಕಾರ ಹೇಳಿದೆ.

ಜನನ ಮತ್ತು ಮರಣ ನೋಂದಣಿ ಕಾನೂನುಬದ್ಧವಾಗಿ ಕಡ್ಡಾಯವಾಗಿದ್ದು, ಈ ಕಾಯ್ದೆಯಡಿ ನೀಡಲಾಗುವ ಪ್ರಮಾಣಪತ್ರಗಳು ವ್ಯಕ್ತಿಯ ಜನನ ಅಥವಾ ಮರಣವನ್ನು ದೃಢೀಕರಿಸುವ ಪ್ರಮುಖ ಕಾನೂನು ದಾಖಲೆಗಳಾಗಿವೆ.

# ಮನೆಯಲ್ಲಿನ ಮಂದಿರದಿಂದಲೇ ಸಂಸ್ಕಾರಯುತ ಬದುಕು ಸಾಧ್ಯವಾಗುವುದು ಗೋರೆಗಾಂವ್‌ನ ವಾರ್ಷಿಕ ಗಣಪತಿ ಉತ್ಸವದಲ್ಲಿ ಪುತ್ತಿಗೆ ಸುಗುಣೇಂದ್ರ ತೀರ್ಥರು



**ಮುಂಬಯಿ, ಸೆ.17:** ವಾಸ್ತವ್ಯದ ಮನೆಯಲ್ಲಿ ಮಂದಿರ ರೂಪಿಸಿದಾಗ ಮನಸ್ಸುಗಳು ಭಕ್ತಿದಾಯಕವಾಗು ವುದು. ಇಂತಹ ಭಕ್ತಿಭಾವದಿಂದಲೇ ಸಂಸ್ಕಾರಯುತ ಸಂಸಾರ ಸಾಧ್ಯವಾಗುವುದು. ಮನೆಯಲ್ಲಿ ಮೂಡಿದ ಆಧ್ಯಾತ್ಮಿಕತೆಯಿಂದ ಶುದ್ಧವಾದ, ನಿಷ್ಕಲ್ಮಶ ಭಕ್ತಿ ಜಗದೊಡೆಯ ಶ್ರೀಕೃಷ್ಣನ ಶ್ರೀರಕ್ಷೆಗೂ ಸಮೀಪ್ಯವುಳ್ಳದ್ದು. ಆದ್ದರಿಂದ ಮನೆ, ಮನಗಳನ್ನು ಮಂದಿರವಾಗಿಸಿ ಬಾಳಿದಾಗ ಬದುಕು ಬಂಗಾರವಾಗುವುದು. ಇದಕ್ಕೆ ಬಿ.ಆರ್ ಶೆಟ್ಟಿ ಪರಿವಾರವೇ ನಿದರ್ಶನ. ಭಕ್ತಿ ಮೂಲಕ ದುಷ್ಟಶಕ್ತಿಗಳು ದೂರಗೊಂಡು ನೆಮ್ಮದಿಯುತ, ಸಮೃದ್ಧಿಯ ಬಾಳು ಫಲಿಸುವುದು ಎಂದು ಜಗದ್ಗುರು ಶ್ರೀ ಮಧ್ವಾಚಾರ್ಯ ಮೂಲ ಮಹಾ ಸಂಸ್ಥಾನಂ (ಉಡುಪಿ ಶ್ರೀ ಪುತ್ತಿಗೆ ಮಠ) ಇದರ ಪೀಠಾಧಿಪತಿ ಶ್ರೀ ಸುಗುಣೇಂದ್ರ ತೀರ್ಥ ಸ್ವಾಮೀಜಿ ನುಡಿದರು.

ಉಡುಪಿ ವಳಕಾಡು ಅಲ್ಲಿನ 'ಶ್ರೀ ಗುರುಛಾಯಾ' ಮೂಲತಃ ಬೃಹನ್ಮುಂಬಯಿಯಲ್ಲಿನ ಪ್ರತಿಷ್ಠಿತ ಉದ್ಯಮಿ ಬಿ.ಆರ್ ಶೆಟ್ಟಿ ರೆಸ್ಟೋರೆಂಟ್ಸ್ ಪ್ರೈವೇಟ್ ಲಿಮಿಟೆಡ್‌ನ ಆಡಳಿತ ನಿರ್ದೇಶಕ ಬಿ.ಆರ್ ಶೆಟ್ಟಿ ಅವರ ಗೋರೆಗಾಂನ ಕಲ್ಪತರು ಪಿನ್ನಾಕಲ್ ನಿವಾಸದಲ್ಲಿ ವಾರ್ಷಿಕ ಗಣಪತಿ ಉತ್ಸವ ಸಂಭ್ರಮೋಲ್ಲಾಸದಿಂದ ಆಚರಿಸಲಾಗುತ್ತಿದ್ದು ಈ ಶುಭಾವಸರದಿ ಇಂದಿಲ್ಲಿ ಪುತ್ತಿಗೆಶ್ರೀಗಳು ಚಿತ್ತೈಸಿ ಪ್ರತಿಷ್ಠಾಪಿತ ಶ್ರೀ ಗಣಪತಿಗೆ ಪೂಜಿಸಿ ಆರತಿಗೈದರು. ಬಿ.ಆರ್ ಶೆಟ್ಟಿ, ಚಂಚಲಾ ಆರ್.ಶೆಟ್ಟಿ ದಂಪತಿ ಶ್ರೀಗಳನ್ನು ಚೆಂಡೆವಾದ್ಯದ ನೀನಾದದೊಂದಿಗೆ ಸಾಂಪ್ರದಾಯಿಕವಾಗಿ ಶೆಟ್ಟಿ ನಿವಾಸಕ್ಕೆ ಬರಮಾಡಿಕೊಂಡರು. ಅನುಗ್ರಹನುಡಿಗಳ ಬಳಿಕ ಶ್ರೀಪಾದರು ಬಿ.ಆರ್ ಶೆಟ್ಟಿ, ಚಂಚಲಾ ಆರ್.ಶೆಟ್ಟಿ, ಕು। ಹರ್ಷಿತಾ ಆರ್.ಶೆಟ್ಟಿ, ಡಾ। ಚಿರಂಜೀವ್ ಆರ್.ಶೆಟ್ಟಿ ಕುಟುಂಬಸ್ಥರಿಗೆ ಗೌರವಿಸಿ ಮಂತ್ರಾಕ್ಷೆಯನ್ನಿತ್ತು ಶುಭಹಾರೈಸಿದರು ಹಾಗೂ ನೆರೆದ ಸದ್ಭಕ್ತರನ್ನು ಅನುಗ್ರಹಿಸಿದರು.

ಶ್ರೀಪಾದರು ಆಗಮಿಸಿ ಶೆಟ್ಟಿ ನಿವಾಸದಲ್ಲಿನ ಮಂದಿರದಲ್ಲಿ ಶ್ರೀದೇವರಿಗೆ ಆರತಿ ಬೆಳಗಿಸಿದರು. ಪುತ್ತಿಗೆಶ್ರೀಗಳ ಪಾವನ ಉಪಸ್ಥಿತಿಯಿಂದ ಧಾರ್ಮಿಕ ಕಾರ್ಯಕ್ರಮವು ಮತ್ತಷ್ಟು ಮಂಗಳಮಯವಾಗಿದ್ದು ಈ ಸಂದರ್ಭದಲ್ಲಿ ವಿಶೇಷವಾಗಿ ಪುರೋಹಿತರಾದ ರತೀಶ್ ತಂತ್ರಿ, ನಾರಾಯಣ ಆಚಾರ್ಯ, ಪ್ರಕಾಶ್ ಆಚಾರ್ಯ ರಾಮಕುಂಜ, ಸಿಎ। ಸುಧೀರ್ ಆರ್.ಎಲ್ ಶೆಟ್ಟಿ, ಶ್ರೀ ಅದಮಾರು ಮಠ ಮುಂಬಯಿ ಶಾಖೆಯ ಪಡುಬಿದ್ರಿ ವಿ. ರಾಜೇಶ್ ರಾವ್, ಬಿ.ಎಂ ಶೆಟ್ಟಿ (ವಳಕಾಡು) ಗೋರೆಗಾಂವ್, ವೆಂಕಟೇಶ್ ಶೆಟ್ಟಿ (ವಳಕಾಡು), ಅನುಪ್ ಶೆಟ್ಟಿ, ಅಶೋಕ ಪಕ್ಕಳ ಪೆರ್ಮಂಕಿಗುತ್ತು ಸೇರಿದಂತೆ ಗಣ್ಯರನೇಕರು ಆಗಮಿಸಿ ಶುಭಕೋರಿದರು.

# ನಿರ್ದೇಶನ ಪಾಲಿಸದ ಸಚಿವರ ವಿರುದ್ಧ ಹೈಕಮಾಂಡ್ ಅಸಮಾಧಾನ

**ಬೆಂಗಳೂರು, ಸೆ.17:** ವಿಧಾನಸಭೆ ಚುನಾವಣೆಗೆ ಒಂದೂವರೆ ವರ್ಷ ಬಾಕಿಯಿರುವ ಸಂದರ್ಭದಲ್ಲೇ ಕಾಂಗ್ರೆಸ್ ಹೈಕಮಾಂಡ್ ರಾಜ್ಯ ನಾಯಕರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದು, ಕೆಲ ಸಚಿವರ ನಡವಳಿಕೆ ವಿರುದ್ಧ ತೀವ್ರ ಅಸಮಾಧಾನ ವ್ಯಕ್ತಪಡಿಸಿದೆ. ನಾಯಕತ್ವ ಬದಲಾವಣೆ, ಸಚಿವ ಸಂಪುಟ ಪುನರ್ ರಚನೆ ಸೇರಿದಂತೆ ಹಲವಾರು ಸಂದರ್ಭಗಳಲ್ಲಿ ನೀಡಿದ್ದ ಸೂಚನೆಯನ್ನು ಕಡೆಗಣಿಸಿ ಕೆಲ ಸಚಿವರು ಮನಸೋ ಇಚ್ಛೆ ನಡೆದುಕೊಳ್ಳುತ್ತಿದ್ದಾರೆ ಎಂದಿದೆ.



ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಕೆ.ಸಿ.ವೇಣುಗೋಪಾಲ್ ಮತ್ತು ರಣದೀಪ್ ಸಿಂಗ್ ಸುರ್ಜೇವಾಲ ಅವರು ಬುಧವಾರ ಬೆಂಗಳೂರಿನ ಪಕ್ಷದ ಕಚೇರಿಯಲ್ಲಿ ನಡೆಸಿದ ಸಭೆಯಲ್ಲಿ ಹಲವು ಮಹತ್ವದ ವಿಚಾರಗಳು ಚರ್ಚೆಯಾಗಿವೆ.

ಬರ ನಿರ್ವಹಣೆ ವಿಚಾರದಲ್ಲಿ ಹಣಕಾಸು ಸೌಲಭ್ಯ ಒದಗಿಸುವ ಬದಲಾಗಿ ಬೇರೆ ಬೇರೆ ಯೋಜನೆಗಳತ್ತ ಗಮನಹರಿಸುವುದು ಅನಪೇಕ್ಷಣೀಯ. ಬರ ಪರಿಸ್ಥಿತಿಯಂತಹ ಸೂಕ್ಷ್ಮ ಸಂದರ್ಭದಲ್ಲಿ ಸರ್ಕಾರ ಸಮರೋಪಾದಿ ಯಲ್ಲಿ ಕೆಲಸ ಮಾಡಬೇಕಿತ್ತು. ಆದರೆ ಕೆಲ ಸಚಿವರು ಇನ್ನೂ ಕಾರ್ಯನಿರ್ವಹಣೆಯನ್ನು ಆರಂಭಿಸಿಲ್ಲ. ಇನ್ನೂ ಕೆಲವರು ತಮ್ಮ ಕ್ಷೇತ್ರಕ್ಕೆ ಸೀಮಿತವಾಗಿದ್ದಾರೆ ಎಂದು ಶಾಸಕರು ಆರೋಪಿಸುತ್ತಿದ್ದಾರೆ. ಕೆಲವು ಗುತ್ತಿಗೆ ಕಾಮಗಾರಿಗಳಲ್ಲಿ ಭ್ರಷ್ಟಾಚಾರ ನಡೆಯುತ್ತಿದೆ ಎಂದು ಆಡಳಿತ ಪಕ್ಷದ ಶಾಸಕರೇ ಬಹಿರಂಗ ಪತ್ರ ಬರೆಯುತ್ತಿದ್ದಾರೆ. ಹೀಗಿದ್ದಾಗ ವಿರೋಧ ಪಕ್ಷದವರು ಸುಮನೆ ಇರುತ್ತಾರೆಯೇ, ಚುನಾವಣೆಯ ಸಮೀಪದ ವೇಳೆಯಲ್ಲಿ ಪ್ರತಿ ಯೊಂದು ವಿಚಾರದ ಬಗ್ಗೆಯೂ ಎಚ್ಚರಿಕೆಯಿಂದ ಇರಬೇಕು ಎಂದು ವೇಣುಗೋಪಾಲ್ ತಾಕೀತು ಮಾಡಿದ್ದಾರೆ.

**ರಾಷ್ಟ್ರಮಟ್ಟದಲ್ಲಿ ಕಾಂಗ್ರೆಸ್‌ಗೆ ಅಸ್ತಿತ್ವದ ಪ್ರಶ್ನೆ**

ಮುಂದಿನ ಅವಧಿಗೆ ಸರ್ಕಾರ ಮರಳಿ ಅಧಿಕಾರಕ್ಕೆ ಬರಲೇಬೇಕು. ಇಲ್ಲದೇ ಹೋದರೆ ಕಾಂಗ್ರೆಸ್‌ಗೆ ರಾಷ್ಟ್ರ ಮಟ್ಟದಲ್ಲಿ ಅಳಿವು-ಉಳಿವಿನ ಪ್ರಶ್ನೆ ಎದುರಾಗಲಿದೆ. ಶಾಸಕರು, ಸಚಿವರು ಪಕ್ಷದ ಸೂಚನೆಗೆ ಸ್ಪಂದಿಸದೇ ಇದ್ದರೆ ಮುಂದಿನ ಚುನಾವಣೆಯಲ್ಲಿ ಸ್ಪರ್ಧಿಸಲು ಯಾವ ಕಾರಣಕ್ಕೂ ಅವಕಾಶ ನೀಡುವುದಿಲ್ಲ. ಈ ಬಾರಿ ಪ್ರಭಾವಗಳಿಗೆ ಮಣಿಯುವುದಿಲ್ಲ, ಶಾಸಕರ, ಸಚಿವರ ಕಾರ್ಯನಿರ್ವಹಣೆ, ಸಕ್ರಿಯ ಭಾಗವಹಿಸುವಿಕೆ ಹಾಗೂ ಪಕ್ಷ ನಿಷ್ಠೆಯನ್ನು ಪ್ರಮುಖ ವಿಚಾರವನ್ನಾಗಿ ಪರಿಗಣಿಸಿ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು ಎಂದು ತಿಳಿಸಿದ್ದಾರೆ.

ಕೆಲ ಸಚಿವರು ಶಾಸಕರಿಗೆ ಸ್ಪಂದಿಸುತ್ತಿಲ್ಲ ಎಂಬ ಆರೋಪಗಳ ಬಗ್ಗೆ ಕೆ.ಸಿ.ವೇಣುಗೋಪಾಲ್ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಇಂತಹ ವಿಚಾರದಲ್ಲಿ ಮುಖ್ಯಮಂತ್ರಿಯವರು ಮುಲಾಜಿಲ್ಲದೆ ಕ್ರಮ ಜರುಗಿಸಬೇಕು. ಅಂತಹ ಸಚಿವರ ಕುರಿತಂತೆ ಹೈಕಮಾಂಡ್‌ಗೆ ವರದಿ ನೀಡುವಂತೆ ಸಲಹೆ ನೀಡಿದ್ದಾರೆ.





ಮೈಸೂರಿನಲ್ಲಿ ಗುರುವಾರ ನಡೆದ 'ಜಂಬೂ ಸವಾರಿ' ಮಾರ್ಗದ ದೈನಂದಿನ ತಾಲೀಮಿನ ವೇಳೆ, ದಸರಾ ಆನೆ ಧನಂಜಯ ಆನೆಗಳ ಮೆರವಣಿಗೆಯ ನೇತೃತ್ವ ವಹಿಸಿತ್ತು. ದೀರ್ಘಕಾಲದವರೆಗೆ ಅಂಬಾರಿ ಹೊತ್ತಿದ್ದ ಅನುಭವಿ ಆನೆ ಅಭಿಮನ್ಯು ನಿವೃತ್ತಿಯಾದ ನಂತರ, ಭವ್ಯ ಜಂಬೂಸವಾರಿ ಮೆರವಣಿಗೆಯಲ್ಲಿ ಪ್ರತಿಷ್ಠಿತ 750 ಕೆ.ಜಿ.ತೂಕದ ಚಿನ್ನದ ಅಂಬಾರಿಯನ್ನು ಹೊರುವ ಜವಾಬ್ದಾರಿಗಾಗಿ ಅರಣ್ಯ ಇಲಾಖೆಯು ಧನಂಜಯನನ್ನು ಪ್ರಮುಖ ಹಾಗೂ ಮೊದಲ ಆಯ್ಕೆಯಾಗಿ ನಿಯೋಜಿಸಿದೆ.

# ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿಗೆ ಭಾಜನರಾದ ಅನಂತ್‌ನಾಗ್

## ವಿಜಯನಗರ ಬಿಜೆಪಿ ಮಂಡಲ ಪ್ರಧಾನ ಕಾರ್ಯದರ್ಶಿ ಎ.ಜಿ.ಆನಂದ್‌ಗೌಡ ಹರ್ಷ ಅಭಿನಂದನೆ

**ಬೆಂಗಳೂರು:** ಕನ್ನಡ ಚಿತ್ರರಂಗದ ಹಿರಿಯ ನಟ, ಕಲಾ ದಿಗ್ಗಜ ಅನಂತ್ ನಾಗ್ ಅವರಿಗೆ ಪ್ರತಿಷ್ಠಿತ ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿ ಲಭಿಸಿರುವುದು ಕನ್ನಡಿಗರೆಲ್ಲರಿಗೂ ಹೆಮ್ಮೆಯ ಸಂಗತಿ ಎಂದು ವಿಜಯನಗರ ವಿಧಾನಸಭಾ ಕ್ಷೇತ್ರ ಬಿಜೆಪಿ ಮಂಡಲ ಪ್ರಧಾನ ಕಾರ್ಯದರ್ಶಿ ಎ.ಜಿ.ಆನಂದ್‌ಗೌಡ ಹರ್ಷ ವ್ಯಕ್ತಪಡಿಸಿ, ಹಿರಿಯ ನಟರಿಗೆ ಅಭಿನಂದನೆ ಸಲ್ಲಿಸಿದ್ದಾರೆ.

ಭಾರತೀಯ ಚಿತ್ರರಂಗದ ಅತ್ಯುನ್ನತ ಗೌರವ ಗಳಲ್ಲಿ ಒಂದಾದ ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿಗೆ ಅನಂತ್ ನಾಗ್ ಅವರು ಭಾಜನರಾಗಿರುವುದು ಅವರ ಸುದೀರ್ಘ ಕಲಾ ಪಯಣಕ್ಕೆ ಸಂದಿರುವ ಮಹತ್ವದ ಗೌರವವಾಗಿದೆ. ಹಲವು ದಶಕಗಳ ಕಾಲ ತಮ್ಮ ಸಹಜ ಅಭಿನಯ, ವಿಶಿಷ್ಟ ವ್ಯಕ್ತಿತ್ವ ಮತ್ತು ಬಹುಮುಖ ಪ್ರತಿಭೆಯ ಮೂಲಕ ಕನ್ನಡ ಸೇರಿದಂತೆ ಭಾರತೀಯ ಚಿತ್ರರಂಗಕ್ಕೆ ಅನಂತ್ ನಾಗ್ ಅವರು ನೀಡಿರುವ ಕೊಡುಗೆ ಅಪಾರವಾಗಿದೆ ಎಂದು ಎ.ಜಿ.ಆನಂದ್‌ಗೌಡ ತಿಳಿಸಿದ್ದಾರೆ.

ಅನಂತ್ ನಾಗ್ ಅವರು ಕೇವಲ ಒಬ್ಬ ನಟರಾಗಿ ಗುರುತಿಸಿಕೊಳ್ಳದೆ, ವಿಭಿನ್ನ ಪಾತ್ರಗಳಿಗೆ ತಮ್ಮದೇ ಆದ ಜೀವ ತುಂಬುವ ಮೂಲಕ ಪ್ರೇಕ್ಷಕರ ಮನಸ್ಸಿನಲ್ಲಿ ಶಾಶ್ವತ ಸ್ಥಾನ ಪಡೆದಿದ್ದಾರೆ. ಗಂಭೀರ ಪಾತ್ರಗಳಿಂದ ಹಿಡಿದು ಹಾಸ್ಯ, ಕೌಟುಂಬಿಕ ಹಾಗೂ ಸಾಮಾಜಿಕ ಹಿನ್ನೆಲೆಯ ಪಾತ್ರಗಳವರೆಗೆ ಅವರು ತಮ್ಮ ಅಭಿನಯದ ವೈವಿಧ್ಯತೆಯನ್ನು ಸಾಬೀತುಪಡಿಸಿದ್ದಾರೆ.



ರಂಗಭೂಮಿ, ಚಲನಚಿತ್ರ ಹಾಗೂ ಕಿರುತೆರೆಯಲ್ಲಿಯೂ ತಮ್ಮ ಪ್ರತಿಭೆಯನ್ನು ಮೆರೆದಿರುವುದು ಅವರ ಕಲಾ ಸಾಧನೆಯ ವ್ಯಾಪ್ತಿಯನ್ನು ತೋರಿಸುತ್ತದೆ.

ಅವರ ನೈಜ ಹಾಗೂ ಸಹಜ ಅಭಿನಯ ಕನ್ನಡ ಚಿತ್ರರಂಗದ ಹಲವು ತಲೆಮಾರುಗಳಿಗೆ ಪ್ರೇರಣೆಯಾಗಿದೆ. ಯಾವುದೇ ಪಾತ್ರವನ್ನು ಅತಿರೇಕವಿಲ್ಲದೆ, ಸಹಜ ಭಾವನೆಗಳೊಂದಿಗೆ ಪ್ರೇಕ್ಷಕರಿಗೆ ತಲುಪಿಸುವ ಅವರ ವಿಶಿಷ್ಟ ಶೈಲಿ ಅವರನ್ನು ಕನ್ನಡದ ಅಪರೂಪದ ಕಲಾವಿದರ ಸಾಲಿನಲ್ಲಿ ನಿಲ್ಲಿಸಿದೆ. ಅವರ ದೀರ್ಘಕಾಲದ ಕಲಾ ಸೇವೆಯನ್ನು ಗುರುತಿಸಿ ದೇಶದ ಅತ್ಯುನ್ನತ ಚಲನಚಿತ್ರ ಗೌರವಗಳಲ್ಲಿ ಒಂದಾದ ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿ ದೊರೆತಿರುವುದು ನಿಜಕ್ಕೂ ಸ್ಮರಣೀಯ ಕ್ಷಣವಾಗಿದೆ.

ಕನ್ನಡದ ಹಿರಿಯ ಕಲಾವಿದರೊಬ್ಬರಿಗೆ ರಾಷ್ಟ್ರಮಟ್ಟದ ಈ ಪ್ರತಿಷ್ಠಿತ ಗೌರವ ದೊರೆತಿರುವುದು ಕನ್ನಡ ನಾಡು, ನುಡಿ ಮತ್ತು ಕಲಾ ಕ್ಷೇತ್ರಕ್ಕೆ ಹೆಮ್ಮೆಯ ವಿಚಾರ. ಅನಂತ್ ನಾಗ್ ಅವರ ಸಾಧನೆ ಮುಂದಿನ ಪೀಳಿಗೆಯ ಕಲಾವಿದರಿಗೆ ಸ್ಫೂರ್ತಿಯಾಗಲಿದೆ. ಅವರ ಕಲಾ ಪಯಣವು ಯುವ ಪ್ರತಿಭೆಗಳಿಗೆ ಪರಿಶ್ರಮ, ಬದ್ಧತೆ ಮತ್ತು ಸೃಜನಶೀಲತೆಯ ಮಹತ್ವವನ್ನು ಸಾರುತ್ತದೆ ಎಂದು ಎ.ಜಿ.ಆನಂದ್‌ಗೌಡ ಅಭಿಪ್ರಾಯಪಟ್ಟಿದ್ದಾರೆ.

# ಬಿಸಿಯೂಟ ಪಾತ್ರೆಗೆ ಬಿದ್ದು ವಿದ್ಯಾರ್ಥಿನಿಗೆ ಗಾಯ: ಪ್ರಕರಣ ರದ್ದುಗೊಳಿಸಲು ಹೈಕೋರ್ಟ್ ನಕಾರ



**ಬೆಂಗಳೂರು, ಸೆ.17:** ಬಿಸಿ ಯೂಟದ ಸಾಂಬಾರ್ ಪಾತ್ರೆಯಲ್ಲಿ ಬಿದ್ದು ವಿದ್ಯಾರ್ಥಿನಿ ತೀವ್ರವಾಗಿ ಗಾಯಗೊಂಡ ಪ್ರಕರಣದಲ್ಲಿ ತುಮಕೂರು ಜಿಲ್ಲೆಯ ಶಿರಾ ತಾಲ್ಲೂಕಿನ ಕಳ್ಳಂಬೆಳ್ಳ ಗ್ರಾಮದ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕಿ ಶೋಭಾ ಅವರ ವಿರುದ್ಧದ ಕ್ರಿಮಿನಲ್ ಪ್ರಕರಣ ರದ್ದುಪಡಿಸಲು ಹೈಕೋರ್ಟ್ ನಿರಾಕರಿಸಿದೆ.

ಪ್ರಕರಣ ಸಂಬಂಧ ತಮ್ಮ ವಿರುದ್ಧ ಕಳ್ಳಂಬೆಳ್ಳ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಎಫ್‌ಐಆರ್ ಮತ್ತು ಶಿರಾ ಪ್ರಧಾನ ಸಿವಿಲ್ ನ್ಯಾಯಾಲಯದಲ್ಲಿನ ವಿಚಾರಣೆ ರದ್ದುಪಡಿಸುವಂತೆ ಕೋರಿ ಶೋಭಾ ಅವರು ಸಲ್ಲಿಸಿದ್ದ ಅರ್ಜಿಯನ್ನು ವಜಾಗೊಳಿಸಿ ನ್ಯಾಯಮೂರ್ತಿ ಕೆ ರಾಜೇಶ್ ರೈ ಅವರ ಪೀಠ ಗುರುವಾರ ಆದೇಶಿಸಿದೆ. ವಿಸ್ತೃತ ಆದೇಶವು ಇನ್ನಷ್ಟೇ ಬಿಡುಗಡೆಯಾಗಬೇಕಿದೆ.

ಅರ್ಜಿದಾರರ ಪರ ವಕೀಲರು, ಪ್ರಕರಣದಲ್ಲಿ ಭಾರತೀಯ ದಂಡ ಸಂಹಿತೆ (ಐಪಿಸಿ) ಸೆಕ್ಷನ್ 285 ಮತ್ತು 337 ಅಡಿಯ ನಿರ್ಲಕ್ಷ್ಯತನ ತೋರಿ ಅಪಾಯ ಉಂಟು ಮಾಡಿದ ಅಪರಾಧವು ಅರ್ಜಿದಾರರಿಗೆ ಅನ್ವಯಿಸುವುದಿಲ್ಲ. ಹಾಗಾಗಿ, ಎಫ್‌ಐಆರ್ ಮತ್ತು ವಿಚಾರಣಾ ನ್ಯಾಯಾಲಯದ ವಿಚಾರಣೆ ರದ್ದುಪಡಿಸಬೇಕು ಎಂದು ಕೋರಿದ್ದರು.

ಈ ವಾದ ಆಕ್ಷೇಪಿಸಿದ್ದ ಗಾಯಾಳು ವಿದ್ಯಾರ್ಥಿನಿ ತಂದೆಯ ಪರ ವಕೀಲೆ ಮನೋರಂಜನಿ ಅವರು, ಅರ್ಜಿದಾರರಿಗೆ ನಿರ್ಲಕ್ಷ್ಯ ಅಪರಾಧ ಅನ್ವಯಿಸಲಿದೆ. ಶಾಲೆಯಲ್ಲಿ ಅಡುಗೆ ತಯಾರಕರನ್ನು ನೇಮಿಸುವ ಮತ್ತು ಅವರ ಮೇಲ್ವಿಚಾರಣೆ ನೋಡಿಕೊಳ್ಳುವ ಹೊಣೆ ಮುಖ್ಯ ಶಿಕ್ಷಕರದ್ದಾಗಿದೆ. ಬಿಸಿಯೂಟ ತಯಾರಿಕೆ ಮತ್ತು ಮಕ್ಕಳಿಗೆ ಊಟ ಬಡಿಸುವುದಕ್ಕೆ ಸರ್ಕಾರ ಮಾರ್ಗಸೂಚಿ ಪ್ರಕಟಿಸಿದೆ. ಅದನ್ನು ಪಾಲಿಸುವಲ್ಲಿ ಅರ್ಜಿದಾರರು ವಿಫಲವಾಗಿದ್ದು, ಎಫ್‌ಐಆರ್ ರದ್ದುಪಡಿಸಬಾರದು ಎಂದು ಕೋರಿದರು.

# ಋತುಚಕ್ರ ರಜೆ: ಆದೇಶ ಕಾಯ್ದಿರಿಸಿದ ಹೈಕೋರ್ಟ್

**ಬೆಂಗಳೂರು, ಸೆ.17:** ರಾಜ್ಯದಲ್ಲಿ ವಿವಿಧ ಕಾರ್ಮಿಕ ಕಾಯಿದೆಗಳಡಿ ನೋಂದಣಿಯಾಗಿರುವ ಉದ್ದಿಮೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ನೌಕರರಿಗೆ ಮಾಸಿಕ ಒಂದು ದಿನದ ವೇತನಸಹಿತ ಋತುಚಕ್ರದ ರಜೆ ನೀಡುವ ಸಂಬಂಧ ಸರ್ಕಾರ ಹೊರಡಿಸಿರುವ ಅಧಿಸೂಚನೆ ಪ್ರಶ್ನಿಸಿ ಸಲ್ಲಿಸಲಾದ ಅರ್ಜಿಗಳ ವಿಚಾರಣೆ ಪೂರ್ಣಗೊಳಿಸಿದ ಹೈಕೋರ್ಟ್ ತೀರ್ಪನ್ನು ಕಾಯ್ದಿರಿಸಿದೆ.

ಮಾಸಿಕ ಒಂದು ದಿನ ವೇತನಸಹಿತ ಋತುಚಕ್ರ ರಜೆ ಸಂಬಂಧ ಕಾರ್ಮಿಕ ಇಲಾಖೆ 2025ರ ನವೆಂಬರ್ 20ರಂದು ಹೊರಡಿಸಿರುವ ಅಧಿಸೂಚನೆ ಪ್ರಶ್ನಿಸಿ ಕರ್ನಾಟಕ ಎಂಪ್ಲಾಯರ್ಸ್ ಅಸೋಸಿಯೇಷನ್, ಬೆಂಗಳೂರು ಹೋಟೆಲ್‌ಗಳ ಸಂಘ, ಅವಿರತ ಡಿಫೆನ್ಸ್ ಸಿಸ್ಟಮ್, ಬೆಂಗಳೂರು ಎಂಪ್ಲಾಯರ್ಸ್ ಅಸೋಸಿಯೇಷನ್ ಮತ್ತಿತರರು ಸಲ್ಲಿಸಿರುವ ಅರ್ಜಿಗಳ ವಿಚಾರಣೆಯನ್ನು ನ್ಯಾಯಮೂರ್ತಿ ಅನಂತ ರಾಮನಾಥ ಹೆಗಡೆ ಅವರ ಏಕಸದಸ್ಯ ಪೀಠ ವಿಚಾರಣೆ ನಡೆಸಿತು.

ರಾಜ್ಯ ಸರ್ಕಾರವನ್ನು ಪ್ರತಿನಿಧಿಸಿದ್ದ ಅಡ್ವೋಕೇಟ್ ಜನರಲ್ ಕೆ ಶಶಿಕಿರಣ್ ಶೆಟ್ಟಿ ಅವರು ಆರೋಗ್ಯದ ವಿಷಯವು ಸಂವಿಧಾನದ ಸಮವರ್ತಿ ಪಟ್ಟಿ (ಕನ್ಕರೆಂಟ್ ಲಿಸ್ಟ್) ಅಡಿ ಬರುತ್ತದೆ. ಅದರಂತೆ ಸಂವಿಧಾನದ 162ನೇ ವಿಧಿ ಪ್ರಕಾರ ರಾಜ್ಯ ಸರ್ಕಾರಕ್ಕೆ ತೀರ್ಮಾನ ಕೈಗೊಳ್ಳುವ ಅಧಿಕಾರವಿರಲಿದೆ.

ಈ ವಿಚಾರದಲ್ಲಿ ಒಕ್ಕೂಟ ವ್ಯವಸ್ಥೆಯ ಪ್ರಶ್ನೆ ಉದ್ಭವಿಸುವುದಿಲ್ಲ. ತಜ್ಞರ ಸಮಿತಿಯ ವರದಿ ಆಧಾರದಲ್ಲಿ ಸರ್ಕಾರ ಈ ನಿರ್ಧಾರ ತೆಗೆದುಕೊಂಡಿದೆ. ತಜ್ಞರ ಸಮಿತಿ ಅರ್ಜಿದಾರರ ಅಹವಾಲು, ಆಕ್ಷೇಪ, ಸಲಹೆಗಳನ್ನು ಆಲಿಸಿದೆ. ಕಾನೂನು ಆಯೋಗ ಸಹ ಇದರ ಶಿಫಾರಸ್ಸು ಮಾಡಿತ್ತು. ಇದೆಲ್ಲದರ ಮಿಗಿಲಾಗಿ ಮಹಿಳೆಯರ ಆರೋಗ್ಯ ಮತ್ತು ಘನತೆಯ ದೃಷ್ಟಿಯಿಂದ ಋತುಚಕ್ರ ರಜೆ ನೀತಿ ಜಾರಿಗೆ ತರಲಾಗಿದೆ ಎಂದು ಸರ್ಕಾರದ ಕ್ರಮವನ್ನು ಸಮರ್ಥಿಸಿಕೊಂಡರು.

ಸಂವಿಧಾನದ ಸಮವರ್ತಿ ಪಟ್ಟಿಯಲ್ಲಿರುವ ವಿಷಯಗಳಲ್ಲಿ ರಾಜ್ಯ ಸರ್ಕಾರ ಸೀಮಿತ ಸಂದರ್ಭಗಳಲ್ಲಿ ತೀರ್ಮಾನ ಕೈಗೊಳ್ಳಬಹುದು. ಆದರೆ, ಅದಕ್ಕೆ ಸ್ವತಂತ್ರ ಮತ್ತು ವ್ಯಾಪಕ ಅಧಿಕಾರ ಇರುವುದಿಲ್ಲ. ರಾಜ್ಯಪಾಲರು ಅನುಮೋದನೆ ಅಗತ್ಯವಾಗಿದೆ. ರಾಜ್ಯ ಸರ್ಕಾರದ ಈ ಆದೇಶವು ಸಂವಿಧಾನದ 14ನೇ ವಿಧಿ ಅಡಿಯ ಸಮಾನತೆ ಹಕ್ಕಿಗೆ ವಿರುದ್ಧವಾಗಿದೆ.

ಲಿಂಗ ತಾರತಮ್ಯಗೆ ಎಡೆ ಮಾಡಿಕೊಡುತ್ತದೆ. ಮಹಿಳೆಯರು ಪುರುಷರಿಗಿಂತ ದುರ್ಬಲರು ಎಂಬ ಭಾವನೆಯನ್ನು ಉದ್ಯೋಗದಾತರಲ್ಲಿ ಮೂಡಿಸುತ್ತದೆ. ಇದರಿಂದ ಮಹಿಳಾ ಉದ್ಯೋಗಿಗಳನ್ನು ನೇಮಕ ಮಾಡಲು ಹಾಗೂ ಬಡ್ತಿಗೆ ಕಂಪೆನಿಗಳು ಹಿಂದೇಟು ಹಾಕುತ್ತವೆ.

ಋತುಚಕ್ರ ಸಮಯದಲ್ಲಿ ಮಾಸಿಕ ಒಂದು ದಿನ ಕಡ್ಡಾಯ ರಜೆ ನೀಡುವುದರಿಂದ ಸ್ಪರ್ಧಾತ್ಮಕ ವೃತ್ತಿ ಜೀವನದಲ್ಲಿ ಮಹಿಳೆಯರಿಗೆ ಹಿನ್ನಡೆಯಾಗುವ ಸಾಧ್ಯತೆಯಿದೆ. ಉದ್ಯೋಗದಾತರಿಗೆ ಹೊರೆ ಹೆಚ್ಚುತ್ತದೆ.

ಮಹಿಳಾ ಉದ್ಯೋಗಿಗಳ ದಕ್ಷತೆ ಕಡಿಮೆ ಮಾಡುತ್ತದೆ. ಮಹಿಳಾ ನೌಕರರ ಸಬಲೀಕರಣಕ್ಕೂ ಅಡ್ಡಿಯಾಗುತ್ತದೆ ಎಂದು ಅರ್ಜಿದಾರರು ಆಕ್ಷೇಪಿಸಿದ್ದಾರೆ. ಸುದೀರ್ಘವಾದ ವಾದ-ಪ್ರತಿವಾದ ಆಲಿಸಿದ ಪೀಠವು ಆದೇಶ ಕಾಯ್ದಿರಿಸಿತು.

# ಮೋದಿ 76ನೇ ಜನ್ಮದಿನ: ಎ.ಜಿ.ಆನಂದ್‌ಗೌಡ ಶುಭಾಶಯ

**ಬೆಂಗಳೂರು:** ಭಾರತದ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ 76ನೇ ಜನ್ಮದಿನದ ಅಂಗವಾಗಿ ವಿಜಯನಗರ ವಿಧಾನಸಭಾ ಕ್ಷೇತ್ರ ಬಿಜೆಪಿ ಮಂಡಲ ಪ್ರಧಾನ ಕಾರ್ಯದರ್ಶಿ ಎ.ಜಿ.ಆನಂದ್ ಗೌಡ ಅವರು ಹೃತ್ಪೂರ್ವಕ ಶುಭಾಶಯಗಳನ್ನು ಕೋರಿದ್ದಾರೆ.

ನರೇಂದ್ರ ಮೋದಿ ಅವರು ದೇಶದ ಪ್ರಧಾನ ಮಂತ್ರಿಯಾಗಿ ಜನಸೇವೆ, ರಾಷ್ಟ್ರದ ಅಭಿವೃದ್ಧಿ ಹಾಗೂ ಭಾರತದ ಜಾಗತಿಕ ಸ್ಥಾನಮಾನವನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ನಿರಂತರವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. 17 ಸೆಪ್ಟೆಂಬರ್ 1950ರಂದು ಗುಜರಾತ್‌ನ ವಡನಗರದಲ್ಲಿ ಜನಿಸಿದ ನರೇಂದ್ರ ಮೋದಿ ಅವರು ತಮ್ಮ ಸಾರ್ವಜನಿಕ ಜೀವನದ ವಿವಿಧ ಹಂತಗಳನ್ನು ದಾಟಿ ದೇಶದ ಪ್ರಧಾನಮಂತ್ರಿಯ ಜವಾಬ್ದಾರಿ ವಹಿಸಿಕೊಂಡಿದ್ದಾರೆ.

2024ರ ಲೋಕಸಭಾ ಚುನಾವಣೆಯ ನಂತರ ಜೂನ್ 9ರಂದು ನರೇಂದ್ರ ಮೋದಿ ಅವರು ಸತತ ಮೂರನೇ ಬಾರಿಗೆ ಭಾರತದ ಪ್ರಧಾನ ಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದ್ದಾರೆ.

ದೇಶದ ಅಭಿವೃದ್ಧಿಯ ಜೊತೆಗೆ ಬಡವರು, ಮಧ್ಯಮ ವರ್ಗ, ರೈತರು, ಮಹಿಳೆಯರು ಹಾಗೂ ಯುವಜನರ ಕಲ್ಯಾಣಕ್ಕೆ ಸಂಬಂಧಿಸಿದ ಹಲವು ಕಾರ್ಯಕ್ರಮಗಳಿಗೆ ಕೇಂದ್ರ ಸರ್ಕಾರ ಆದ್ಯತೆ ನೀಡುತ್ತಿದೆ. ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯೋಗಾವಕಾಶ, ಮೂಲಸೌಕರ್ಯ, ತಂತ್ರಜ್ಞಾನ ಹಾಗೂ ಡಿಜಿಟಲ್ ಸೇವೆಗಳ ವಿಸ್ತರಣೆಯಂತಹ ಕ್ಷೇತ್ರಗಳಲ್ಲಿ ಸರ್ಕಾರದ ವಿವಿಧ ಯೋಜನೆಗಳು ಜಾರಿಯಲ್ಲಿವೆ.




ನರೇಂದ್ರ ಮೋದಿ ಅವರ ಸಾರ್ವಜನಿಕ ಜೀವನದ ಪಯಣವು ಪರಿಶ್ರಮ, ಶಿಸ್ತು ಮತ್ತು ಜನಸೇವೆಯೊಂದಿಗೆ ಗುರುತಿಸಿಕೊಂಡಿದೆ. ಸಾಮಾನ್ಯ ಕುಟುಂಬದ ಹಿನ್ನೆಲೆಯಿಂದ ಬಂದ ಅವರು ಸಂಘಟನೆ ಮತ್ತು ಸಾರ್ವಜನಿಕ ಜೀವನ ದಲ್ಲಿ ಹಲವು ಜವಾಬ್ದಾರಿಗಳನ್ನು ನಿರ್ವಹಿಸಿ ಗುಜರಾತ್ ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿದ ಬಳಿಕ ದೇಶದ ಪ್ರಧಾನಮಂತ್ರಿಯಾಗಿ ಜವಾಬ್ದಾರಿ ವಹಿಸಿಕೊಂಡಿದ್ದಾರೆ.

ಪ್ರಧಾನಮಂತ್ರಿಯವರ ನೇತೃತ್ವದಲ್ಲಿ ಭಾರತವು ಅಭಿವೃದ್ಧಿ ಹೊಂದಿದ ರಾಷ್ಟ್ರವಾಗುವ ಸಂಕಲ್ಪದೊಂದಿಗೆ ಮುನ್ನಡೆಯಲಿ. ದೇಶದ ಯುವ ಜನರಿಗೆ ಹೆಚ್ಚಿನ ಅವಕಾಶಗಳು ದೊರೆಯಲಿ, ರೈತರು ಹಾಗೂ ಕಾರ್ಮಿಕರ ಬದುಕು ಮತ್ತಷ್ಟು ಸುಧಾರಿಸಲಿ, ಮಹಿಳಾ ಸಬಲೀಕರಣಕ್ಕೆ ಇನ್ನಷ್ಟು ವೇಗ ದೊರೆಯಲಿ ಹಾಗೂ ಪ್ರತಿಯೊಬ್ಬ ಭಾರತೀಯನ ಜೀವನಮಟ್ಟ ಉತ್ತಮಗೊಳ್ಳಲಿ ಎಂಬುದು ನಮ್ಮ ಆಶಯವಾಗಿದೆ ಎಂದು ಎ.ಜಿ.ಆನಂದ್‌ಗೌಡ ಅವರು ತಿಳಿಸಿದ್ದಾರೆ.

ನರೇಂದ್ರ ಮೋದಿ ಅವರಿಗೆ ಜನ್ಮದಿನದ ಹಾರ್ದಿಕ ಶುಭಾಶಯಗಳನ್ನು ಸಲ್ಲಿಸಿರುವ ಅವರು, ಪ್ರಧಾನಮಂತ್ರಿಯವರಿಗೆ ಉತ್ತಮ ಆರೋಗ್ಯ, ದೀರ್ಘಾಯುಷ್ಯ ಹಾಗೂ ದೇಶದ ಸೇವೆ ಮಾಡಲು ಇನ್ನಷ್ಟು ಶಕ್ತಿ ದೊರೆಯಲಿ ಎಂದು ಹಾರೈಸಿದ್ದಾರೆ. ಅವರ ನೇತೃತ್ವದಲ್ಲಿ ಭಾರತವು ಅಭಿವೃದ್ಧಿ ಮತ್ತು ಪ್ರಗತಿಯ ಪಥದಲ್ಲಿ ಮತ್ತಷ್ಟು ಮುನ್ನಡೆಯಲಿ ಎಂದು ಆಶಿಸಿದ್ದಾರೆ.

ದೇಶದ ಅಭಿವೃದ್ಧಿ ಮತ್ತು ಜನಸೇವೆಯ ಸಂಕಲ್ಪದೊಂದಿಗೆ ಪ್ರಧಾನಮಂತ್ರಿಯವರ ಸೇವಾ ಪಯಣ ನಿರಂತರವಾಗಿ ಸಾಗಲಿ. ನರೇಂದ್ರ ಮೋದಿ ಅವರಿಗೆ 76ನೇ ಜನ್ಮದಿನದ ಹಾರ್ದಿಕ ಶುಭಾಶಯಗಳು ಎಂದು ಎ.ಜಿ.ಆನಂದ್‌ಗೌಡ ತಿಳಿಸಿದ್ದಾರೆ.

## ಜಿಬಿಎನಲ್ಲಿ ಎ-ಖಾತೆ ಪರಿವರ್ತನೆ:

# ಪಾಲಿಕೆಗಳಿಗೆ 3 ತಿಂಗಳಲ್ಲಿ 58 ಕೋಟಿ ರೂ. ಆದಾಯ




**ಬೆಂಗಳೂರು, ಸೆ.17:** ಬಿ-ಖಾತೆ ಹೊಂದಿರುವ ಆಸ್ತಿ ಮಾಲೀಕರಿಗೆ ಎ-ಖಾತೆಗೆ ಪರಿವರ್ತನೆ ಮಾಡಿಕೊಳ್ಳಲು ರಾಜ್ಯ ಸರ್ಕಾರ ನೀಡಿದ್ದ ವಿಶೇಷ ಅವಕಾಶಕ್ಕೆ ಬೆಂಗಳೂರಿನಲ್ಲಿ ಉತ್ತಮ ಸ್ಪಂದನೆ ವ್ಯಕ್ತವಾಗಿದ್ದು, ಕಳೆದ ಮೂರು ತಿಂಗಳಲ್ಲಿ ಐದು ನಗರಪಾಲಿಕೆಗಳ ಖಜಾನೆಗೆ 58 ಕೋಟಿ ರೂ. ಆದಾಯ ಹರಿದುಬಂದಿದೆ.

ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ವ್ಯಾಪ್ತಿಯ ಐದು ನಗರಪಾಲಿಕೆಗಳಲ್ಲಿ ಮೇ 23 ರಂದು ನನ್ನ ಇ-ಖಾತಾ ನನ್ನ ಹಕ್ಕು ಅಭಿಯಾನಕ್ಕೆ ಚಾಲನೆ ನೀಡಲಾಗಿತ್ತು. ಬಿ ಖಾತೆಯಿಂದ ಎ ಖಾತೆಗೆ ಪರಿವರ್ತನೆ ಮಾಡಿಕೊಳ್ಳುವ ಆಸ್ತಿ ಮಾಲೀಕರಿಗೆ ಸೀಮಿತ ಅವಧಿಯಲ್ಲಿ ವಿಶೇಷ ಅವಕಾಶ ಕಲ್ಪಿಸಲಾಗಿತ್ತು.

ಸರ್ಕಾರದ ಆದೇಶದಂತೆ, ಮೇ 15ರಿಂದ ಆಗಸ್ಟ್ 23ರವರೆಗೆ 100 ದಿನಗಳ ಕಾಲ ಬಿ ಖಾತೆಯಿಂದ ಎ ಖಾತೆಗೆ ಪರಿವರ್ತನೆ ಸಂದರ್ಭದಲ್ಲಿ ಏಕನಿವೇಶನಗಳ ವಿನ್ಯಾಸ ಅನುಮೋದನೆಗೆ ಪಾವತಿಸಬೇಕಿದ್ದ ಶುಲ್ಕವನ್ನು ಆಸ್ತಿಯ ಮಾರ್ಗಸೂಚಿ ಮೌಲ್ಯದ ಶೇ.5ರಿಂದ ಶೇ.2ಕ್ಕೆ ಇಳಿಸಲಾಗಿತ್ತು.

ಈ ಅವಕಾಶವನ್ನು ಬಳಸಿಕೊಂಡು ಸಾವಿರಾರು ಆಸ್ತಿ ಮಾಲೀಕರು ಎ ಖಾತೆಗೆ ಅರ್ಜಿ ಸಲ್ಲಿಸಿದ್ದಾರೆ.ಆಸ್ತಿ ದಾಖಲೆಗಳ ಸುರಕ್ಷತೆ ಹಾಗೂ ವಂಚನೆ ತಡೆಗಟ್ಟುವ ಉದ್ದೇಶದಿಂದ ಬೆಂಗಳೂರಿನ 23 ಲಕ್ಷಕ್ಕೂ ಅಧಿಕ ಆಸ್ತಿ ದಾಖಲೆಗಳನ್ನು ಸ್ಕ್ಯಾನ್ ಮಾಡಿ ಡಿಜಿಟಲೀಕರಣಗೊಳಿಸಲಾಗಿದೆ.

ಅಂತಿಮ ಇ-ಖಾತಾಗಳನ್ನು ಮನೆಬಾಗಿಲಿಗೆ ತಲುಪಿಸುವಂತೆಯೂ ಅಧಿಕಾರಿಗಳಿಗೆ ಸೂಚಿಸಲಾಗಿತ್ತು.

ರಾಜ್ಯ ಸರ್ಕಾರದ ಭೂ ಗ್ಯಾರಂಟಿ ಯೋಜನೆಯಡಿ ಮೇ 16ರಿಂದ ಸೇವಾ ಕೇಂದ್ರಗಳನ್ನು ಆರಂಭಿಸಿ, ಪ್ರತಿ ಕೇಂದ್ರದಲ್ಲಿ ಸುಮಾರು 100 ನಾಗರಿಕರಿಗೆ ಸೇವೆ ಒದಗಿಸುವ ವ್ಯವಸ್ಥೆ ಮಾಡಲಾಗಿತ್ತು.ಅಭಿಯಾನದಡಿ ಬಿ ಖಾತೆಯಿಂದ ಎ ಖಾತೆಗೆ ಪರಿವರ್ತನೆಗಾಗಿ ಒಟ್ಟು 81,502 ಆಸ್ತಿ ಮಾಲೀಕರು ಅರ್ಜಿ ಸಲ್ಲಿಸಿದ್ದು, ಈ ಪೈಕಿ 26,647 ಮಂದಿ ಶುಲ್ಕ ಪಾವತಿಸಿದ್ದಾರೆ. ಇದರಿಂದ ಐದು ನಗರಪಾಲಿಕೆಗಳಿಗೆ ಒಟ್ಟು ಸುಮಾರು 58 ಕೋಟಿ ಆದಾಯ ಬಂದಿದೆ.

**ಉತ್ತರ ನಗರಪಾಲಿಕೆ**

ಒಟ್ಟು ಅರ್ಜಿಗಳು-23703, ಬಿ ಟು ಎ ಖಾತಾ ಪರಿವರ್ತನೆಗೆ ಹಣ ಪಾವತಿ ಮಾಡಿದ ಆಸ್ತಿ ಮಾಲೀಕರು-8052, ಒಟ್ಟು ಆದಾಯ-1569896699 ರೂ.

**ದಕ್ಷಿಣ ನಗರಪಾಲಿಕೆ:**

ಒಟ್ಟು ಅರ್ಜಿಗಳು-17473, ಬಿ ಟು ಎ ಖಾತಾ ಪರಿವರ್ತನೆಗೆ ಹಣ ಪಾವತಿ ಮಾಡಿದ ಅಸ್ತಿ ಮಾಲೀಕರು-5940. ಒಟ್ಟು ಆದಾಯ - 1373831206 ರೂ.

**ಪಶ್ಚಿಮ ನಗರಪಾಲಿಕೆ:**

ಒಟ್ಟು ಅರ್ಜಿಗಳು-22764, ಬಿ ಟು ಎ ಖಾತಾ ಪರಿವರ್ತನೆಗೆ ಹಣ ಪಾವತಿ ಮಾಡಿದ ಅಸ್ತಿ ಮಾಲೀಕರು-7668, ಒಟ್ಟು ಆದಾಯ - 1459456383 ರೂ.

**ಕೇಂದ್ರ ನಗರಪಾಲಿಕೆ:**

ಒಟ್ಟು ಅರ್ಜಿಗಳು-756, ಬಿ ಟು ಎ ಖಾತಾ ಪರಿವರ್ತನೆಗೆ ಹಣ ಪಾವತಿ ಮಾಡಿದ ಅಸ್ತಿ ಮಾಲೀಕರು-113, ಒಟ್ಟು ಆದಾಯ-22299003 ರೂ.

**ಪೂರ್ವ ನಗರಪಾಲಿಕೆ:**

ಒಟ್ಟು ಅರ್ಜಿಗಳು-16807, ಬಿ ಟು ಎ ಖಾತಾ ಪರಿವರ್ತನೆಗೆ ಹಣ ಪಾವತಿ ಮಾಡಿದ ಅಸ್ತಿ ಮಾಲೀಕರು-4874, ಒಟ್ಟು ಆದಾಯ - 1346187555 ರೂ. ಐದು ಪಾಲಿಕೆಗಳಿಂದ ಬಂದ ಒಟ್ಟು ಆದಾಯ - 5771670846 ರೂ.

# ಅಂಗಡಿ ಮಾಲೀಕನಿಂದ ಲಂಚ ಪಡೆಯುವಾಗಲೇ ಲೋಕಾಯುಕ್ತ ಬಲೆಗೆ ಬಿದ್ದ ಜಿಎಸ್‌ಟಿ ಅಧಿಕಾರಿ

**ಬೆಂಗಳೂರು, ಸೆ.17:** ಕಬ್ಬಿಣದ ಅಂಗಡಿ ಮಾಲೀಕನಿಂದ 8 ಲಕ್ಷ ರೂ. ಲಂಚ ಪಡೆಯುವಾಗ ಜಿಎಸ್‌ಟಿ ಸೂಪರಿಂಟೆಂಡೆಂಟ್ ಲೋಕಾಯುಕ್ತ ಬಲೆಗೆ ಬಿದ್ದಿರುವ ಘಟನೆ ಬೆಂಗಳೂರಲ್ಲಿ ನಡೆದಿದೆ. ಮೋಹಿತ್ ಪ್ರತಾಪ್ ಸಿಂಗ್ ಲೋಕಾಯುಕ್ತ ಬಲೆಗೆ ಬಿದ್ದ ಅಧಿಕಾರಿಯಾಗಿದ್ದು, ಕಬ್ಬಿಣದ ಅಂಗಡಿ GST ವಿಚಾರವಾಗಿ 20 ಲಕ್ಷ ಲಂಚ ಕೊಡುವಂತೆ ಜಮೀರ್ ಎಂಬವರ ಬಳಿ ಬೇಡಿಕೆ ಇಟ್ಟಿದ್ದರು. ಈ ಸಂಬಂಧ 8 ಲಕ್ಷ ರೂ. ಲಂಚ ಪಡೆಯುವಾಗ ಲೋಕಾಯುಕ್ತ ದಾಳಿ ನಡೆಸಿದೆ.

ಅಧಿಕಾರಿ ಲಂಚ ಪಡೆಯುತ್ತಿರುವ ವಿಡಿಯೋ ಕೂಡ ಲಭ್ಯವಿದೆ ಎನ್ನಲಾಗಿದ್ದು, ಜಿಎಸ್‌ಟಿ ಸೂಪರಿಂಟೆಂಡೆಂಟ್‌ನನ್ನು ಬಂಧಿಸಿ ಲೋಕಾಯುಕ್ತ ಅಧಿಕಾರಿಗಳು ವಿಚಾರಣೆ ನಡೆಸುತ್ತಿದ್ದಾರೆ. ಹೆಚ್ಚು ಆರೋಪಗಳು ಕೇಳಿಬಂದ ಹಿನ್ನೆಲೆ ಬನ್ನೇರುಘಟ್ಟ ಮತ್ತು ಮಂಟಪ ಪಂಚಾಯತ್ ಸಿಬ್ಬಂದಿಗೂ ಲೋಕಾಯುಕ್ತ ಅಧಿಕಾರಿಗಳು ಶಾಕ್ ಕೊಟ್ಟಿದ್ದಾರೆ. ಲೋಕಾಯುಕ್ತ ಡಿವೈಎಸ್ಪಿ ಗಿರೀಶ್ ನೇತೃತ್ವದಲ್ಲಿ ರೇಡ್ ನಡೆದಿದ್ದು, ಎರಡೂ ಪಂಚಾಯತ್ ಕಚೇರಿಗಳಲ್ಲಿ ದಾಖಲೆಗಳ ಪರಿಶೀಲನೆ ನಡೆಸಲಾಗಿದೆ. ಅದರಲ್ಲೂ ಬನ್ನೇರುಘಟ್ಟ ಪಂಚಾಯತ್‌ನಲ್ಲಿ ಅಕ್ರಮದ ಬಗ್ಗೆ ಸಾಲು ಸಾಲು ಆರೋಪ ಕೇಳಿಬಂದಿದ್ದ ಹಿನ್ನೆಲೆ ಲೋಕಾಯುಕ್ತ ಮಾಹಿತಿ ಕಲೆಹಾಕಿದೆ.ಮತ್ತೊಂದೆಡೆ, ನಿನ್ನೆ 50 ಲಕ್ಷ ಲಂಚ ಪಡೆಯುವಾಗ ಸಿಕ್ಕಿಬಿದ್ದಿದ್ದ ಧಾರವಾಡ ತಹಶೀಲ್ದಾರ್ ಸಚ್ಚಿದಾನಂದರನ್ನು 14 ದಿನಗಳ ಕಾಲ ನ್ಯಾಯಾಂಗ ಬಂಧನಕ್ಕೆ ನೀಡಿ ಲೋಕಾಯುಕ್ತ ಕೋರ್ಟ್ ಆದೇಶ ನೀಡಿದೆ.



33 ಎಕರೆ ಜಮೀನು ಸಂಬಂಧ ಭೂಮಿಯ ಖರಾಬು ತೆಗೆಯಲು, ಅಂದರೆ ಆ ದಾಖಲೆಯನ್ನು ಸರಿಪಡಿಸಲು ತಹಶೀಲ್ದಾರ್ ಹಣಕ್ಕೆ ಬೇಡಿಕೆ ಇಟ್ಟಿದ್ದರು. ಈ ಸಂಬಂಧ ನಗರದ ಕರ್ನಾಟಕ ಕಾಲೇಜು ಬಳಿ ಹಣ ಪಡೆಯುವಾಗ ಸಾಕ್ಷಿಸಮೇತ ಲೋಕಾಯುಕ್ತ ಅಧಿಕಾರಿಗಳ ಕೈಗೆ ಅವರು ಸಿಕ್ಕಿಬಿದ್ದಿದ್ದರು.

# ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆ: ಮೀಸಲಾತಿ ನಿಯಮಗಳಿಗೆ ಹೊಸರೂಪ, ಸಮಾನತೆಯ ನೂತನ ಅಧ್ಯಾಯ

**ಬೆಂಗಳೂರು, ಸೆ.17:** ಕರ್ನಾಟಕದ ನಗರ ಸ್ಥಳೀಯ ಸಂಸ್ಥೆಗಳ ಚುನಾವಣಾ ಪ್ರಕ್ರಿಯೆಗೆ ಇದೀಗ ಹೊಸದಿಕ್ಕು ತೋರಿಸಿದೆ. ಜನಸಂಖ್ಯೆಯ ಆಧಾರದ ಮೇಲೆ, ಆವರ್ತನೆಯ ತತ್ವದ ಮೂಲಕ ಮೀಸಲಾತಿ ನಿಗದಿಪಡಿಸುವ ಸಂವಿಧಾನದ ಅನುಚ್ಛೇದ 243-ಖಿ ಹಾಗೂ ಪುರಸಭೆಗಳ ಅಧಿನಿಯಮದ ಪ್ರಕಾರ ಹೊರಡಿಸಲಾದ ಈ ಆದೇಶವು, ಸಾಮಾಜಿಕ ನ್ಯಾಯದ ತತ್ವವನ್ನು ಬಲಪಡಿಸುವ ಮಹತ್ವದ ಹೆಜ್ಜೆಯಾಗಿದೆ.

ಅನುಸೂಚಿತ ಜಾತಿ, ಅನುಸೂಚಿತ ಪಂಗಡ, ಹಿಂದುಳಿದ ವರ್ಗಗಳು ಮತ್ತು ಮಹಿಳೆಯರಿಗೆ ಸಮಾನ ಹಕ್ಕುಗಳನ್ನು ಖಚಿತಪಡಿಸುವ ಈ ಮಾರ್ಗಸೂಚಿಗಳು, ಪ್ರಜಾಪ್ರಭುತ್ವದ ಮೂಲಭೂತ ತತ್ವಗಳನ್ನು ಮತ್ತಷ್ಟು ಗಟ್ಟಿಗೊಳಿಸುತ್ತ ಸಾಗಲಿದೆಸಂವಿಧಾನದ ಅನುಚ್ಛೇದ 243-T ಹಾಗೂ ಪುರಸಭೆಗಳ ಅಧಿನಿಯಮದ ಪ್ರಕಾರ ಹೊರಡಿಸಲಾದ ಈ ಆದೇಶವು, ಪ್ರತಿಯೊಂದು ವಾರ್ಡಿನಲ್ಲಿ ಸಮಾನ ಅವಕಾಶವನ್ನು ಒದಗಿಸುವ ಮೂಲಕ, ಸಮಾಜದ ಎಲ್ಲಾ ವರ್ಗಗಳ ಪ್ರತಿನಿಧಿತ್ವವನ್ನು ಖಚಿತಪಡಿಸುವ ಗುರಿ ಹೊಂದಿದೆ. ಜನಗಣತಿಯ ಅಂಕಿಅಂಶಗಳನ್ನು ಆಧಾರವಾಗಿ ತೆಗೆದುಕೊಂಡು, ನ್ಯಾಯಸಮ್ಮತ ಹಂಚಿಕೆ ಮಾಡುವ ಈ ಕ್ರಮವು, ಮುಂದಿನ ಚುನಾವಣೆಯಲ್ಲಿ ಪಾರದರ್ಶಕತೆ ಮತ್ತು ಸಮಾನತೆಯ ನೂತನ ಅಧ್ಯಾಯವನ್ನು ಬರೆಯಲಿದೆ.

ಸರ್ಕಾರವು ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ ವಾರ್ಡುಗಳಿಗೆ ಆವರ್ತನೆಯ ಮೇಲೆ ಮೀಸಲಾತಿಯನ್ನು ನಿಗದಿಪಡಿಸಲು ಪರಿಷ್ಕೃತ ಮಾರ್ಗಸೂಚಿಗಳನ್ನು ಪ್ರಕಟಿಸಿದೆ. ಸಂವಿಧಾನದ ಆಧಾರದಲ್ಲಿ ಈ ಆದೇಶ ಮಾಡಲಾಗಿದೆ. ಅದರಂತೆ ಮುಂದಿನ ಚುನಾವಣೆಗಳಲ್ಲಿ ಅನುಸೂಚಿತ ಜಾತಿ, ಅನುಸೂಚಿತ ಪಂಗಡ, ಹಿಂದುಳಿದ ವರ್ಗಗಳು ಮತ್ತು ಮಹಿಳೆಯರಿಗೆ ಮೀಸಲಾತಿ ಜಾರಿಗೊಳಿಸಲಾಗುವುದು. ಮೀಸಲಾತಿ ನಿಗದಿಪಡಿಸುವಾಗ ಇತ್ತೀಚಿನ ಜನಗಣತಿಯ ಅಂಕಿಅಂಶಗಳನ್ನು ಆಧಾರವಾಗಿ ಬಳಸಲಾಗುವುದು. ಒಟ್ಟು ಮೀಸಲಾತಿ ಪ್ರಮಾಣವು ಶೇ.50 ಮೀರಬಾರದು ಎಂಬ ನಿಯಮವನ್ನು ಕಟ್ಟುನಿಟ್ಟಾಗಿ ಪಾಲಿಸಲಾಗುವುದು. ಅನುಸೂಚಿತ ಜಾತಿ ಮತ್ತು ಪಂಗಡಗಳಿಗೆ ಮೀಸಲಾದ ಸ್ಥಾನಗಳನ್ನು ವಾರ್ಡುಗಳ ಜನಸಂಖ್ಯೆಯ ಇಳಿಮುಖ ಕ್ರಮದಲ್ಲಿ ಹಂಚಲಾಗುವುದು. ಎಸ್‌ಸಿ/ಎಸ್‌ಟಿ ಎಂಬ ಅನುಕ್ರಮದ ಪ್ರಕಾರ, ಮೊದಲು ಅನುಸೂಚಿತ ಜಾತಿ ಪಟ್ಟಿಯ ಅತೀ ಹೆಚ್ಚು ಜನಸಂಖ್ಯೆಯ ವಾರ್ಡು, ನಂತರ ಅನುಸೂಚಿತ ಪಂಗಡದ ಅತೀ ಹೆಚ್ಚು ಜನಸಂಖ್ಯೆಯ ವಾರ್ಡು ಮೀಸಲಾತಿಗೆ ಒಳಪಡಲಿದೆ. ಪ್ರತಿ ನಗರಸಭೆ ಅಥವಾ ಪಟ್ಟಣ ಪಂಚಾಯಿತಿಯಲ್ಲಿ ಕನಿಷ್ಠ ಒಂದು ಸ್ಥಾನವನ್ನು ಅನುಸೂಚಿತ ಜಾತಿ ಮತ್ತು ಪಂಗಡಗಳಿಗೆ ಮೀಸಲಿಡುವುದು ಕಡ್ಡಾಯವಾಗಿದೆ. ಮೀಸಲಾದ ಸ್ಥಾನಗಳಲ್ಲಿ ಶೇ.50 ಸ್ಥಾನ ಮಹಿಳೆಯರಿಗೆ ಮೀಸಲಿಡಲಾಗುವುದು. ಹಿಂದುಳಿದ ವರ್ಗಗಳಿಗೆ ಮೀಸಲಾದ ಸ್ಥಾನಗಳಲ್ಲಿ ಶೇ.80ರಷ್ಟು 'ಎ' ವರ್ಗಕ್ಕೆ ಹಾಗೂ ಶೇ.20ರಷ್ಟು 'ಬಿ' ವರ್ಗಕ್ಕೆ ಹಂಚಿಕೆ ಮಾಡಲಾಗುವುದು. ಹಿಂದುಳಿದ ವರ್ಗಗಳಲ್ಲಿಯೂ ಮಹಿಳೆಯರಿಗೆ ಶೇ.50ರಷ್ಟು ಸ್ಥಾನ ಮೀಸಲಿರಲಿದೆ.

## ಕೆಪಿಎಸ್‌ಸಿ ಪಶುವೈದ್ಯಾಧಿಕಾರಿ ನೇಮಕಾತಿ ಅಕ್ರಮ

# ನಾಪತ್ತೆಯಾಗಿದ್ದ ಸದಸ್ಯೆ ಶಾಂತಾ ಹೊಸಮನಿ ಸಿಐಡಿ ಎದುರು ಹಾಜರು

**ಬೆಂಗಳೂರು, ಸೆ.17:** ಕೆಪಿಎಸ್‌ಸಿ ಪಶುವೈದ್ಯಾಧಿಕಾರಿ ನೇಮಕಾತಿ ಪರೀಕ್ಷೆಯಲ್ಲಿ ಅಕ್ರಮ ಎಸಗಿದ ಪ್ರಕರಣಕ್ಕೆ ಸಂಬಂಧಿಸಿದಂತೆ ನಾಪತ್ತೆಯಾಗಿದ್ದ ಸದಸ್ಯೆ ಶಾಂತಾ ಹೊಸಮನಿ ಕೊನೆಗೂ ಸಿಐಡಿ ಮುಂದೆ ಗುರುವಾರ ವಿಚಾರಣೆಗೆ ಹಾಜರಾಗಿದ್ದರು.

ಕೆಎಎಸ್ ಸೇರಿದಂತೆ 3 ಪ್ರಮುಖ ನೇಮಕಾತಿಗಳಲ್ಲಿ ಭ್ರಷ್ಟಾಚಾರ ನಡೆಸಿದ ಆರೋಪ ಎದುರಿಸುತ್ತಿರುವ ಕೆಪಿಎಸ್‌ಸಿ ಸದಸ್ಯೆ ಶಾಂತಾ ಹೊಸಮನಿ ಅವರ ನಿರೀಕ್ಷಣಾ ಜಾಮೀನು ಅರ್ಜಿಯನ್ನು ಬೆಂಗಳೂರಿನ 52ನೇ ಸಿಸಿಎಚ್ ನ್ಯಾಯಾಲಯ ಕಳೆದವಾರ ವಜಾಗೊಳಿಸಿತ್ತು. ಜಾಮೀನು ಅರ್ಜಿ ವಜಾಗೊಂಡ ಹಿನ್ನೆಲೆಯಲ್ಲಿ ಇಂದು ಬೆಳಗ್ಗೆ ಸಿಐಡಿ ಮುಂದೆ ಶಾಂತಾ ಅವರು ಹಾಜರಾಗಿದ್ದಾರೆ.

ಕೆಎಎಸ್, ಪಶುವೈದ್ಯಾಧಿಕಾರಿ ಹಾಗೂ ಗ್ರಾಮೀಣಾ ಭಿವದ್ಧಿ ಇಲಾಖೆಯ ಎಇಇ ಹುದ್ದೆಗಳ ನೇಮಕಾತಿಯಲ್ಲಿ ಅಭ್ಯರ್ಥಿಗಳಿಂದ ಕೋಟ್ಯಂತರ ರೂಪಾಯಿ ಲಂಚ ಪಡೆದು ಹುದ್ದೆ ಕೊಡಿಸಲು ಮುಂದಾಗಿದ್ದಾರೆ ಎಂಬ ಗಂಭೀರ ಆರೋಪಗಳು ಇವರ ಮೇಲಿವೆ. ಈ ಹಿನ್ನೆಲೆಯಲ್ಲಿ ಇವರ ವಿರುದ್ಧ ವಿಧಾನಸೌಧ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿತ್ತು.




ಜಾರಿ ನಿರ್ದೇಶನಾಲಯ ಹಾಗೂ ಸಿಐಡಿ ಪ್ರಕರಣ ತನಿಖೆ ಕೈಗೆತ್ತಿಕೊಂಡ ಬಳಿಕ ಅವರು ತಲೆಮರೆಸಿಕೊಂಡಿದ್ದರು. ಶಾಂತಾ ಹೊಸಮನಿ ಅವರು ದೇಶಬಿಟ್ಟು ಹೋಗದಂತೆ ತಡೆಯಲು ಲುಕ್‌ಔಟ್ ನೋಟಿಸ್ ಕೂಡ ಹೊರಡಿಸಲಾಗಿತ್ತು.



ಕಲಬುರಗಿಯಲ್ಲಿ ಗುರುವಾರ ನಡೆದ 79ನೇ ಕಲ್ಯಾಣ ಕರ್ನಾಟಕ ಉತ್ಸವದಲ್ಲಿ ಪಾಲ್ಗೊಂಡ ಜಾನಪದ ಕಲಾ ತಂಡಗಳು.

# ದೀಪದ ಬೆಳಕಿನ 'ಬೀದಿ ಉತ್ಸವ'ಕ್ಕೆ ಸಿಎಂ ಡಿ.ಕೆ. ಶಿವಕುಮಾರ್ ಚಾಲನೆ



**ಕಲಬುರಗಿ, ಸೆ. 17:** ಕಲ್ಯಾಣ ಕರ್ನಾಟಕ ಉತ್ಸವದ ಅಂಗವಾಗಿ ನಗರದ ಪಬ್ಲಿಕ್ ಗಾರ್ಡನ್‌ನಲ್ಲಿ ಅಂದದ ಬೆಳಕಿನ ಸಾಲಿನಲ್ಲಿ ಸೃಷ್ಟಿಯಾಗಿದ್ದ ಬೀದಿ ಉತ್ಸವವು (ಸ್ಟ್ರೀಟ್ ಫೆಸ್ಟಿವಲ್) ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಅವರ ಸಂಪುಟ ಸಹೋದ್ಯೋಗಿಗಳ ಆಗಮನದೊಂದಿಗೆ ಕಳೆಗಟ್ಟಿತು. ಎರಡು ದಿನಗಳ ಕಾಲ ನಡೆಯುವ ಉತ್ಸವದಲ್ಲಿ ಭಾಗವಹಿಸಲು ಬೆಂಗಳೂರಿನಿಂದ ವಿಶೇಷ ವಿಮಾನದ ಮೂಲಕ ನಗರಕ್ಕೆ ಬಂದ ಮುಖ್ಯಮಂತ್ರಿಯವರು ವಿಮಾನ ನಿಲ್ದಾಣದಿಂದ ನೇರವಾಗಿ ಚಿತ್ತಾಕರ್ಷಕ ದೀಪಗಳ ಸಾಲಿನಲ್ಲಿ ನವವಧುವಿನಂತೆ ಕಂಗೊಳಿಸುತ್ತಿದ್ದ ಪಬ್ಲಿಕ್ ಗಾರ್ಡನ್ ಆವರಣಕ್ಕೆ ಬಂದಿಳಿದರು. ಪ್ರವಾಸೋದ್ಯಮ ಇಲಾಖೆಯಿಂದ ಆಯೋಜಿಸಿರುವ ಕಲ್ಯಾಣ ಕರ್ನಾಟಕ ಭಾಗದ ಐತಿಹಾಸಿಕ ತಾಣಗಳ ಕಲಾಕೃತಿಗಳ ಪ್ರದರ್ಶನ, ಬೀದರ್‌ನ ಬಿದ್ರಿ ಕಲೆ, ಕೊಪ್ಪಳದ ಕಿನ್ನಾಳ ಕಲೆ, ಬಳ್ಳಾರಿಯ ಜೀನ್ಸ್ ಸೇರಿದಂತೆ ವಿವಿಧ ಕಲಾಕೃತಿಗಳನ್ನು ಶಿವಕುಮಾರ್ ಅವರು ಆಸಕ್ತಿಯಿಂದ ವೀಕ್ಷಿಸಿದರು. ಬಿದ್ರಿ ಕಲೆಯ ಮಳಿಗೆಗೆ ಬಂದ ಶಿವಕುಮಾರ್ ತಮಗಿಷ್ಟವಾದ ಕಲಾಕೃತಿಯನ್ನು ಪಡೆದುಕೊಂಡರು. ಬಳ್ಳಾರಿಯಲ್ಲಿ ತಯಾರಾದ ಜೀನ್ಸ್ ಬಟ್ಟೆಯನ್ನು ಖರೀದಿಸಿದರು.

ಅಲ್ಲಿಂದ ಬ್ಯಾಟರಿ ಚಾಲಿತ ವಾಹನದಲ್ಲಿ ಸಚಿವರಾದ ಪ್ರಿಯಾಂಕ್ ಖರ್ಗೆ, ಡಾ.ಶರಣಪ್ರಕಾಶ್ ಪಾಟೀಲ, ಡಾ. ಅಜಯ್ ಸಿಂಗ್, ಶಾಸಕರಾದ ಅಲ್ಲಮಪ್ರಭು ಪಾಟೀಲ, ಎಂ.ವೈ. ಪಾಟೀಲ, ವಿಧಾನಪರಿಷತ್ ಸದಸ್ಯರಾದ ಜಗದೇವ ಗುತ್ತೇದಾರ, ತಿಪ್ಪಣ್ಣಪ್ಪ ಕಮಕನೂರ ಅವರೊಂದಿಗೆ ಪಬ್ಲಿಕ್ ಗಾರ್ಡನ್‌ನ ರಸ್ತೆಯ ಎಡಬದಿಯಲ್ಲಿ ಅಳವಡಿಸಿದ್ದ ಚಿತ್ರಕಲಾ ಮಳಿಗೆ, ಕ್ಲೇ ಮಾಡೆಲಿಂಗ್ ಮಳಿಗೆಗಳನ್ನು ವೀಕ್ಷಿಸಿದರು. ವಾಹನದಿಂದ ಇಳಿದು ಅಲ್ಲಿದ್ದ ಫಲಕದ ಮೇಲೆ ಚಿತ್ರಕಲಾ ಪ್ರದರ್ಶನಕ್ಕೆ ಶುಭ ಹಾರೈಸಿ ತಮ್ಮ ಹಸ್ತಾಕ್ಷರವನ್ನು ನೀಡಿದರು. ನಂತರ ಕೆಲ ಹೊತ್ತು ಕಲಾವಿದರೊಂದಿಗೆ ಸಂವಾದ ನಡೆಸಿದರು. ಇಕ್ಕೆಲಗಳಲ್ಲಿ ಸೇರಿದ್ದ ಜನರನ್ನು ಕಂಡು ಅವರತ್ತ ಕೈಬೀಸಿದರು. ಇದಕ್ಕೂ ಮುನ್ನ ಮಕ್ಕಳಿಂದಲೇ ರಿಬ್ಬನ್ ಕತ್ತರಿಸಿ ಬೀದಿ ಉತ್ಸವವನ್ನು ಉದ್ಘಾಟಿಸಿದರು.

ಮುಖ್ಯಮಂತ್ರಿ ಸ್ಟ್ರೀಟ್ ಫೆಸ್ಟಿವಲ್ ಉದ್ಘಾಟನೆ ಸಂದರ್ಭದಲ್ಲಿ ಭಾರಿ ಬಂದೋಬಸ್ತ್ ಏರ್ಪಡಿಸಲಾಗಿತ್ತು. ಕೆಲಕಾಲ ಅನ್ನಪೂರ್ಣ ಕ್ರಾಸ್‌ನಿಂದ ಜಗತ್ ಸರ್ಕಲ್ ಹಾಗೂ ಜಗತ್ ಸರ್ಕಲ್‌ನಿಂದ ಶರಣಬಸವೇಶ್ವರ ದೇವಸ್ಥಾನಕ್ಕೆ ತೆರಳುವ ರಸ್ತೆಯಲ್ಲಿ ವಾಹನಗಳ ಸಂಚಾರವನ್ನು ನಿರ್ಬಂಧಿಸಲಾಗಿತ್ತು.

ಸಂಜೆಯಿಂದಲೇ ಸಾರ್ವಜನಿಕರಿಗೆ ಮುಕ್ತಗೊಂಡಿದ್ದ ಸ್ಟ್ರೀಟ್ ಫೆಸ್ಟಿವಲ್‌ನತ್ತ ಧಾವಿಸಿದ ಸಾರ್ವಜನಿಕರು ಕಲಾಕೃತಿಗಳನ್ನು ನೋಡಿ ಕಣ್ತುಂಬಿಕೊಂಡರು. ಆಹಾರ ಮಳಿಗೆಗಳಿಗೆ ಭೇಟಿ ನೀಡಿ ತಮಗಿಷ್ಟವಾದ ತಿನಿಸನ್ನು ಸವಿದರು. ತರಹೇವಾರಿ ಆಟಗಳನ್ನು ನೋಡಿದರು. ಸಂಗೀತ ಆಸ್ವಾದಿಸಿದರು.

### ಕಾಂಗ್ರೆಸ್ ಹೆಚ್ಚಿನ ಕ್ಷೇತ್ರಗಳನ್ನು ಗೆಲ್ಲಲು ಈಗಿನಿಂದಲೇ ಸಂಘಟನೆ, ಅಭಿವೃದ್ಧಿಯತ್ತ ನಿಗಾ

# 2028ರ ವಿಧಾನಸಭೆ ಚುನಾವಣೆಗಾಗಿ ಕರಾವಳಿ ಭಾಗದ ಮೇಲೆ ಸಿಎಂ ವಿಶೇಷ ಗಮನ

**ಮಂಗಳೂರು, ಸೆ.17:** 2028ರ ವಿಧಾನಸಭಾ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕರಾವಳಿ ಭಾಗದ ಮೇಲೆ ವಿಶೇಷ ಗಮನ ಹರಿಸಿದ್ದಾರಾ ಎಂಬ ಚರ್ಚೆ ಇದೀಗ ರಾಜಕೀಯ ವಲಯದಲ್ಲಿ ಆರಂಭವಾಗಿದೆ. ದಕ್ಷಿಣ ಕನ್ನಡ, ಉಡುಪಿ ಹಾಗೂ ಉತ್ತರ ಕನ್ನಡ ಜಿಲ್ಲೆಗಳನ್ನು ಒಳಗೊಂಡ ಕರಾವಳಿ ಭಾಗದಲ್ಲಿ ಕಾಂಗ್ರೆಸ್ ಹೆಚ್ಚಿನ ಕ್ಷೇತ್ರಗಳನ್ನು ಗೆಲ್ಲುವ ಗುರಿಯೊಂದಿಗೆ ಈಗಿನಿಂದಲೇ ಸಂಘಟನೆ ಹಾಗೂ ಅಭಿವೃದ್ಧಿ ವಿಚಾರಗಳ ಮೇಲೆ ಗಮನ ಹರಿಸಲಾಗುತ್ತಿದೆ ಎಂಬ ಮಾತುಗಳು ಕೇಳಿಬರುತ್ತಿವೆ.

ಡಿ.ಕೆ. ಶಿವಕುಮಾರ್ ಮುಖ್ಯಮಂತ್ರಿ ಹುದ್ದೆ ವಹಿಸಿಕೊಂಡ ಆರಂಭದಲ್ಲೇ ಕರಾವಳಿ ಭಾಗದಲ್ಲಿ ಕಾಂಗ್ರೆಸ್ ಬಲಪಡಿಸಬೇಕು ಎಂಬ ಗುರಿಯನ್ನು ಸ್ಥಳೀಯ ನಾಯಕರಿಗೆ ನೀಡಿದ್ದರು ಎಂಬ ಚರ್ಚೆಯೂ ಇದೆ. ಮೂರು ಜಿಲ್ಲೆಗಳಲ್ಲಿ ಒಟ್ಟು 19 ವಿಧಾನಸಭಾ ಕ್ಷೇತ್ರಗಳಿದ್ದು, ಕಳೆದ ಚುನಾವಣೆಯಲ್ಲಿ ಕಾಂಗ್ರೆಸ್ ಗೆದ್ದಿರುವುದು 6 ಕ್ಷೇತ್ರಗಳು ಮಾತ್ರ. ಹೀಗಾಗಿ ಮುಂದಿನ ಚುನಾವಣೆಯಲ್ಲಿ ಈ ಸಂಖ್ಯೆ ಹೆಚ್ಚಿಸುವ ನಿಟ್ಟಿನಲ್ಲಿ ಈಗಿನಿಂದಲೇ ರಾಜಕೀಯ ಹಾಗೂ ಅಭಿವೃದ್ಧಿ ಯೋಜನೆಗಳನ್ನು ರೂಪಿಸಲಾಗುತ್ತಿದೆ ಎಂಬ ವಿಶ್ಲೇಷಣೆಗಳು ನಡೆಯುತ್ತಿವೆ.ಇದರ ನಡುವೆ 18ರಂದು ಮಂಗಳೂರಿನಲ್ಲಿ ವಿಶೇಷ ಸಚಿವ ಸಂಪುಟ ಸಭೆ ನಡೆಯಲಿದೆ.



ಕರಾವಳಿ ಜಿಲ್ಲೆಗಳ ಅಭಿವೃದ್ಧಿಗೆ ಸಂಬಂಧಿಸಿದ ಪ್ರಸ್ತಾವನೆಗಳನ್ನು ಸಭೆಯಲ್ಲಿ ಚರ್ಚೆಗೆ ತರುವಂತೆ ಸರ್ಕಾರದ ಮಟ್ಟದಲ್ಲಿ ಸೂಚನೆ ನೀಡಲಾಗಿದೆ. ಇದು ಮಂಗಳೂರಿನಲ್ಲಿ ನಡೆಯುತ್ತಿರುವ ರಾಜ್ಯದ ಮೊದಲ ವಿಶೇಷ ಸಚಿವ ಸಂಪುಟ ಸಭೆಯಾಗಿದ್ದು, ಕರಾವಳಿಯ ದೀರ್ಘಕಾಲದ ಬೇಡಿಕೆಗಳು ಹಾಗೂ ಅಭಿವೃದ್ಧಿ ವಿಚಾರಗಳ ಮೇಲೆ ಗಮನ ಹರಿಸುವ ನಿರೀಕ್ಷೆ ಇದೆ. ಸಭೆಯಲ್ಲಿ ಬಂದರು, ರಸ್ತೆ ಸೇರಿದಂತೆ ಮೂಲಸೌಕರ್ಯ, ಮೀನುಗಾರಿಕೆ, ಕೈಗಾರಿಕೆ, ಪ್ರವಾಸೋದ್ಯಮ ಸೇರಿದಂತೆ ಹಲವು ಕ್ಷೇತ್ರಗಳಿಗೆ ಸಂಬಂಧಿಸಿದ ಯೋಜನೆಗಳು ಚರ್ಚೆಗೆ ಬರುವ ಸಾಧ್ಯತೆ ಇದೆ.

ಕರಾವಳಿ ಭಾಗದ ಅಗತ್ಯಗಳನ್ನು ಸ್ಥಳೀಯವಾಗಿಯೇ ಅರ್ಥ ಮಾಡಿಕೊಂಡು ನಿರ್ಧಾರ ಕೈಗೊಳ್ಳುವುದು ಸಭೆಯ ಉದ್ದೇಶ ಎಂದು ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.. ಕರಾವಳಿಗೆ ವಿಶೇಷ ಅನುದಾನ, ಹೊಸ ಯೋಜನೆಗಳು ಹಾಗೂ ಮಹತ್ವದ ಅಭಿವೃದ್ಧಿ ಯೋಜನೆಗಳನ್ನು ಸಿಎಂ ಡಿ.ಕೆ. ಶಿವಕುಮಾರ್ ಘೋಷಣೆ ಮಾಡ್ತಾರಾ? ಅಭಿವೃದ್ಧಿ ನಿರ್ಧಾರಗಳ ಮೂಲಕ ಕರಾವಳಿಯಲ್ಲಿ ಕಾಂಗ್ರೆಸ್‌ಗೆ ರಾಜಕೀಯವಾಗಿ ಹೊಸ ಬಲ ತುಂಬುವ ಪ್ರಯತ್ನ ನಡೆಯುತ್ತಾ ಎಂಬ ಪ್ರಶ್ನೆಯೂ ಚರ್ಚೆಯಲ್ಲಿದೆ. ಆದರೆ ಅಂತಿಮವಾಗಿ ಯಾವ ಯೋಜನೆಗಳಿಗೆ ಅನುಮೋದನೆ ಸಿಗಲಿದೆ ಎಂಬುದು ಸಚಿವ ಸಂಪುಟದ ನಿರ್ಧಾರದ ಬಳಿಕವೇ ಸ್ಪಷ್ಟವಾಗಲಿದೆ.

# ಸಿಎಂಗೆ ಕಪ್ಪುಬಟ್ಟೆ ಪ್ರದರ್ಶಿಸಲು ಮುಂದಾಗಿದ್ದ ಹೋರಾಟಗಾರರ ಬಂಧನ

**ಕಲಬುರಗಿ, ಸೆ.17:** ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆಯ ನಡುವೆಯೇ ಕಲಬುರಗಿಯಲ್ಲಿ ಪ್ರತಿಭಟನೆಯ ಕಾವು ಹೆಚ್ಚಾಗಿದೆ. ತಳವಾರ್ ಸಮಾಜವನ್ನು ಪರಿಶಿಷ್ಟ ಪಂಗಡಕ್ಕೆ ಸೇರ್ಪಡೆ ಮಾಡಬೇಕು ಎಂದು ಆಗ್ರಹಿಸಿ ಹಲವು ವರ್ಷಗಳಿಂದ ಹೋರಾಟ ನಡೆಸುತ್ತಿರುವ ಮುಖಂಡರು, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಭೇಟಿಗೆ ವಿರೋಧ ವ್ಯಕ್ತಪಡಿಸಲು ಮುಂದಾಗಿದ್ದರು. ಚೌಡಾಪುರ ಕ್ರಾಸ್ ಬಳಿ ಸಿಎಂಗೆ ಕಪ್ಪು ಬಟ್ಟೆ ಪ್ರದರ್ಶಿಸಲು ಸಿದ್ಧತೆ ನಡೆಸಿದ್ದ ಹೋರಾಟಗಾರರನ್ನು ಪೊಲೀಸರು ಮುಂಜಾಗ್ರತಾ ಕ್ರಮವಾಗಿ ಬಂಧಿಸಿದ್ದಾರೆ.

ಅಫಜಲಪುರ ತಾಲೂಕಿನ ಚೌಡಾಪುರ ಕ್ರಾಸ್ ಮೂಲಕ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಗಾಣಗಾಪುರಕ್ಕೆ ತೆರಳಬೇಕಿತ್ತು. ಗಾಣಗಾಪುರದ ಶ್ರೀ ಗುರು ದತ್ತಾತ್ರೇಯ ದೇವಸ್ಥಾನಕ್ಕೆ ಭೇಟಿ ನೀಡಿ ದರ್ಶನ ಪಡೆಯುವ ಕಾರ್ಯಕ್ರಮವಿತ್ತು. ಈ ಹಿನ್ನೆಲೆಯಲ್ಲಿ ಸಿಎಂ ಸಂಚರಿಸುವ ಮಾರ್ಗದಲ್ಲಿ ತಳವಾರ್ ಸಮಾಜದವರು ಕಪ್ಪು ಬಟ್ಟೆ ಪ್ರದರ್ಶಿಸಲು ಸಿದ್ಧತೆ ಮಾಡಿಕೊಂಡಿದ್ದರು. ಸಿಎಂ ಆಗಮಿಸುವುದಕ್ಕೂ ಮುನ್ನವೇ ಪೊಲೀಸರು ಪ್ರತಿಭಟನಾಕಾರರನ್ನು ವಶಕ್ಕೆ ಪಡೆದು ನಿಂಬರ್ಗಾ ಪೊಲೀಸ್ ಠಾಣೆಗೆ ಕರೆದೊಯ್ದಿದ್ದಾರೆ.

ತಳವಾರ್ ಸಮಾಜವನ್ನು ಪರಿಶಿಷ್ಟ ಪಂಗಡಕ್ಕೆ ಸೇರ್ಪಡೆ ಮಾಡುವ ಬೇಡಿಕೆಯನ್ನು ಮುಂದಿಟ್ಟುಕೊಂಡು ಸಮುದಾಯದ ಮುಖಂಡರು ಹಲವು ವರ್ಷಗಳಿಂದ ಹೋರಾಟ ನಡೆಸುತ್ತಿದ್ದಾರೆ. ತಮ್ಮ ಬೇಡಿಕೆಯನ್ನು ಸರ್ಕಾರ ಈಡೇರಿಸಬೇಕು ಎಂದು ಒತ್ತಾಯಿಸಿರುವ ಮುಖಂಡರು, ಸರ್ಕಾರದ ಗಮನ ಸೆಳೆಯಲು ಕಪ್ಪು ಬಾವುಟ ಹಾಗೂ ಕಪ್ಪು ಬಟ್ಟೆ ಪ್ರದರ್ಶನಕ್ಕೆ ಮುಂದಾಗಿದ್ದರು. ಇದರ ಬೆನ್ನಲ್ಲೇ ಕಲ್ಯಾಣ ಕರ್ನಾಟಕ ಉತ್ಸವದ ಕಾರ್ಯಕ್ರಮಗಳಿಗೂ ಪ್ರತಿಭಟನೆಯ ಬಿಸಿ ತಟ್ಟಿದೆ. ಕಲಬುರಗಿ ನಗರದಲ್ಲಿ ಸರ್ಕಾರಿ ಶಾಲೆಗಳನ್ನು ಉಳಿಸಬೇಕು ಎಂಬ ಬೇಡಿಕೆಯೊಂದಿಗೆ ಎಸ್‌ಎಫ್‌ಐ ಕಾರ್ಯಕರ್ತರು ಕೂಡ ಪ್ರತಿಭಟನೆ ನಡೆಸಿದರು. ಸರ್ದಾರ್ ವಲ್ಲಭಭಾಯಿ ಪಟೇಲ್ ಪ್ರತಿಮೆ ಬಳಿ ಪ್ರತಿಭಟನೆಗೆ ಆಗಮಿಸಿದ ಹೋರಾಟಗಾರರನ್ನು ಪೊಲೀಸರು ವಶಕ್ಕೆ ಪಡೆದರು. ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದ ಎಸ್‌ಎಫ್‌ಐ ಕಾರ್ಯಕರ್ತರು, ಶೈಕ್ಷಣಿಕ ಅಭಿವೃದ್ಧಿಗೆ ಆದ್ಯತೆ ನೀಡದೆ ಉತ್ಸವಗಳನ್ನು ನಡೆಸುವುದರಿಂದ ಏನು ಪ್ರಯೋಜನ ಎಂದು ಪ್ರಶ್ನಿಸಿದರು.

# 371(ಜೆ) ಕಲ್ಯಾಣ ಅಭ್ಯುದಯಕ್ಕೆ ಶ್ರೀರಕ್ಷೆ: ಖರ್ಗೆ



**ಕಲಬುರಗಿ, ಸೆ.17:** 371(ಜೆ) ಕಲಂ ಕಲ್ಯಾಣ ಕರ್ನಾಟಕದ ಜನರ ಅಭ್ಯುದಯಕ್ಕೆ ಸಿಕ್ಕ ಶ್ರೀರಕ್ಷೆಯಾಗಿದೆ ಎಂದು 371(ಜೆ) ಸಂಪುಟ ಉಪ ಸಮಿತಿ ಅಧ್ಯಕ್ಷ ಪ್ರಿಯಾಂಕ್ ಖರ್ಗೆ ಪ್ರತಿಪಾದಿಸಿದರು.

371(ಜೆ) ಮೂಲಕ ಮಲ್ಲಿಕಾರ್ಜುನ ಖರ್ಗೆ ಅವರು ಪಂಚ ಗ್ಯಾರಂಟಿಗಳಿಗೂ ಮುನ್ನವೇ ಶಿಕ್ಷಣ, ಉದ್ಯೋಗದಲ್ಲಿ ಮೀಸಲಾತಿ, ಅನುದಾನದ ಗ್ಯಾರಂಟಿಯನ್ನು ಕಲ್ಯಾಣ ಭಾಗಕ್ಕೆ ನೀಡಿದ್ದಾರೆ. ಹೀಗಾಗಿ 371(ಜೆ) ಸಂಪೂರ್ಣ ಅನುಷ್ಠಾನಕ್ಕೆ ನಮ್ಮ ಸರ್ಕಾರ ಬದ್ಧವಾಗಿದೆ ಎಂದು ಪುನರುಚ್ಚರಿಸಿದರು.

371(ಜೆ) ಕಲಂನಿಂದಾಗಿ ಕಲ್ಯಾಣಕ್ಕೆ ಈತನಕ ?24,770 ಕೋಟಿ ಅನುದಾನ ಹರಿದು ಬಂದಿದೆ. 1,19,923 ಸರ್ಕಾರಿ ಹುದ್ದೆಗಳಲ್ಲಿ ಮೀಸಲಾತಿ ಸಿಕ್ಕಿದೆ. ಅದರಲ್ಲಿ 85 ಸಾವಿರ ಹುದ್ದೆಗಳ ಭರ್ತಿಯೂ ನಡೆದಿದೆ. 30 ಸಾವಿರ ಮಂದಿಗೆ ಬಡ್ತಿಯಲ್ಲಿ ನೆರವಾಗಿದೆ. 11 ಸಾವಿರಕ್ಕೂ ಹೆಚ್ಚು ವೈದ್ಯಕೀಯ ಸೀಟು ಸಿಕ್ಕಿವೆ. 30 ಸಾವಿರಕ್ಕೂ ಅಧಿಕ ಎಂಜಿನಿಯರಿಂಗ್ ಸೀಟು ದೊರೆತಿವೆ. ಇಷ್ಟೆಲ್ಲ ಆಗಿದ್ದರೂ ಮಲ್ಲಿಕಾರ್ಜುನ ಖರ್ಗೆ ಸೋತರು. ನಮ್ಮಲ್ಲಿ ಆಚಾರ, ವಿಚಾರ ಇದ್ದರೂ, ಪ್ರಚಾರದ ಕೊರತೆಯಿದೆ ಎಂದು ಅವರು ಹೇಳಿದರು.

371(ಜೆ) ಕಲಂ ಅನುಷ್ಠಾನದಲ್ಲಿ ತೊಡಕುಗಳ ನಿವಾರಣೆಗೆ ನಾನು, ಶರಣಪ್ರಕಾಶ ಪಾಟೀಲ ನಿರಂತರವಾಗಿ ಶ್ರಮಿಸುತ್ತಿದ್ದೇವೆ. ನಾನು 371(ಜೆ) ಸಂಪುಟ ಉಪಸಮಿತಿ ಅಧ್ಯಕ್ಷನಾದ ಬಳಿಕ 140 ಅರ್ಜಿಗಳು ವಿಲೇವಾರಿಗೆ ಕಾಯುತ್ತಿದ್ದವು. ಇದೀಗ ಅವುಗಳ ಸಂಖ್ಯೆ 68ಕ್ಕೆ ಇಳಿಸಿದ್ದೇನೆ. 371(ಜೆ) ಕಲಂ ಜಾರಿಯಾಗಿ 13 ವರ್ಷಗಳೇ ಉರುಳಿವೆ. ಬಹುತೇಕ ಯುವಜನರ ಒಂದು ತಲೆಮಾರು ಅದರ ಪ್ರಯೋಜನ ಪಡೆದಿದೆ. ಇದೀಗ ಯುವಜನರ ಭವಿಷ್ಯ ಕಟ್ಟುವಂಥ ಕೆಲಸ ನಾವು ಮಾಡುತ್ತಿದ್ದೇವೆ. ನವ ಕಲಬುರಗಿ ನಿರ್ಮಾಣಕ್ಕೆ ರೂಪುರೇಷೆ ಹಾಕಿದ್ದೇವೆ. ಜನರ ಜೀವನಮಟ್ಟ ಸುಧಾರಣೆಗೆ ಸ್ಥಳೀಯ ಆರ್ಥಿಕ ಚಟುವಟಿಕೆಗಳಿಗೆ ವೇಗ ನೀಡುವ ಕಾರ್ಯ ಪ್ರಗತಿಯಲ್ಲಿದೆ ಎಂದರು.

ಸಚಿವ ಡಾ.ಶರಣಪ್ರಕಾಶ ಪಾಟೀಲ ಮಾತನಾಡಿ, 371(ಜೆ) ಕಲಂ ಮಲ್ಲಿಕಾರ್ಜುನ ಖರ್ಗೆ ಅವರ ಶ್ರಮದ ಫಲ. ಹೀಗಾಗಿ 371(ಜೆ) ಕಲಂ ಶೇ 100ರಷ್ಟು ಅನುಷ್ಠಾನ ಶತಸಿದ್ಧ. ಬಡ್ತಿಯಲ್ಲಿನ ತೊಡಕು ನಿವಾರಣೆ, ಪ್ರತ್ಯೇಕ ನೇಮಕಾತಿ ನಡೆಸಲು ಶಕ್ತಿಮೀರಿ ಶ್ರಮಿಸುತ್ತಿದ್ದೇವೆ. 371(ಜೆ) ಕಲಂ ಬಗ್ಗೆ ಸಮಸ್ಯೆಗಳಿದ್ದರೆ ಚರ್ಚಿಸಿ ಪರಿಹರಿಸೋಣ. ಆದರೆ, ಪಕ್ಷಾತೀತವಾಗಿ ಕಲ್ಯಾಣದವರೆಲ್ಲೂ ಏಕಧ್ವನಿಯಲ್ಲಿ 371(ಜೆ) ಕಲಂ ಬಗ್ಗೆ ಯುವ ಜನರಲ್ಲಿ ಜಾಗೃತಿ ಮೂಡಿಸಬೇಕಿದೆ ಎಂದು ಅವರು ಹೇಳಿದರು.

### ಪ್ರಧಾನಿ ಮೋದಿ ಆಡಳಿತದಲ್ಲಿ ಆರ್ಥಿಕ ಪ್ರಗತಿ: ಬಸವರಾಜ ಬೊಮ್ಮಾಯಿ

# ಪ್ರಧಾನಿ ಮೋದಿ ಬಗ್ಗೆ ಮಾತನಾಡುವ ನೈತಿಕತೆ ರಾಹುಲ್ ಗಾಂಧಿಗಿಲ್ಲ: ಬಸವರಾಜ ಬೊಮ್ಮಾಯಿ ತಿರುಗೇಟು

**ಗದಗ, ಸೆ.17–** ಅಮೆರಿಕ ಅಧ್ಯಕ್ಷ ಡೋಲಾನ್ಡ್ ಟ್ರಂಪ್ ಏನೇ ಮಾಡಿದರೂ ಅದನ್ನು ನಮ್ಮ ದೇಶದ ಪರಿಸ್ಥಿತಿಗೆ ಜೋಡಿಸುವ ಕೆಲಸವನ್ನು ಲೋಕಸಭೆ ಪ್ರತಿಪಕ್ಷದ ನಾಯಕ ರಾಹುಲ್ ಗಾಧಿ ಮಾಡುತ್ತಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದರು.

ಗದಗದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಭಾರತದ ಆರ್ಥಿಕತೆ ಶೂನ್ಯ ಎಂದಾಗ ಇವರು ಖುಷಿ ಪಟ್ಟಿದ್ದರು, ಆದರೆ ಇಂದು ಭಾರತ ಶೇ. 7.8 ರಷ್ಟು ಬೆಳವಣಿಗೆಯನ್ನು ಸಾಧಿಸುತ್ತಿದ್ದು, ಇಂತಹ ಅದ್ಭುತ ಪ್ರಗತಿ ಅಮೆರಿಕಕ್ಕಾಗಲಿ ಅಥವಾ ರಷ್ಯಾಕ್ಕಾಗಲಿ ಇಲ್ಲ," ಎಂದು ಸ್ಪಷ್ಟಪಡಿಸಿದರು.

ಇಂದಿರಾಗಾಂಧಿ ಅವರ ಕಾಲದಲ್ಲಿ 1975ರಲ್ಲಿ ಬಹುಮತ ಕಳೆದುಕೊಂಡು, ಕಮ್ಯುನಿಷ್ಟ್ ಪಾರ್ಟಿಯ ಬೆಂಬಲದೊಂದಿಗೆ ಅಲ್ಪಸಂಖ್ಯಾತ ಸರ್ಕಾರವನ್ನು ನಡೆಸಲಾಗಿತ್ತು. ಆ ಸಂದರ್ಭದಲ್ಲಿ ದೇಶದಲ್ಲಿ ಎಡಪಂಥವಾಗಲಿ, ಬಲಪಂಥವಾಗಲಿ, ಜನಪಂಥವೂ ಇರಲಿಲ್ಲ, ಬದಲಿಗೆ ತುರ್ತು ಪರಿಸ್ಥಿತಿಯನ್ನು ಹೇರಲಾಯಿತು. ಇದು ಇಂದಿರಾಗಾಂಧಿ ಅವರ ಅಜ್ಜಿ ಗೀತು ಪಾಠ," ಎಂದು ಬೊಮ್ಮಾಯಿ ವ್ಯಂಗ್ಯವಾಡಿದರು.

**ಪ್ರಧಾನಿ ಮೋದಿ ಆಡಳಿತದಲ್ಲಿ ದೇಶದ ಆರ್ಥಿಕ ಅಭಿವೃದ್ಧಿ:** ಇವತ್ತು ದೇಶವು ಆರ್ಥಿಕವಾಗಿ ಮತ್ತು ಸಾಮಾಜಿಕವಾಗಿ ಅತ್ಯಂತ ಗಟ್ಟಿಯಾಗಿದೆ ಎಂದರೆ ಅದು ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಮಾತ್ರ ಸಾಧ್ಯವಾಗಿದೆ ಎಂದ ಬೊಮ್ಮಾಯಿ, "ಪ್ರಜಾಪ್ರಭುತ್ವವನ್ನು ಎತ್ತಿಹಿಡಿದಿರುವ ನಮ್ಮ ದೇಶದಲ್ಲಿ ಸಂಕಷ್ಟದ ಕಾಲದಲ್ಲಿಯೂ ಆರ್ಥಿಕವಾಗಿ ಮೂರನೇ ಸ್ಥಾನಕ್ಕೆ ಮುನ್ನಡೆಯುತ್ತಿರುವ ಏಕೈಕ ರಾಷ್ಟ್ರ ಭಾರತ. ಇದು ನರೇಂದ್ರ ಮೋದಿ ಅವರ ವಿಚಾರ, ಕಾರ್ಯಕ್ರಮ ಮತ್ತು ಅನುಷ್ಠಾನ ಶಕ್ತಿಯ ಫಲ," ಎಂದು ಪ್ರಶಂಸಿಸಿದರು.



**ರಾಹುಲ್ ಗಾಂಧಿ ಮತ್ತು ಕಾಂಗ್ರೆಸ್ ವಿರುದ್ಧ ವಾಗ್ದಾಳಿ:** ಾಂಗ್ರೆಸ್ ಪಕ್ಷದಲ್ಲಿ ನರೇಂದ್ರ ಮೋದಿ ಅವರ ಬಗ್ಗೆ ಮಾತನಾಡುವ ನಾಯಕರಿಲ್ಲ, ಅದರಲ್ಲಿ ರಾಹುಲ್ ಗಾಂಧಿ ಕೂಡ ಒಬ್ಬರು. ಯುಪಿಐ ಶುಲ್ಕ ಹೆಚ್ಚಳದ ವಿಚಾರದಲ್ಲಿ ಅಮೆರಿಕದ ಟ್ರಂಪ್‌ಗೆ ಶರಣಾಗಿದ್ದಾರೆ ಎನ್ನುವ ರಾಹುಲ್ ಗಾಂಧಿ ಹೇಳಿಕೆಗೆ ಪ್ರತಿಕ್ರಿಯಿಸಿ, "ಟ್ರಂಪ್ ಏನೇ ಮಾಡಿದರೂ ಅದನ್ನು ನಮ್ಮ ದೇಶದ ಪರಿಸ್ಥಿತಿಗೆ ಜೋಡಿಸುವ ಕೆಲಸ ಮಾಡುತ್ತಿದ್ದಾರೆ. ಭಾರತದ ಆರ್ಥಿಕತೆ ಶೂನ್ಯ ಎಂದಾಗ ಇವರು ಖುಷಿ ಪಟ್ಟಿದ್ದರು, ಆದರೆ ಇಂದು ಭಾರತ ಶೇ. 7.8 ರಷ್ಟು ಬೆಳವಣಿಗೆಯನ್ನು ಸಾಧಿಸುತ್ತಿದ್ದು, ಇಂತಹ ಅದ್ಭುತ ಪ್ರಗತಿ ಅಮೆರಿಕಕ್ಕಾಗಲಿ ಅಥವಾ ರಷ್ಯಾಕ್ಕಾಗಲಿ ಇಲ್ಲ," ಎಂದು ಸ್ಪಷ್ಟಪಡಿಸಿದರು. ದೇಶದ ನೈಜ ಆರ್ಥಿಕ ಸಾಧನೆ ಮತ್ತು ಪ್ರಧಾನಿ ಮೋದಿಯವರ ಜನಪರ ನಾಯಕತ್ವವನ್ನು ಹತ್ತಿಕ್ಕಲು ವಿರೋಧ ಪಕ್ಷಗಳು ನಿರರ್ಥಕ ಪ್ರಯತ್ನ ಮಾಡುತ್ತಿವೆ ಎಂದು ಬೊಮ್ಮಾಯಿ ಕಿಡಿಕಾರಿದರು.

**ಕೆಪಿಎಸ್‌ಸಿ ಹಗರಣ** ರಾಜ್ಯದಲ್ಲಿ ಪೊಲೀಸ್ ಅಧಿಕಾರಿಗಳ ವರ್ಗಾವಣೆ ಮತ್ತು ಕೆಪಿಸಿಎಸ್ ಹಗರಣ ದಿನದಿಂದ ದಿನಕ್ಕೆ ಬಯಲಾಗುತ್ತಿದ್ದು, ಸರ್ಕಾರದ ವಿರುದ್ಧ ಸಾಕಷ್ಟು ಜನರು ಪರದಾಡುತ್ತಿದ್ದಾರೆ. ಟಿ. ನರಸೀಪುರ ಪೊಲೀಸ್ ಅಧಿಕಾರಿಯ ಉದ್ಧಟತನದ ಬಗ್ಗೆ ಮಾತನಾಡಿದ ಅವರು, ಈಗಾಗಲೇ ಹೈಕೋರ್ಟ್ ಹಲವಾರು ಬಾರಿ ಚಾಟಿ ಬೀಸಿದೆ ಮತ್ತು ಡಿಎಸ್ಪಿಗಳು ಸೇರಿದಂತೆ ಎಲ್ಲರಿಗೂ ಇದು ಒಂದು ಹೊಸ ಪೊಲೀಸ್ ಸಂಸ್ಕೃತಿಯಂತೆ ಮುಂದುವರಿದಿದೆ. ಪೊಲೀಸರು ಜನರ ಪರವಾಗಿರಬೇಕು, ಸ್ನೇಹಮಯಿಯಾಗಿರಬೇಕು ಆದರೆ ಕಾನೂನು ರಕ್ಷಣೆ ಮಾಡುವ ರಕ್ಷಕರೇ ಕಾನೂನು ಸುವ್ಯವಸ್ಥೆಯನ್ನು ಹದಗೆಡಿಸುವಂತೆ ವರ್ತಿಸುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

**ಜನರ ಪರದಾಟ:** ಕೆಪಿಸಿಎಸ್ ಹಗರಣ ದಿನದಿಂದ ದಿನಕ್ಕೆ ಹೊರಬರುತ್ತಿದ್ದು, ಕೆವೈಸಿ, ಈ–ಖಾತೆ, ಎ ಯಿಂದ ಬಿ ಖಾತೆ ಹಾಗೂ ರೇಷನ್ ಕಾರ್ಡ್ ಪಡೆಯಲು ಕೂಡ ಜನರು ಸಾಕಷ್ಟು ಪರದಾಡುತ್ತಿದ್ದಾರೆ. ಯಾವುದೇ ಪೂರ್ವ ತಯಾರಿ, ತಾಂತ್ರಿಕ ಜ್ಞಾನ ಅಥವಾ ಸರ್ವರ್ ವ್ಯವಸ್ಥೆ ಇಲ್ಲದೆ ಈ ಸರ್ಕಾರ ಜನರಿಗೆ ತೊಂದರೆ ಕೊಡುತ್ತಿದ್ದು, ಇದು ಕೇವಲ ಒಂದು ನಾಟಕ ಕಂಪನಿಯಂತೆ ಕೆಲಸ ಮಾಡುತ್ತಿದೆ ಎಂದು ಆರೋಪಿಸಿದರು.

**ಸಿಬಿಐ ತನಿಖೆಗೆ ಒತ್ತಾಯ:** ಈ ಎಲ್ಲಾ ಹಗರಣಗಳ ಸತ್ಯಾಂಶ ಪೂರ್ಣ ಪ್ರಮಾಣದಲ್ಲಿ ಹೊರಬರಬೇಕಾದರೆ ಸಿಬಿಐ ತನಿಖೆಯಾಗಬೇಕು ಎಂದು ಬಸವರಾಜ ಬೊಮ್ಮಾಯಿ ಒತ್ತಾಯಿಸಿದ್ದಾರೆ. ಈ ನಿಟ್ಟಿನಲ್ಲಿ ಸರ್ಕಾರ ಕೂಡಲೇ ಎಚ್ಚೆತ್ತುಕೊಂಡು ಸೂಕ್ತ ಕ್ರಮ ಕೈಗೊಳ್ಳದಿದ್ದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ನಡೆಸಲಾಗುವುದು ಎಂದು ಅವರು ಎಚ್ಚರಿಕೆ ನೀಡಿದ್ದಾರೆ.

# ಬೀದರ್ ಸಹಕಾರ ಸಕ್ಕರೆ ಕಾರ್ಖಾನೆ ಪುನಶ್ಚೇತನಕ್ಕೆ ಆಗ್ರಹಿಸಿ ಪಾದಯಾತ್ರೆ



**ಬೀದರ, ಸೆ. 17:** ಹುಮನಾಬಾದ ತಾಲ್ಲೂಕಿನ ಹಳ್ಳಿಖೇಡ್ ಬಿ ಗ್ರಾಮದಲ್ಲಿರುವ ಜಿಲ್ಲೆಯ ಮೊದಲ ಸಹಕಾರಿ ಕ್ಷೇತ್ರದ ಬೀದರ್ ಸಹಕಾರ ಸಕ್ಕರೆ ಕಾರ್ಖಾನೆ (ಬಿಎಸ್‌ಎಸ್‌ಕೆ)ಪುನಶ್ಚೇತನಕ್ಕೆ ಆಗ್ರಹಿಸಿ ಶಾಸಕ ಡಾ.ಸಿದ್ದಲಿಂಗಪ್ಪ ಪಾಟೀಲ ನೇತೃತ್ವದಲ್ಲಿ ಬೃಹತ್ ಪಾದಯಾತ್ರೆ ನಡೆಯಿತು.

ಹುಮನಾಬಾದ ಪಟ್ಟಣದ ಐತಿಹಾಸಿಕ ವೀರಭದ್ರೇಶ್ವರ ದೇವಸ್ಥಾನದಿಂದ ಆರಂಭಗೊಂಡ ಪಾದಯಾತ್ರೆಯು ಹುಡಗಿ, ನಂದಗಾಂವ, ಮಲ್ಕಾಪುರ ವಾಡಿ, ಬೇನ್‌ಚಿಂಚೋಳಿ, ಹಳ್ಳಿಖೇಡ್ ಬಿ.ಪಟ್ಟಣದ ಮುಖಾಂತರ ಬಿಎಸ್‌ಎಸ್‌ಕೆ ಕಾರ್ಖಾನೆ ತಲುಪಿತು. ಸುಮಾರು 30 ಕಿ.ಮೀ ಪಾದಯಾತ್ರೆ ನಡೆಯಿತು.

ನಂತರ ಶಾಸಕ ಡಾ.ಸಿದ್ದಲಿಂಗಪ್ಪ ಪಾಟೀಲ ಮಾತನಾಡಿ, ಬಿಎಸ್‌ಎಸ್‌ಕೆ ಕಾರ್ಖಾನೆಯನ್ನು ಎಲ್.ಆರ್.ಓ.ಟಿ. ಆಧಾರದ ಮೇಲೆ ಲೀಸ್‌ಗೆ ನೀಡಬೇಕು. ಇಲ್ಲದಿದ್ದರೆ ಮೈ ಶುಗರ್ ಕಾರ್ಖಾನೆಯಂತೆ ಸರ್ಕಾರವೇ ನಡೆಸಬೇಕು. ಸುಮಾರು 26 ಸಾವಿರ ರೈತರು ಈ ಕಾರ್ಖಾನೆಯ ಸದಸ್ಯರಾಗಿದ್ದಾರೆ.

600 ಕಾರ್ಮಿಕರು ಕಾರ್ಯನಿರ್ವಹಿಸುತ್ತಿದ್ದಾರೆ. ಕಳೆದ ಎರಡು ವರ್ಷಗಳಿಂದ ಕಾರ್ಖಾನೆ ಸ್ಥಗಿತಗೊಂಡಿದ್ದು, ಡಿಸಿಸಿ ಬ್ಯಾಂಕ್‌ನವರು ಕಳೆದ ತಿಂಗಳು ಈ ಕಾರ್ಖಾನೆಯನ್ನು ಹರಾಜ ಮಾಡಲು ಪ್ರಯತ್ನಿಸಿದ್ದರು. ರೈತರು ಪ್ರತಿಭಟಿಸಿ ಹರಾಜು ನಿಲ್ಲಿಸಿದ್ದಾರೆ' ಎಂದು ಹೇಳಿದರು.

# ಮಂಗಳೂರಿನಲ್ಲಿಂದು ಸಚಿವ ಸಂಪುಟ ಸಭೆ ಸಂಚಾರ ವ್ಯವಸ್ಥೆಯಲ್ಲಿ ತಾತ್ಕಾಲಿಕ ಬದಲಾವಣೆ

**ಮಂಗಳೂರು, ಸೆ.17:** ನಗರದ ಪಡೀಲ್‌ನಲ್ಲಿರುವ ಜಿಲ್ಲಾಧಿಕಾರಿ ಕಚೇರಿ (ಪ್ರಜಾಸೌಧ) ಯಲ್ಲಿ ಸರ್ಕಾರದ ಸಚಿವ ಸಂಪುಟ ಸಭೆ ಇಂದು (ಸೆ.18) ನಡೆಯಲಿರುವ ಹಿನ್ನೆಲೆಯಲ್ಲಿ ಮಂಗಳೂರು ನಗರದಲ್ಲಿ ಸಂಚಾರ ವ್ಯವಸ್ಥೆಯಲ್ಲಿ ತಾತ್ಕಾಲಿಕವಾಗಿ ಬದಲಾವಣೆ ಮಾಡಲಾಗಿದೆ.

ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ ಸೇರಿದಂತೆ ಸಂಪುಟ ದರ್ಜೆಯ ಸಚಿವರು ಗುರುವಾರ ಮಂಗಳೂರಿಗೆ ಆಗಮಿಸಿ ಸಭೆಯಲ್ಲಿ ಭಾಗವಹಿಸಲಿರುವ ಹಿನ್ನೆಲೆಯಲ್ಲಿ ಮಂಗಳೂರು ನಗರ ಪೊಲೀಸ್ ಇಲಾಖೆ ಸಾರ್ವಜನಿಕರಿಗೆ ಸಂಚಾರ ಸಲಹೆಗಳನ್ನು ಪ್ರಕಟಿಸಿದೆ.ಇಂದು ಸಂಜೆ ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ ಹಾಗೂ ಸಚಿವರು ಮಂಗಳೂರು ನಗರಕ್ಕೆ ಆಗಮಿಸಲಿದ್ದು, ನಾಳೆ ಬೆಳಗ್ಗೆ ನಗರದ ಪ್ರಮುಖ ರಸ್ತೆಗಳ ಮೂಲಕ ಪಡೀಲ್‌ನ ಪ್ರಜಾಸೌಧಕ್ಕೆ ತೆರಳಲಿದ್ದಾರೆ. ಸಭೆ ಬಳಿಕ ಮಧ್ಯಾಹ್ನ ಮೇರಿಹಿಲ್‌ನಲ್ಲಿರುವ ಹೆಲಿಪ್ಯಾಡ್ ಮೂಲಕ ಉಡುಪಿಗೆ ತೆರಳಿ, ಬಳಿಕ ಮಂಗಳೂರು ನಗರಕ್ಕೆ ವಾಪಸಾಗಿ ವಾಸ್ತವ್ಯ ಹೂಡಲಿದ್ದಾರೆ.

ಸೆ.19ರ ಬೆಳಗ್ಗೆ ಅವರು ನಗರದಿಂದ ನಿರ್ಗಮಿಸಲಿದ್ದಾರೆ.ಈ ಹಿನ್ನೆಲೆಯಲ್ಲಿ ಗಣ್ಯರ ಭದ್ರತೆ ಹಾಗೂ ಸುಗಮ ವಾಹನ ಸಂಚಾರದ ದೃಷ್ಟಿಯಿಂದ ಸಾರ್ವಜನಿಕರು ಪೊಲೀಸ್ ಇಲಾಖೆಯ ಸೂಚನೆಗಳನ್ನು ಪಾಲಿಸಿ ಪರ್ಯಾಯ ಮಾರ್ಗಗಳನ್ನು ಬಳಸುವಂತೆ ಮನವಿ ಮಾಡಲಾಗಿದೆ.

ಬಜಪೆ ವಿಮಾನ ನಿಲ್ದಾಣದಿಂದ ಕಾವೂರು–ಬೊಂದೇಲ್–ಮೇರಿಹಿಲ್–ಕೆ.ಪಿ.ಟಿ.–ಕದ್ರಿ ಕಂಬಳ–ಬಂಟ್ಸ್ ಹಾಸ್ಟೆಲ್–ಡಾ. ಬಿ.ಆರ್. ಅಂಬೇಡ್ಕರ್ ಜಂಕ್ಷನ್–ಹಂಪನಕಟ್ಟೆ–ಕ್ಲಾಕ್ ಟವರ್–ಹ್ಯಾಮಿಲ್ಟನ್ ಜಂಕ್ಷನ್ ಮಾರ್ಗದಲ್ಲಿ ಗಣ್ಯರ ಸಂಚಾರ ಇರಲಿದೆ.

ಶುಕ್ರವಾರ ಬೆಳಗ್ಗೆ ಹ್ಯಾಮಿಲ್ಟನ್ ಜಂಕ್ಷನ್– ಕ್ಲಾಕ್ ಟವರ್ –ಹಂಪನಕಟ್ಟೆ– ಡಾ. ಬಿ.ಆರ್. ಅಂಬೇಡ್ಕರ್ ಜಂಕ್ಷನ್–ಕೆ.ಪಿ.ಟಿ. ಜಂಕ್ಷನ್–ನಂತೂರು ವೃತ್ತ–ಪಂಪುವೆಲ್–ನಾಗುರಿ–ಬಜಾಲ್ ಕ್ರಾಸ್ (ಪ್ರಜಾಸೌಧ)–ಪಡೀಲ್ ಜಂಕ್ಷನ್ ಮಾರ್ಗದಲ್ಲಿ ಸಂಚಾರ ನಡೆಯಲಿದೆ.

**ಪರ್ಯಾಯ ಮಾರ್ಗಗಳ ಸೂಚನೆ:** ಬದ್ರಿಯಾ ಜಂಕ್ಷನ್‌ನಿಂದ ಹೋಟೆಲ್ ತಾಜ್ ವಿವಾಂತ್ ಮುಂಭಾಗದ ಮೂಲಕ ಹ್ಯಾಮಿಲ್ಟನ್ ಜಂಕ್ಷನ್ ಕಡೆಗೆ ತೆರಳುವ ವಾಹನಗಳು ಬದ್ರಿಯಾ ಜಂಕ್ಷನ್–ನಿಲೇಶ್ವರ ರಸ್ತೆ–ರೋಸಾರಿಯೋ ರಸ್ತೆ ಮೂಲಕ ಸಂಚರಿಸುವಂತೆ ಸೂಚಿಸಲಾಗಿದೆ. ಹ್ಯಾಮಿಲ್ಟನ್ ಜಂಕ್ಷನ್‌ನಿಂದ ತಾಜ್ ವಿವಾಂತ್ ಮುಂಭಾಗದ ಮೂಲಕ ಬದ್ರಿಯಾ ಜಂಕ್ಷನ್ ಕಡೆಗೆ ತೆರಳುವ ವಾಹನಗಳು ಹ್ಯಾಮಿಲ್ಟನ್ ಜಂಕ್ಷನ್ – ನೆಲ್ಲಿಕಾಯಿ ರಸ್ತೆ ಮೂಲಕ ಪರ್ಯಾಯವಾಗಿ ಸಂಚರಿಸಬೇಕು.

# ವಿಘ್ನ ನಿವಾರಕನಿಗೂ ತಟ್ಟಿದ ಬರದ ಬಿಸಿ: ಗಣಪತಿ ವಿಸರ್ಜನೆಗೂ ನೀರಿಲ್ಲ....!



**ಬೀದರ್, ಸೆ. 17:** ಬರದ ಬಿಸಿ ಈ ಸಲ ಗಣಪನಿಗೂ ತಟ್ಟಿದೆ. ನಗರ ಸೇರಿದಂತೆ ಜಿಲ್ಲೆಯ ಹಲವೆಡೆ ಐದು ದಿನಗಳವರೆಗೆ ಗಣಪನ ಮೂರ್ತಿಗಳನ್ನು ಪ್ರತಿಷ್ಠಾಪಿಸಿ, ಕೊನೆಯ ದಿನ, ಸೆ.18ರಂದು ಮೆರವಣಿಗೆ ಮೂಲಕ ಕೊಂಡೊಯ್ದು ಮಾಂಜ್ರಾ ನದಿಯಲ್ಲಿ ವಿಸರ್ಜಿಸಲಾಗುತ್ತದೆ.

ಅದರಲ್ಲೂ ತಾಲ್ಲೂಕಿನ ಕಂದಗೂಳ ಸೇತುವೆ ಹಾಗೂ ಔರಾದ್ ತಾಲ್ಲೂಕಿನ ಕೌಠಾ (ಬಿ) ಬಳಿ ಹೆಚ್ಚಿನ ಮೂರ್ತಿಗಳನ್ನು ವಿಸರ್ಜನೆ ಮಾಡಲಾಗುತ್ತದೆ. ಆದರೆ, ಜಿಲ್ಲೆಯಾದ್ಯಂತ ಈ ಸಲ ಸಮರ್ಪಕವಾಗಿ ಮಳೆಯಾಗದ ಕಾರಣ ಜಿಲ್ಲೆಯ ಜೀವನಾಡಿ ಮಾಂಜ್ರಾ ನದಿಯಲ್ಲಿ ಹೇಳಿಕೊಳ್ಳುವಷ್ಟು ನೀರಿಲ್ಲ. ನದಿಯ ಬಹುತೇಕ ಭಾಗಗಳಲ್ಲಿ ನೆಲ ಕಂಡಿದೆ. ನೀರಿಲ್ಲದೆ ಇರುವುದರಿಂದ ಭಣಗುಡುತ್ತಿದೆ. ನದಿಯಲ್ಲಿ ಮೂರ್ತಿಗಳ ವಿಸರ್ಜನೆ ಸಾಧ್ಯವಾಗದ ಕಾರಣ ಕಲ್ಲಿನ ಕ್ವಾರಿ ಆಯ್ಕೆ ಮಾಡಲಾಗಿದೆ.

ತಾಲ್ಲೂಕಿನ ಸುಲ್ತಾನಪುರದಲ್ಲಿರುವ ಕ್ವಾರಿಯಲ್ಲಿ ಅಗತ್ಯ ಪ್ರಮಾಣದಲ್ಲಿ ನೀರಿನ ಸಂಗ್ರಹವಿದ್ದು, ಅಲ್ಲಿ ಮೂರ್ತಿಗಳ ವಿಸರ್ಜನೆಗೆ ನಿರ್ಧರಿಸಲಾಗಿದೆ. ಅದೇ ರೀತಿ ಸಣ್ಣ ಪ್ರಮಾಣದ ಮೂರ್ತಿಗಳನ್ನು ಗೋರನಳ್ಳಿ ಕೆರೆ ಸಮೀಪದ ಬೀದರ್ ನಗರಾಭಿವೃದ್ಧಿ ಪ್ರಾಧಿಕಾರದ ವತಿಯಿಂದ ನಿರ್ಮಿಸಿರುವ ಗಣೇಶನ ಹೊಂಡದಲ್ಲಿ ವಿಸರ್ಜಿಸಲು ತೀರ್ಮಾನಿಸಲಾಗಿದೆ. ಮಹಾಮಂಡಳದ ಪದಾಧಿಕಾರಿಗಳು ಕೌಠಾ ಹಾಗೂ ಕಂದಗೂಳ ಸೇತುವೆಗೆ ತೆರಳಿ ಪರಿಶೀಲನೆ ನಡೆಸಿದ್ದೇವೆ. ನದಿಯಲ್ಲಿ ನೀರು ತೀರಾ ಕಡಿಮೆ ಇದೆ. ಆದಕಾರಣ ಈ ಕುರಿತು ಚರ್ಚಿಸಿ, ಸುಲ್ತಾನಪುರದ ಕ್ವಾರಿಯಲ್ಲಿ ವಿಸರ್ಜನೆಗೆ ಅಂತಿಮವಾಗಿ ನಿರ್ಧರಿಸಲಾಗಿದೆ ಎಂದು ಗಣೇಶ ಮಹಾಮಂಡಳದ ಅಧ್ಯಕ್ಷ ಚಂದ್ರಶೇಖರ ಪಾಟೀಲ ಗಾದಗಿ, ಪ್ರಧಾನ ಕಾರ್ಯದರ್ಶಿ ಬಾಬುವಾಲಿ ತಿಳಿಸಿದ್ದಾರೆ.

# ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡಿದ ಶಾಸಕ ನಾರಾ ಭರತ್ ರೆಡ್ಡಿ



**ಬಳ್ಳಾರಿ, ಸೆ.17:** ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿಯವರು ಬುಧವಾರ ನಗರದ ವಿವಿಧ ವಾರ್ಡ್'ಗಳಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸುವ ಮೂಲಕ ಚಾಲನೆ ನೀಡಿದರು.

ಬಳ್ಳಾರಿ ನಗರದ ವಾರ್ಡ್ ಸಂಖ್ಯೆ 14ರ ವ್ಯಾಪ್ತಿಯ ರಾಜ್ಯೋತ್ಸವ ನಗರ, ಎಲ್ಲಮ್ಮ ಕಟ್ಟೆ, ಮಿಲ್ಲರ್ ಪೇಟೆ, ಬಡಾ ಗಲ್ಲಿಯ ಲಿಂಕ್ ರಸ್ತೆಗಳಲ್ಲಿ ಯುಜಿಡಿ ಚರಂಡಿ ಹಾಗೂ ಸಿಸಿ ರಸ್ತೆಗಳ ಅಭಿವೃದ್ಧಿ ಕಾಮಗಾರಿಗೆ (ಅಂದಾಜು ಮೊತ್ತ 1.50 ಕೋಟಿ ರೂ.ಗಳು) ಪೂಜೆ ಸಲ್ಲಿಸುವ ಮೂಲಕ ಚಾಲನೆ ನೀಡಿದರು.

ಅದೇ ರೀತಿ ಬಳ್ಳಾರಿ ನಗರದ ವಾರ್ಡ್ ಸಂಖ್ಯೆ 14ರ ವ್ಯಾಪ್ತಿಯ ರಾಜ್ಯೋತ್ಸವ ನಗರ, ಗಡ್ಡೆ ಕೆಳಗೆ, ಲಿಂಕ್ ರಸ್ತೆಗಳಲ್ಲಿ ಯುಜಿಡಿ ಚರಂಡಿ ಹಾಗೂ ಸಿಸಿ ರಸ್ತೆಗಳ ಅಭಿವೃದ್ಧಿ ಕಾಮಗಾರಿಗೆ (ಅಂದಾಜು ಮೊತ್ತ 1.20 ಕೋಟಿ ರೂ.ಗಳು) ಪೂಜೆ ಸಲ್ಲಿಸುವ ಮೂಲಕ ಚಾಲನೆ ನೀಡಿದರು. ಈ ಸಂದರ್ಭ ಸ್ಥಳೀಯ ಮುಖಂಡರಾದ ಬಿಆರೆಲ್ ಸೀನಾ, ಮಹಾನಗರ ಪಾಲಿಕೆಯ ಸದಸ್ಯರಾದ ನೂರ್ ಮೊಹಮ್ಮದ್, ಮಿಂಚು ಸೀನಾ, ಜಿಲಾನ್, ರಾಮು, ರಸೂಲ್, ರವಿ ಮತ್ತಿತರರು ಹಾಜರಿದ್ದರು.

ತದನಂತರ ಬಳ್ಳಾರಿ ನಗರದ ವಾರ್ಡ್ ಸಂಖ್ಯೆ 13ರ ವ್ಯಾಪ್ತಿಯ ಗಣೇಶ ಗುಡಿಯಿಂದ ನಾರಪ್ಪ ಬೀದಿವರೆಗೆ ಮತ್ತು ಕೋರ್ಟ್ ಮೊಹಲ್ಲಾ ರಸ್ತೆ ಎದುರುಗಡೆ ಒಳ ಚರಂಡಿ ಹಾಗೂ ರಸ್ತೆಗಳ ಅಭಿವೃದ್ಧಿ ಕಾಮಗಾರಿಗೆ (ಅಂದಾಜು ಮೊತ್ತ 2 ಕೋಟಿ ರೂ.ಗಳು) ಪೂಜೆ ಸಲ್ಲಿಸುವ ಮೂಲಕ ಶಾಸಕ ನಾರಾ ಭರತ್ ರೆಡ್ಡಿಯವರು ಚಾಲನೆ ನೀಡಿದರು.

## ಬಳ್ಳಾರಿಯಲ್ಲಿ ವಿಜೃಂಭಣೆಯ ವಿಶ್ವಕರ್ಮ ಜಯಂತಿ

# ಕರಕುಶಲದ ಜೊತೆ ಶಿಕ್ಷಣವೂ ಅನಿವಾರ್ಯ: ಆಡ್ಕರ್ ಅಧ್ಯಕ್ಷ ಮುಂಡರಗಿ ನಾಗರಾಜ

**ಬಳ್ಳಾರಿ,ಸೆ.17.**ವಿಶ್ವಕರ್ಮ ಸಮಾಜ ಕರಕುಶಲತೆ ಮತ್ತು ಶಿಲ್ಪಕಲೆಗೆ ಜಗತ್ಪ್ರಸಿದ್ಧಿ ಪಡೆದಿದೆ. ಸಾಂಪ್ರದಾಯಿಕ ಕಸುಬಿನ ಜೊತೆಗೆ ಸಮುದಾಯದ ಮಕ್ಕಳು ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಬೇಕು ಎಂದು ಡಾ.ಬಾಬು ಜಗಜೀವನ್‌ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಮುಂಡರಗಿ ನಾಗರಾಜ ಅವರು ಹೇಳಿದರು.




ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಗುರುವಾರ ಆಯೋಜಿಸಿದ್ದ ವಿಶ್ವಕರ್ಮ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಎಚ್‌ಆರ್ ಗವಿಯಪ್ಪ ವೃತ್ತದ ಸಮೀಪದಲ್ಲಿ ಈ ಹಿಂದೆ ಸೂಕ್ತ ನಿರ್ವಹಣೆಯಿಲ್ಲದೆ ಸೊರಗಿದ್ದ ವೃತ್ತಕ್ಕೆ ನಗರ ಶಾಸಕರು, ಮಹಾನಗರ ಪಾಲಿಕೆಯ ಮೇಯರ್ ಮುತುವರ್ಜಿಯಿಂದ 'ವಿಶ್ವಕರ್ಮ ವೃತ್ತ' ಎಂದು ನಾಮಕರಣ ಮಾಡಲಾಗಿದೆ. ಈ ವೃತ್ತದಲ್ಲಿ ಹುಲ್ಲುಹಾಸು ಹಾಗೂ ಹಸಿರೀಕರಣಗೊಳಿಸಿ ಸುಂದರಗೊಳಿಸಬೇಕು. ಅಮರಶಿಲ್ಪಿ ಜಕಣಾಚಾರ್ಯರ ಆಕರ್ಷಕ ಪ್ರತಿಮೆ ಸ್ಥಾಪಿಸುವ ಗುರಿ ಸಮುದಾಯ ಹೊಂದಿದೆ ಎಂದು ತಿಳಿಸಿದರು.

ಮಹಾನಗರ ಪಾಲಿಕೆಯ ಮಹಾಪೌರರಾದ ಪಿ.ಗಾದೆಪ್ಪ ಅವರು ಮಾತನಾಡಿ, ಜಗತ್ತಿಗೆ ದೇವರ ಪ್ರತಿರೂಪವನ್ನು ಸೃಷ್ಟಿಸಿಕೊಡುವ ವಿಶ್ವಕರ್ಮ ಸಮುದಾಯ ಪರಮ ಪುಣ್ಯವಂತ ಸಮಾಜ. ಸಮಾಜದಲ್ಲಿ ಪ್ರತಿಯೊಂದು ಸಣ್ಣ ಸಮುದಾಯವೂ ರಾಜಕೀಯವಾಗಿ ಮತ್ತು ಸಾಮಾಜಿಕವಾಗಿ ಒಗ್ಗಟ್ಟಾದಾಗ ಮಾತ್ರ ಸರ್ಕಾರದಿಂದ ನ್ಯಾಯ ಹಾಗೂ ಸೌಲಭ್ಯಗಳನ್ನು ಪಡೆಯಲು ಸಾಧ್ಯ ಎಂದು ಅಭಿಪ್ರಾಯಪಟ್ಟರು.

ಪ್ರಪಂಚದಲ್ಲಿ ಪ್ರತಿಯೊಬ್ಬರೂ ದೇವರಿಗೆ ಕೈಮುಗಿದು ವರ ಬೇಡುತ್ತಾರೆ. ಆದರೆ, ಭಕ್ತರು ಪೂಜಿಸುವ ಅಂತಹ ದೇವತೆಯ ವಿಗ್ರಹಗಳನ್ನೇ ಕೈಯಾರೆ ಸೃಷ್ಟಿಸುವ ಕಲೆಯು ಶಿಲ್ಪಿ ಸಮುದಾಯಕ್ಕೆ ಭಗವಂತ ಕರುಣಿಸಿದ ದೊಡ್ಡ ವರವಾಗಿದೆ. ಸಮುದಾಯದ ಯಾವುದೇ ನ್ಯಾಯಯುತ ಬೇಡಿಕೆಗಳಿಗೆ ಸರ್ಕಾರ ಹಾಗೂ ಮಹಾನಗರ ಪಾಲಿಕೆಯ ಮಟ್ಟದಲ್ಲಿ ಸದಾ ಬೆಂಬಲವಾಗಿ ನಿಲ್ಲುವುದಾಗಿ ಇದೇ ಸಂದರ್ಭದಲ್ಲಿ ಭರವಸೆ ನೀಡಿದರು.

ನ್ಯಾಯವಾದಿ ತ್ರಿವೇಣಿ ಪಿ. ಪತ್ತಾರ್ ಅವರು ವಿಶೇಷ ಉಪನ್ಯಾಸದಲ್ಲಿ ಮಾತನಾಡಿ, ದೇಶದ ಕಲೆ, ವಾಸ್ತುಶಿಲ್ಪ ಹಾಗೂ ಸಾಂಸ್ಕೃತಿಕ ಪರಂಪರೆಗೆ ವಿಶ್ವಕರ್ಮ ಸಮುದಾಯ ನೀಡಿರುವ ಕೊಡುಗೆ ಅನನ್ಯ. ವಿಶ್ವಕರ್ಮ ಪರಂಪರೆಯು ಕೇವಲ ಒಂದು ನಿರ್ದಿಷ್ಟ ಮತ ಅಥವಾ ಜಾತಿಯ ಚೌಕಟ್ಟಿಗೆ ಸೀಮಿತವಾಗಿರದೆ, ಅದು ಸಮಸ್ತ ಜಗತ್ತಿನ ಸೃಷ್ಟಿಯ ಆದಿ ಪರಂಪರೆಯಾಗಿದೆ. ಋಗ್ವೇದದ ವಿಶ್ವಕರ್ಮ ಸೂಕ್ತ, ಉಪನಿಷತ್ತುಗಳು ಹಾಗೂ ಪುರಾಣಗಳಲ್ಲಿ ವಿಶ್ವಕರ್ಮನ ಮಹಿಮೆಯನ್ನು ಕೊಂಡಾಡಲಾಗಿದೆ ಎಂದು ಹೇಳಿದರು.

'ಹೊಸ ಚಿಗುರು ಹಳೆ ಬೇರು' ಕೂಡಿರಬೇಕೆಂಬಂತೆ, ಸಮಾಜದ ಹಿರಿಯರು ಮತ್ತು ಕಿರಿಯರು ಒಗ್ಗೂಡಿ ಸಂಪ್ರದಾಯ ಹಾಗೂ ಸಂಸ್ಕೃತಿಯನ್ನು ಉಳಿಸಿ ಮುಂದಿನ ಪೀಳಿಗೆಗೆ ಕೊಂಡೊಯ್ಯಬೇಕಾಗಿದೆ. ದೇಶಾದ್ಯಂತ ವಿವಿಧ ಕಾರ್ಯಕ್ಷೇತ್ರಗಳಲ್ಲಿ ಶ್ರಮಿಸುವ ಕುಶಲಕರ್ಮಿಗಳು ಈ ದಿನ ಭಗವಾನ್ ವಿಶ್ವಕರ್ಮನನ್ನು ಭಕ್ತಿಭಾವದಿಂದ ಆರಾಧಿಸುತ್ತಿದ್ದಾರೆ. ಕಲೆ ಮತ್ತು ವಾಸ್ತುಶಿಲ್ಪದ ಮೂಲಕ ರಾಷ್ಟ್ರನಿರ್ಮಾಣಕ್ಕೆ ಸಮುದಾಯದ ಹೆಗ್ಗಳಿಕೆ ಅಪಾರ ಎಂದು ಸ್ಮರಿಸಿದರು.




ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ಅವರು ಗುರುವಾರ ಮಂಗಳೂರಿನ ತಣ್ಣೀರುಬಾವಿ ಕಡಲತೀರದಲ್ಲಿ 'ಸ್ವಚ್ಛತಾ ಸೇವೆ' ಅಭಿಯಾನಕ್ಕೆ ಚಾಲನೆ ನೀಡಿದರು.

## ಮೋದಿ ಹುಟ್ಟುಹಬ್ಬದ ಅಂಗವಾಗಿ ಘಾಟಿ ಸುಬ್ರಹ್ಮಣ್ಯದಲ್ಲಿ ವಿಶೇಷ ಪೂಜೆ

**ದೊಡ್ಡಬಳ್ಳಾಪುರ, ಸೆ.17:** ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಜನ್ಮದಿನಾಚರಣೆಯ ಶುಭ ಸಂದರ್ಭದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲೂಕಿನ ಘಾಟಿ ಸುಬ್ರಹ್ಮಣ್ಯ ದೇವಾಲಯದಲ್ಲಿ ವಿಶೇಷ ಪೂಜಾ ಕಾರ್ಯಕ್ರಮಗಳನ್ನು ಶ್ರದ್ಧಾ ಭಕ್ತಿಯಿಂದ ನೆರವೇರಿಸಲಾಯಿತು.

ಸ್ಥಳೀಯ ಶಾಸಕ ಧೀರಜ್ ಮುನಿರಾಜು ಅವರ ನೇತೃತ್ವದಲ್ಲಿ ಬಿಜೆಪಿ ನಾಯಕರು ಹಾಗೂ ಕಾರ್ಯಕರ್ತರು ಕ್ಷೇತ್ರಕ್ಕೆ ಆಗಮಿಸಿ, ಘಾಟಿ ಸುಬ್ರಹ್ಮಣ್ಯ ಸ್ವಾಮಿಗೆ ವಿಶೇಷ ಅಭಿಷೇಕ ಮತ್ತು ಮಹಾಮಂಗಳಾರತಿ ನೆರವೇರಿಸಿದರು. ಪ್ರಧಾನಿ ಮೋದಿಯವರಿಗೆ ಉತ್ತಮ ಆರೋಗ್ಯ ಹಾಗೂ ದೀರ್ಘಾಯುಷ್ಯ ಕರುಣಿಸಲೆಂದು ಈ ಸಂದರ್ಭದಲ್ಲಿ ಪ್ರಾರ್ಥಿಸಲಾಯಿತು. ಪೂಜಾ ವಿಧಿವಿಧಾನಗಳ ನಂತರ ದೇವಾಲಯದ ಆವರಣದ ಮುಂಭಾಗದಲ್ಲಿ ಶಾಸಕ ಧೀರಜ್ ಮುನಿರಾಜು ಹಾಗೂ ಬೆಂಬಲಿಗರು 101 ತೆಂಗಿನಕಾಯಿಗಳನ್ನು ಒಡೆಯುವ ಮೂಲಕ ವಿಶೇಷ ಹರಕೆ ತೀರಿಸಿ ಪ್ರಾರ್ಥನೆ ಸಲ್ಲಿಸಿದರು.

ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ದೇಶವು ಮತ್ತಷ್ಟು ಪ್ರಗತಿ ಕಾಣಲಿ ಎಂದು ಅವರು ಆಶಿಸಿದರು. ಈ ಧಾರ್ಮಿಕ ಕಾರ್ಯಕ್ರಮದಲ್ಲಿ ಸ್ಥಳೀಯ ಬಿಜೆಪಿ ಮುಖಂಡರು, ಜನಪ್ರತಿನಿಧಿಗಳು ಹಾಗೂ ನೂರಾರು ಸಂಖ್ಯೆಯ ಕಾರ್ಯಕರ್ತರು ಭಾಗವಹಿಸಿ ಪ್ರಧಾನಿಯವರ ಜನ್ಮದಿನವನ್ನು ಸಂಭ್ರಮದಿಂದ ಆಚರಿಸಿದರು. ದೇವಾಲಯಕ್ಕೆ ಆಗಮಿಸಿದ್ದ ಭಕ್ತಾದಿಗಳಿಗೆ ಈ ವೇಳೆ ಪ್ರಸಾದ ವಿತರಣೆ ಮಾಡಲಾಯಿತು.

### ಸರ್ಕಾರದ ವತಿಯಿಂದಲೇ ಮಧ್ವಾಚಾರ್ಯ ಜಯಂತಿ ಆಚರಣೆಗೆ ಮನವಿ

## ಕಲಬುರಗಿ ಜಿಲ್ಲಾ ಬ್ರಾಹ್ಮಣ ಸಂಘ, ವಿಶ್ವ ಮಧ್ವ ಮಹಾ ಪರಿಷತ್, ಸತ್ಯಾತ್ಮ ಸೇನೆ ಪ್ರಮುಖರಿಂದ ಸಿಎಂ ಭೇಟಿ

**ಕಲಬುರಗಿ, ಸೆ.17:** ಭಾರತೀಯ ಸನಾತನ ಧರ್ಮ, ತತ್ತ್ವಶಾಸ್ತ್ರ, ಆಧ್ಯಾತ್ಮಿಕತೆ ಹಾಗೂ ಕರ್ನಾಟಕದ ಧಾರ್ಮಿಕ ಮತ್ತು ಸಾಂಸ್ಕೃತಿಕ ಪರಂಪರೆಗೆ ಅಪಾರ ಕೊಡುಗೆ ನೀಡಿರುವ ಜಗದ್ಗುರು ಮಧ್ವಾಚಾರ್ಯರ ಜಯಂತಿಯನ್ನು ಸರ್ಕಾರದ ವತಿಯಿಂದ ಆಚರಿಸುವಂತೆ ಜಿಲ್ಲಾ ಬ್ರಾಹ್ಮಣ ಸಂಘ, ವಿಶ್ವ ಮಧ್ವ ಮಹಾ ಪರಿಷತ್, ಸತ್ಯಾತ್ಮ ಸೇನೆ ಪ್ರಮುಖರು ಮುಖ್ಯಮಂತ್ರಿ ಡಿಕೆ ಡಿ.ಕೆ.ಶಿವಕುಮಾರ್ ಅವರಿಗೆ ಮನವಿ ಸಲ್ಲಿಸಿದರು.

ಶ್ರೀ ಮಧ್ವಾಚಾರ್ಯರ ತತ್ತ್ವ, ವಿಚಾರಧಾರೆ ಮತ್ತು ಆದರ್ಶಗಳನ್ನು ಮಧ್ವ ಪರಂಪರೆಯ ಆಚಾರ್ಯರು, ಮಠಾಧೀಶರು ಹಾಗೂ ಭಕ್ತರು ಇಂದಿಗೂ ನಿರಂತರವಾಗಿ ಸಮಾಜದಲ್ಲಿ ಪ್ರಚಾರಪಡಿಸುತ್ತಿದ್ದಾರೆ. ಅವರು ಪ್ರತಿಪಾದಿಸಿದ ದ್ವೈತ ಸಿದ್ಧಾಂತವು ಕರ್ನಾಟಕ ಮಾತ್ರವಲ್ಲದೆ ದೇಶದಾದ್ಯಂತ ಧಾರ್ಮಿಕ ಹಾಗೂ ತತ್ತ್ವಶಾಸ್ತ್ರೀಯ ಕ್ಷೇತ್ರದಲ್ಲಿ ಮಹತ್ವದ ಸ್ಥಾನವನ್ನು ಹೊಂದಿದೆ.ಅವರ ಪರಂಪರೆಯು ಧಾರ್ಮಿಕ ಜ್ಞಾನ, ನೈತಿಕ ಮೌಲ್ಯಗಳು, ಆಧ್ಯಾತ್ಮಿಕ ಚಿಂತನೆ ಮತ್ತು ಸಾಂಸ್ಕೃತಿಕ ಪರಂಪರೆಯ ಸಂರಕ್ಷಣೆಯಲ್ಲಿ ಮಹತ್ವದ ಪಾತ್ರ ವಹಿಸುತ್ತಿದೆ. ಈ ಹಿನ್ನೆಲೆಯಲ್ಲಿ, ಪ್ರತಿವರ್ಷ ವಿಜಯದಶಮಿ ದಿನ ಬರುವ ಶ್ರೀ ಜಗದ್ಗುರು ಶ್ರೀ ಮಧ್ವಾಚಾರ್ಯರ ಜಯಂತಿಯನ್ನು ಕರ್ನಾಟಕ ಸರ್ಕಾರದ ವತಿಯಿಂದ ರಾಜ್ಯಮಟ್ಟದಲ್ಲಿ ಅಧಿಕೃತವಾಗಿ ಆಚರಿಸುವಂತೆ ಸಚಿವರಿಗೆ ಮುಖಂಡರು ಆಗ್ರಹಿಸಿದ್ದಾರೆ.



ಸರ್ಕಾರದ ವತಿಯಿಂದ ಅಧಿಕೃತ ಕಾರ್ಯಕ್ರಮ ಆಯೋಜಿಸಿ, ಶ್ರೀ ಮಧ್ವಾಚಾರ್ಯರ ಜೀವನ, ತತ್ತ್ವಶಾಸ್ತ್ರ ಹಾಗೂ ಕೊಡುಗೆಗಳ ಕುರಿತು ವಿಚಾರ ಸಂಕಿರಣ, ಉಪನ್ಯಾಸ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವಂತೆ, ಅವರ ಮಹಾನ್ ಪರಂಪರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸಲು ಸಂಬಂಧಿಸಿದ ಇಲಾಖೆಗೆ ಅಗತ್ಯ ನಿರ್ದೇಶನ ನೀಡಿ, ಶ್ರೀ ಜಗದ್ಗುರು ಶ್ರೀ ಮಧ್ವಾಚಾರ್ಯರ ಜಯಂತಿಯನ್ನು ಕರ್ನಾಟಕ ಸರ್ಕಾರದ ವತಿಯಿಂದ ಅಧಿಕೃತವಾಗಿ ಆಚರಿಸಲು ಸೂಕ್ತ ಕ್ರಮ ಕೈಗೊಳ್ಳುವಂತೆ ಮುಖ್ಯಮಂತ್ರಿಗಳಿಗೆ ಆಗ್ರಹಿಸಲಾಯಿತು.

### ಕಾಂಗ್ರೆಸ್ ದೇಶದ್ರೋಹಿ ಕೃತ್ಯ ಕೆಪಿಸಿಸಿ ಅಧ್ಯಕ್ಷರ ಹೇಳಿಕೆಯಿಂದ ದೃಢ

## ಕಾಂಗ್ರೆಸ್ ಪಕ್ಷವು ರಾಷ್ಟ್ರದ್ರೋಹಿಗಳ ಪರವಾಗಿದೆ ಬಸವರಾಜ್ ಬೊಮ್ಮಾಯಿ ಆರೋಪ



**ಹುಬ್ಬಳ್ಳಿ, ಸೆ.17–** ಕಾಂಗ್ರೆಸ್ ಪಕ್ಷವು ಯಾವಾಗಲೂ ರಾಷ್ಟ್ರದ್ರೋಹಿಗಳು ಮತ್ತು ರಾಷ್ಟ್ರವಿರೋಧಿಗಳಿಗೆ ಕುಮ್ಮಕ್ಕು ನೀಡುತ್ತಲೇ ಬಂದಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ್ ಬೊಮ್ಮಾಯಿ ಗಂಭೀರ ಆರೋಪ ಮಾಡಿದ್ದಾರೆ. ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಹೇಳಿಕೆಗೆ ಹುಬ್ಬಳ್ಳಿಯಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಮುಂಬೈ ದಾಳಿಯನ್ನು 'ಸ್ಯಾಫ್ರನ್ ಟೆರರ್' ಎಂದು ಬಿಂಬಿಸಲು ಯತ್ನಿಸಿದ್ದು ಮತ್ತು ಪಾಕಿಸ್ತಾನದ ಪರವಾಗಿ ನಿಂತು ದೇಶದ ಹಿತಾಸಕ್ತಿಗೆ ಧಕ್ಕೆ ತರುವ ದುಷ್ಕೃತ್ಯಗಳನ್ನು ಕಾಂಗ್ರೆಸ್ ಮಾಡುತ್ತಿದೆ ಎಂದು ಅವರು ಕಿಡಿಕಾರಿದ್ದಾರೆ.

ಕರ್ನಾಟಕ ಪ್ರದೇಶ ಕಾಂಗ್ರೆಸ್ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಅವರು ಜೈಲಿನಲ್ಲಿರುವ ಉಮರ್ ಖಾಲಿದ್ ಪರವಾಗಿ ಮಾತನಾಡಿದ್ದು, ದೇಶ ದ್ರೋಹಿಗಳಿಗೆ ಬೆಂಬಲ ನೀಡುವ ಕೃತ್ಯವಾಗಿದೆ ಎಂದು ಬೊಮ್ಮಾಯಿ ಆಕ್ರೋಶ ವ್ಯಕ್ತಪಡಿಸಿದರು.

ಉಮರ್ ಖಾಲಿದ್ 'ನಾನು ಯಾವುದೇ ರೀತಿಯ ರಾಷ್ಟ್ರಕ್ಕೆ, ರಾಷ್ಟ್ರೀಯತೆಗೆ ನಾನು ನ್ಯಾಷನಲಿಸ್ಟ್ ಅಲ್ಲ ಅಂತ ಅವರೇ ಹೇಳ್ತಾರೆ. ಮತ್ತು ಭಾರತ ವಿರೋಧಿ ಎಲ್ಲಾ ಕಾರ್ಯವನ್ನ ಮಾಡಿ ಇವತ್ತು ಜೈಲಿನಲ್ಲಿದ್ದಾರೆ. ಅಂತ ಜೈಲಿನಲ್ಲಿ ಇರುವಂತ ದೇಶದ್ರೋಹಿಗಳನ್ನು ಬೆಂಬಲಿಸುವ ಮುಖಾಂತರ ಕಾಂಗ್ರೆಸ್ ಓಟ್ ಬ್ಯಾಂಕ್ ರಾಜಕಾರಣ ಮಾಡುತ್ತಿದೆ. ಅಂದಕಾಲದಲ್ಲಿ ಸ್ವಾತಂತ್ರ್ಯ ತಂದ ಕಾಂಗ್ರೆಸ್ ಇವತ್ತು ಇಲ್ಲ. ಇವತ್ತು ನಕಲಿ ಕಾಂಗ್ರೆಸ್, ನಕಲಿ ಗಾಂಧಿಗಳಿದ್ದಾರೆ. ಈ ದೇಶದ ಬಗ್ಗೆ ಅವರಿಗೆ ಚಿಂತನೆ ಇಲ್ಲ. ದೇಶದ ಬಗ್ಗೆ ಅವರ ಸಂಸ್ಕೃತಿ ಬಗ್ಗೆ ಯಾವುದೇ ಒಂದು ರೀತಿಯ ಕಲ್ಪನೆಯು ಕೂಡ ಅವರಿಗಿಲ್ಲ. ಈ ದೇಶದ ವ್ಯಾಮೋಹದಿಂದ ಇವತ್ತು ವಿದೇಶಿ ಶಕ್ತಿಗಳಿಗೆ ಮತ್ತು ನಮ್ಮ ದೇಶದ್ರೋಹಿ ಶಕ್ತಿಗಳಿಗೆ ಅವರು ಕೈಜೋಡಿಸುವ ಕೆಲಸವನ್ನು ಮಾಡಿ ದೇಶದ್ರೋಹ ಕೆಲಸ ಮಾಡುತ್ತಿ ದ್ದಾರೆ. ಅದು ಇವತ್ತು ಕರ್ನಾಟಕ ರಾಜ್ಯ ಕಾಂಗ್ರೆಸ್ ಅಧ್ಯಕ್ಷರಿಂದ ಅವರ ಹೇಳಿಕೆಯಿಂದ ಮತ್ತೊಮ್ಮೆ ದೃಢಪಟ್ಟಿದೆ ಎಂದು ಹೇಳಿದರು.

ರಾಷ್ಟ್ರದ್ರೋಹಿಗಳ ಪರವಾಗಿ ನಿಲ್ಲುವ ಮೂಲಕ ಕಾಂಗ್ರೆಸ್ ನಾಯಕರು ತಮ್ಮ ನಿಜವಾದ ಬಣ್ಣವನ್ನು ತೋರುತ್ತಿದ್ದಾರೆ ಮತ್ತು ಇದು ಅತ್ಯಂತ ನಾಚಿಕೆಗೇಡು ಹಾಗೂ ಖಂಡನೀಯ ಸಂಗತಿಯಾಗಿದೆ ಎಂದು ಅವರು ಟೀಕಿಸಿದ್ದಾರೆ. ದೇಶದ್ರೋಹಿಗಳ ಪರವಾಗಿ ನಿಲ್ಲುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

### ಎಚ್.ಎಸ್.ಕೆ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಹೈದರಾಬಾದ್ ಕರ್ನಾಟಕ ವಿಮೋಚನಾ ದಿನ ಆಚರಣೆ



**ಬಳ್ಳಾರಿ, ಸೆ 17.** ಬಳ್ಳಾರಿ ನಗರದ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಯಾದ ವಿವಿ ಸಂಘದ ಹಾನಗಲ್ ಶ್ರೀ ಕುಮಾರೇಶ್ವರ ಪಾಲಿಟೆಕ್ನಿಕ್ ಕಾಲೇಜ್ ನ ಕಚೇರಿಯಲ್ಲಿ ಗುರುವಾರ ಹೈದರಾಬಾದ್ ಕರ್ನಾಟಕ ವಿಮೋಚನಾ ದಿನ ಮತ್ತು ಕಲ್ಯಾಣ ಕರ್ನಾಟಕ ಉತ್ಸವ ದಿನದ ಅಂಗವಾಗಿ ಕನ್ನಡ ಭುವನೇಶ್ವರಿ ಮತ್ತು ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಭಾವಚಿತ್ರಗಳಿಗೆ ಪೂಜೆ ಸಲ್ಲಿಸುವುದರ ಮೂಲಕ ಆಚರಿಸಲಾಯಿತು. ಈ ಸಂದರ್ಭದಲ್ಲಿ ಎಚ್.ಎಸ್.ಕೆ. ಪಾಲಿಟೆಕ್ನಿಕ್ ಕಾಲೇಜಿನ ಆಡಳಿತ ಮಂಡಳಿಯ ಅಧ್ಯಕ್ಷ ಪಲ್ಲೇದ ಪ್ರಭುಲಿಂಗ, ಆಡಳಿತ ಮಂಡಳಿಯ ಸದಸ್ಯರು, ಪ್ರಾಂಶು ಪಾಲರಾದ ಬಿ.ಶ್ರೀಶೈಲಗೌಡ, ಅಕ್ಯಾಡೆಮಿಕ್ ಡೀನ್,ಎಲ್ಲಾ ವಿಭಾಗದ ಮುಖ್ಯಸ್ಥರು, ಸಿಬ್ಬಂದಿ ವರ್ಗದವರು ಹಾಜರಿದ್ದರು.

## ನೈಸರ್ಗಿಕ ಕೃಷಿ ಪದ್ಧತಿ ಬಳಸಲು ರೈತರಿಗೆ ಸಲಹೆ



ರಾಯಚೂರು ಜಿಲ್ಲೆಯ ವಟಗಲ್ ಗ್ರಾಮದಲ್ಲಿ ಕೃಷಿ ವಿಶ್ವವಿದ್ಯಾಲಯದ ವಿದ್ಯರ್ತಿಗಳ ಕಾರ್ಯಾನುಭವ ಶಬಿರದ ಅಂಗವಾಗಿ ಏರ್ಪಡಿಸಿದ್ದ ಕೃಷಿ ವೈಭವ ಕಾರ್ಯಕ್ರಮವನ್ನು ಕೃಷಿ ತಾಂತ್ರಿಕ ವಿಭಾಗದ ಡೀನ್ ಡಾ.ಕೆ.ವಿ.ಪ್ರಕಾಶ ಉದ್ಘಾಟಿಸಿದರು.

**ರಾಯಚೂರು, ಸೆ. 17:** ಮಣ್ಣಿನ ಗುಣ ಧರ್ಮ ಆಧರಿಸಿ ಬೆಳೆ ಆಯ್ಕೆ ಮಾಡುವುದು, ಆಧುನಿಕ ಯಂತ್ರಗಳ ಬಳಕೆ ಮತ್ತು ನೈಸರ್ಗಿಕ ಕೃಷಿ ಪದ್ದತಿ ಮೂಲಕ ಹೆಚ್ಚಿನ ಇಳುವರಿ ಪಡೆಯಲು ರೈತರು ಮುಂದಾಗಬೇಕು ಎಂದು ರಾಯಚೂರು ಕೃಷಿ ವಿಶ್ವ ವಿದ್ಯಾಲಯದ ಕೃಷಿ ತಾಂತ್ರಿಕತೆ ವಿಭಾಗದ ಡೀನ್ ಡಾ.ಕೆ.ವಿ.ಪ್ರಕಾಶ ಹೇಳಿದರು.

ಕೃಷಿ ವಿಶ್ವ ವಿದ್ಯಾಲಯದ ಬಿ.ಎಸ್ಸಿ. ಅಂತಿಮ ವರ್ಷದ ವಿದ್ಯಾರ್ಥಿಗಳ ಕಾರ್ಯಾನುಭವ ಶಿಬಿರದ ಅಂಗವಾಗಿ ವಟಗಲ್ ಗ್ರಾಮದಲ್ಲಿ ಏರ್ಪಡಿಸಿದ್ದ ಕೃಷಿ ವೈಭವ–2026 ಕೃಷಿ ವಸ್ತು ಪ್ರದರ್ಶನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕೃಷಿ ವಿಭಾಗದ ಡೀನ್ ಜಗಜೀವನ್‌ರಾಮ್ ಮಾತನಾಡಿ, ವಿದ್ಯಾರ್ಥಿಗಳ ಪ್ರಾಯೋಗಿಕ ಕಲಿಕೆಗೆ ಸಹಕಾರ ನೀಡಿದ ಗ್ರಾಮಸ್ಥರ ಕಾರ್ಯ ಶ್ಲಾಘನೀಯ ಎಂದರು.

ಕಾರ್ಯಕ್ರಮದ ಸಾನಿಧ್ಯ ವಹಿಸಿದ್ದ ಸಂತೆಕೆಲ್ಲೂರು ಘನಮಠೇಶ್ವರ ಮಠದ ಗುರುಬಸವ ಸ್ವಾಮೀಜಿ, ಶಾಸಕ ಆರ್.ಬಸನಗೌಡ ತುರ್ವಿಹಾಳ, ಶಿಬಿರದ ಸಂಯೋಜಕ ಡಿ.ಎಸ್.ಅಶ್ವಥನಾರಾಯಣ, ಪಿಡಿಓ ತಿಮ್ಮನಗೌಡ ಪಾಟೀಲ್, ಮುಖ್ಯ ಶಿಕ್ಷಕಿ ಸರೋಜಾ, ರೈತರಾದ ವೆಂಕಟೇಶ ಪಾಟೀಲ್, ಬಸವರಾಜ ಬುಂಕಲದೊಡ್ಡಿ ಮತ್ತು ಶಿವಕುಮಾರ ಪಾಟೀಲ್ ಮಾತನಾಡಿದರು.

ಕುಂಭ, ಕಳಸಗಳ ಜೊತೆಗೆ ಎತ್ತಿನ ಬಂಡಿಯಲ್ಲಿ ಬಸವಣ್ಣನ ದೇವಸ್ಥಾನದಿಂದ ಸಮಾರಂಭದ ಸ್ಥಳಕ್ಕೆ ಗಣ್ಯರನ್ನು ಮೆರವಣಿಗೆಯಲ್ಲಿ ಕರೆ ತರಲಾಯಿತು.

ಇರಕಲ್ ಮಠದ ಬಸವಪ್ರಸಾದ ಸ್ವಾಮೀಜಿ, ಕೃಷಿ ಅಧಿಕಾರಿ ಶಿವಶರಣ ಭೋವಿ, ಕೃಷಿ ವಿದ್ಯಾಲಯದ ತಜ್ಞ ಬಸವರಾಜ ಹುಲಗೂರು ಮುಖಂಡರಾದ ಬಲವಂತರಾಯ ವಟಗಲ್, ಆದನಗೌಡ, ಮಂಜುನಾಥ ಸ್ವಾಮಿ, ಸೂಗಪ್ಪ ಚಿಲ್ಕರಾಗಿ, ಮಹಾಂತೇಶ ಸ್ವಾಮಿ, ಸುಭಾಷ್ ಮತ್ತಿತರರು ಉಪಸ್ಥಿತರಿದ್ದರು.

> **ಕೃಷಿ ಚಟುವಟಿಕೆಯಲ್ಲಿ ಎತ್ತಿಗೆ ಪರ್ಯಾಯವಾಗಿ ಕತ್ತೆ ಬಳಸಲು ವಿವಿಯ ತಜ್ಞರು ಕತ್ತೆಗೆ ತರಬೇತಿ ನೀಡಿ ಅದನ್ನು ಒಬ್ಬ ರೈತರಿಗೆ ನೀಡಿದ್ದರು. ಕೆಲ ದಿನ ಬಳಕೆ ಮಾಡಿದ ರೈತ ಸಮಾಜದ ನಿಂದನೆಗೆ ಹೆದರಿ ಅದನ್ನು ವಾಪಸು ನೀಡಿದರು. ಹೀಗೆ ಸರ್ಕಾರದ ಎಲ್ಲಾ ಯೋಜನೆಗಳು ಸಫಲವಾಗುವುದಿಲ್ಲ.**
> – ವೆಂಕಟೇಶ ಪಾಟೀಲ, ವಟಗಲ್ ರೈತ.

## ರಾಮನಗರ ಜೆಡಿಎಸ್ ಕಚೇರಿಗೆ ನಿಖಿಲ್ ಭೇಟಿ: ಸ್ಥಳೀಯ ಚುನಾವಣೆಗೆ ಕಾರ್ಯಕರ್ತರಿಗೆ ಶಕ್ತಿ ತುಂಬಲು ನಿರ್ಧಾರ

**ರಾಮನಗರ, ಸೆ.17:** ರಾಮನಗರದ ನೂತನ ಜೆಡಿಎಸ್ ಕಚೇರಿಗೆ ಪಕ್ಷದ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಅವರು ಗುರುವಾರ ಭೇಟಿ ನೀಡಿದರು.

ಕಳೆದ 15 ದಿನಗಳ ಹಿಂದೆ ನೂತನವಾಗಿ ಆರಂಭವಾಗಿರುವ ಈ ಕಚೇರಿಯಲ್ಲಿ ಪಕ್ಷದ ಮುಖಂಡರು, ಪದಾಧಿಕಾರಿಗಳು ಹಾಗೂ ಕಾರ್ಯಕರ್ತರೊಂದಿಗೆ ಸಭೆ ನಡೆಸಿ, ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆ ಹಾಗೂ ಪಕ್ಷ ಸಂಘಟನೆಯನ್ನು ಬಲಪಡಿಸುವ ಕುರಿತು ವಿಸ್ತೃತ ಸಮಾಲೋಚನೆ ನಡೆಸಿದರು.

ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸ್ಥಳೀಯ ಸಂಸ್ಥೆ ಚುನಾವಣೆ ಸಮೀಪಿಸುತ್ತಿದೆ. ಪಕ್ಷದ ಸಂಘಟನೆಗಾಗಿ ದುಡಿದ ಕಾರ್ಯಕರ್ತರಿಗೆ ಆದ್ಯತೆ ನೀಡಬೇಕು. ಈ ಕಚೇರಿಯ ಮೂಲಕ ಸಾರ್ವಜನಿಕರು ಹಾಗೂ ಕಾರ್ಯಕರ್ತರ ಕುಂದುಕೊರತೆಗಳನ್ನು ಆಲಿಸಿ ಪರಿಹಾರ ಒದಗಿಸುವ ಕೆಲಸ ಮಾಡುತ್ತೇವೆ ಎಂದು ಹೇಳಿದರು.

ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ರಾಮನಗರದಿಂದ



ಸ್ಪರ್ಧಿಸುವ ವಿಚಾರದ ಬಗ್ಗೆ ಪ್ರತಿಕ್ರಿಯಿಸಿದ ಅವರು, "ಈ ಬಗ್ಗೆ ಈಗಾಗಲೇ ಸ್ಪಷ್ಟವಾಗಿ ಹೇಳಿದ್ದೇನೆ, ಅದರಲ್ಲಿ ಯಾವುದೇ ಅನು ಮಾನವಿಲ್ಲ. ರಾಮನಗರದ ಜನರ ಮೇಲೆ ನಮಗೆ ಸಂಪೂರ್ಣ ನಂಬಿಕೆ ಇದೆ. ಕಳೆದ ಚುನಾವಣೆಯ ಕಹಿ ನೆನಪು ಕಾರ್ಯಕರ್ತರ ಮನಸ್ಸಿನಿಂದ ಇನ್ನೂ ಮಾಸಿಲ್ಲ. ಅದನ್ನು ಉತ್ತಮ ಫಲಿತಾಂಶದ ಮೂಲಕ ಹೋಗಲಾಡಿಸಿ ಕಾರ್ಯಕರ್ತರಲ್ಲಿ ನೂತನ ಉತ್ಸಾಹ ತುಂಬಬೇಕಿದೆ. ಜಿಲ್ಲೆಯ ನಾಲ್ಕು ಕ್ಷೇತ್ರಗಳಲ್ಲೂ ಜೆಡಿಎಸ್ ಶಾಸಕರನ್ನು ನೋಡುವ ಗುರಿ ನಮ್ಮದಾಗಿದೆ" ಎಂದರು. ಕೆಲವು ಕಡೆ ಜೆಡಿಎಸ್‌ಗೆ ಹಿನ್ನಡೆಯಾಗಿದೆ ನಿಜ, ಆದರೆ ರಾಜಕೀಯದಲ್ಲಿ ಹಿನ್ನಡೆ–ಮುನ್ನಡೆ ಶಾಶ್ವತವಲ್ಲ, ಅದು ತಾತ್ಕಾಲಿಕ. ಬದಲಾವಣೆಯೊಂದಿಗೆ ನಾವು ಮತ್ತೆ ಸಂಘಟಿತ ಪ್ರಯತ್ನ ಮಾಡುತ್ತೇವೆ.

ಸದ್ಯ ಸ್ಥಳೀಯ ಚುನಾವಣೆಗೆ ಕಾರ್ಯಕರ್ತರಿಗೆ ಶಕ್ತಿ ತುಂಬುವುದು ಮುಖ್ಯ, ಅವರಿಗೆ ಶಕ್ತಿ ತುಂಬಿದಾಗ ಮಾತ್ರ ಅವರು ಎಂಎಲ್‌ಎ, ಎಂಪಿ ಚುನಾವಣೆಗಳಲ್ಲಿ ಪ್ರಾಮಾಣಿಕವಾಗಿ ಕೆಲಸ ಮಾಡುತ್ತಾರೆ" ಎಂದು ಅಭಿಪ್ರಾಯಪಟ್ಟರು.

ಮತ್ತೆ ರಾಜ್ಯ ಪ್ರವಾಸ ಕೈಗೊಳ್ಳುವ ಕುರಿತು ಮಾತನಾಡಿದ ಅವರು, ಶೀಘ್ರದಲ್ಲೇ ರಾಜ್ಯ ಪ್ರವಾಸದ ಬಗ್ಗೆ ತೀರ್ಮಾನ ಮಾಡುತ್ತೇನೆ. ಸರ್ಕಾರ ಬಂದು ಮೂರು ವರ್ಷವಾದರೂ ರೈತರ ಸಮಸ್ಯೆಗಳಿಗೆ ಪರಿಹಾರ ಸಿಕ್ಕಿಲ್ಲ. ಸರ್ಕಾರ ಕೇವಲ 102 ತಾಲೂಕುಗಳನ್ನು ಮಾತ್ರ ಬರಪೀಡಿತ ಎಂದು ಘೋಷಿಸಿದೆ,

ಉಳಿದ ತಾಲೂಕುಗಳಲ್ಲಿ ಬರ ಇಲ್ಲವೇ? ರೈತರ ಆತ್ಮಹತ್ಯೆ ಪ್ರಕರಣಗಳು ಹೆಚ್ಚಾಗುತ್ತಿವೆ. ಈ ಹಿನ್ನೆಲೆಯಲ್ಲಿ ಹಲವು ಜಿಲ್ಲೆಗಳಿಗೆ ಭೇಟಿ ನೀಡಿ ರೈತರ ಸಮಸ್ಯೆಗಳನ್ನು ಆಲಿಸಲಿದ್ದೇನೆ ಎಂದು ಹೇಳಿದರು.

## ಸಂಜೀವರಾಯನಕೋಟೆ: ಬಂಡಿಯಲ್ಲಿ ಗಣಪತಿ ಮೆರವಣಿಗೆ, ರೈತರ ಒಳಿತಿಗೆ ವಿಶೇಷ ಪ್ರಾರ್ಥನೆ

**ಬಳ್ಳಾರಿ ಸೆ 17:** ಆಧುನಿಕತೆಯ ಭರಾಟೆಯ ನಡುವೆಯೂ ಗ್ರಾಮೀಣ ಸಂಸ್ಕೃತಿ, ಕೃಷಿ ಪರಂಪರೆ ಹಾಗೂ ರೈತರ ಬದುಕಿನೊಂದಿಗೆ ಬೆಸೆದುಕೊಂಡ ಗಣೇಶೋತ್ಸವಕ್ಕೆ ಸಾಕ್ಷಿಯಾದ ಸಂಜೀವರಾಯನಕೋಟೆ ಗ್ರಾಮ. ಗ್ರಾಮದ ಮೀಂಚೇರಿ ಕುರುಬರ ಓಣಿಯ ನಾಗಪ್ಪ ಕಟ್ಟೆ ಬಳಿ ಎಸ್‌ಆರ್ ಕೋಟೆ ವಿನಾಯಕ ಬಾಯ್ಸ್ ವತಿಯಿಂದ 6ನೇ ವರ್ಷದ



ಗಣೇಶೋತ್ಸವವನ್ನು ಸರಳವಾಗಿ, ಅರ್ಥಪೂರ್ಣವಾಗಿ ಆಚರಿಸಲಾಯಿತು. ಗಣೇಶ ಚತುರ್ಥಿಯ ಅಂಗವಾಗಿ ಬೆಳಿಗ್ಗೆ ಗಣಪತಿ ಮೂರ್ತಿಯನ್ನು ಪ್ರತಿಷ್ಠಾಪಿಸಿ ವಿಶೇಷ ಪೂಜೆ ಸಲ್ಲಿಸಲಾಯಿತು. ದಿನವಿಡೀ ಭಕ್ತರಿಗೆ ಪಾಯಸ, ಕೇಸರಿಬಾತ್ ಸೇರಿದಂತೆ ಪ್ರಸಾದ ವಿತರಿಸಲಾಯಿತು. ಸಂಜೆ ಗಣಪತಿ ಮೂರ್ತಿಯನ್ನು ಅಲಂಕರಿಸಿದ ಎತ್ತಿನ ಬಂಡಿಯಲ್ಲಿ ಕೂರಿಸಿ, ಡೊಳ್ಳು ವಾದ್ಯಗಳೊಂದಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಲಾಯಿತು.

### ಪ್ರಧಾನಮಂತ್ರಿ ನರೇಂದ್ರ ಮೋದಿ ಜನ್ಮದಿನದ ಪ್ರಯುಕ್ತ

## ಆಹಾರ ಕಿಟ್ ವಿತರಿಸಿದ ಮಾಜಿ ಶಾಸಕ ಸೋಮಶೇಖರರೆಡ್ಡಿ




**ಬಳ್ಳಾರಿ, ಸೆ. 17–** ದೇಶದ ಹೆಮ್ಮೆಯ ಪ್ರಧಾನಮಂತ್ರಿಗಳಾದ ನರೇಂದ್ರ ಮೋದಿಜಿ ಅವರ ಜನ್ಮದಿನದ ಪ್ರಯುಕ್ತ ಗುರುವಾರ ಬಳ್ಳಾರಿ ನಗರದ ಜಿಲ್ಲಾ ಆಸ್ಪತ್ರೆಯ ಆವರಣದಲ್ಲಿ ಮಾಜಿ ಶಾಸಕ ಗಾಲಿ ಸೋಮಶೇಖರ್ ರೆಡ್ಡಿ ಅವರ ನೇತೃತ್ವದಲ್ಲಿ ಸೇವಾ ಕಾರ್ಯವನ್ನು ಹಮ್ಮಿಕೊಳ್ಳಲಾಗಿತ್ತು.

ಜಿಲ್ಲಾ ಆಸ್ಪತ್ರೆಯ ವಿವಿಧ ವಾರ್ಡ್‌ಗಳಿಗೆ ಭೇಟಿ ನೀಡಿ ಚಿಕಿತ್ಸೆ ಪಡೆಯುತ್ತಿರುವ ಹಲವಾರು ರೋಗಿಗಳಿಗೆ ಬ್ರೆಡ್ ಹಾಗೂ ಹಣ್ಣುಗಳನ್ನು ವಿತರಿಸಿ, ಅವರ ಆರೋಗ್ಯ ಹಾಗೂ ಯೋಗಕ್ಷೇಮವನ್ನು ವಿಚಾರಿಸಲಾಯಿತು.

ಅಲ್ಲದೇ, ರೋಗಿಗಳಿಗೆ ಅಗತ್ಯವಿರುವ ಮೂಲಭೂತ ಸೌಲಭ್ಯಗಳು ಹಾಗೂ ಅವಶ್ಯಕ ಕಿಟ್‌ಗಳನ್ನು ಒದಗಿಸುವಂತೆ ಜಿಲ್ಲಾ ಶಸ್ತ್ರಚಿಕಿತ್ಸಕರಿಗೆ ಮನವಿ ಮಾಡಲಾಯಿತು.

# ರಾತ್ರೋರಾತ್ರಿ ಸ್ಥಾಪಿಸಿದ್ದ ಮಾಜಿ ಸಿಎಂ ಸಿದ್ದರಾಮಯ್ಯ ಪ್ರತಿಮೆ ಬೆಳಗಿನಜಾವವೇ ತೆರವು

**ಕಲಬುರಗಿ, ಸೆ.17:** ನಗರದ ಹೈಕೋರ್ಟ್ ವೃತ್ತದಲ್ಲಿ ಅಭಿಮಾನಿಗಳು ರಾತ್ರೋರಾತ್ರಿ ಸ್ಥಾಪಿಸಿದ್ದ ಮಾಜಿ ಸಿಎಂ ಸಿದ್ದರಾಮಯ್ಯ ಅವರ 9 ಅಡಿ ಪ್ರತಿಮೆಯನ್ನು ಮಹಾನಗರ ಪಾಲಿಕೆ ಅಧಿಕಾರಿಗಳು ಮತ್ತು ಪೊಲೀಸರು ಬೆಳಗಿನಜಾವವೇ ತೆರವುಗೊಳಿಸಿದ್ದಾರೆ. ಕಲ್ಯಾಣ ಕರ್ನಾಟಕದ ಅತಿದೊಡ್ಡ ನಗರ ಕಲಬುರಗಿಯ ಪ್ರಮುಖ ವೃತ್ತವೊಂದರಲ್ಲಿ ಯಾವುದೇ ಪೂರ್ವಾನುಮತಿ ಪಡೆಯದೆ, ರಾತ್ರೋರಾತ್ರಿ ಸ್ಥಾಪಿಸಲಾಗಿದ್ದ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪ್ರತಿಮೆಯನ್ನು ಮಹಾನಗರ ಪಾಲಿಕೆ ಅಧಿಕಾರಿಗಳು ತೆರವುಗೊಳಿಸಿರುವ ಘಟನೆ ಕಲಬುರಗಿಯಲ್ಲಿ ನಡೆದಿದೆ.

ಮಾಜಿ ಮುಖ್ಯಮಂತ್ರಿಯಾಗಿರುವ ಸಿದ್ದರಾಮಯ್ಯ ಅವರು ಸದ್ಯ ಯಾವುದೇ ಅಧಿಕಾರದಲ್ಲಿ ಇಲ್ಲದಿದ್ದರೂ, ಅಭಿಮಾನಿಗಳು ಈ ರೀತಿ ಮೂರ್ತಿ ಪ್ರತಿಷ್ಠಾಪಿಸಿರುವುದು ಈಗ ರಾಜಕೀಯ ವಲಯದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿದೆ. ಕಲಬುರಗಿ ನಗರದ ಜನನಿಬಿಡ ಹೈಕೋರ್ಟ್ ಕ್ರಾಸ್ (ವೃತ್ತ) ಬಳಿ ಗುರುವಾರ ಮುಂಜಾನೆ ಸುಮಾರು 9 ಅಡಿ ಎತ್ತರದ ಮಾಜಿ ಸಿಎಂ ಸಿದ್ದರಾಮಯ್ಯ ಅವರ ಪ್ರತಿಮೆ ಕಾಣಿಸಿಕೊಂಡಿತ್ತು. ಏಳೆಂಟು ಜನರ ಅಭಿಮಾನಿಗಳ ಗುಂಪು ರಾತ್ರೋರಾತ್ರಿ ಯಾವುದೇ ಅಧಿಕೃತ ಅನುಮತಿಯನ್ನು ಪಡೆಯದೆ ಈ ಪ್ರತಿಮೆಯನ್ನು ರಹಸ್ಯವಾಗಿ ಪ್ರತಿಷ್ಠಾಪಿಸಿತ್ತು. ಇದರೊಂದಿಗೆ ಈ ಹಿಂದೆ ಯಾವುದೇ ಅಧಿಕೃತ ಅನುಮತಿ ಇಲ್ಲದೆಯೇ 'ಸಿದ್ದರಾಮಯ್ಯ



ಸರ್ಕಲ್' ಹೆಸರಿನ ಬ್ಯಾನರ್ ಅಳವಡಿಸಲಾಗಿತ್ತು ಎಂಬ ಅಂಶವೂ ಮುನ್ನೆಲೆಗೆ ಬಂದಿದೆ.

ಇನ್ನು ರಾತ್ರಿ ವೇಳೆ ಸಿದ್ದರಾಮಯ್ಯ ಅವರ ಪ್ರತಿಮೆಯನ್ನು ಪ್ರತಿಷ್ಠಾಪನೆ ಮಾಡಿದ ನಂತರ, ರಾತ್ರಿಯೇ ಸಾಮಾಜಿಕ ಜಾಲತಾಣಗಳಲ್ಲಿ ವಿಡಿಯೋಗಳು ವೈರಲ್ ಆಗಿದ್ದವು. ಆದರೆ, ಈ ಬಗ್ಗೆ ಹಿರಿಯ ಅಧಿಕಾರಿಗಳು ಅನುಮತಿ ಕೊಟ್ಟಿದ್ದಾದರೂ ಯಾರು ಎಂದು ಪ್ರಶ್ನೆ ಮಾಡಿದಾಗ ಅನುಮತಿ ಪಡೆಯದೇ ಅನಧಿಕೃತವಾಗಿ ಪ್ರತಿಮೆ ನಿಲ್ಲಿಸಿರುವುದು ತಿಳಿದುಬಂದಿದೆ. ಹೀಗಾಗಿ, ಬೆಳಗ್ಗೆ ಜನರು ಬಂದು ಸಿದ್ದರಾಮಯ್ಯ ಅವರ ಪ್ರತಿಮೆಯನ್ನು ನೋಡುವ ಮುನ್ನವೇ ಪಾಲಿಕೆ ಸಿಬ್ಬಂದಿ ಪ್ರತಿಮೆಯ ಮುಖವನ್ನು ಮುಚ್ಚಿದ್ದರು.

ಅನುಮತಿಯಿಲ್ಲದೆ ಪ್ರತಿಮೆ ಸ್ಥಾಪಿಸಿರುವ ವಿಚಾರ ತಿಳಿಯುತ್ತಿದ್ದಂತೆ ಎಚ್ಚೆತ್ತ ಕಲಬುರಗಿ ಮಹಾನಗರ ಪಾಲಿಕೆ ಅಧಿಕಾರಿಗಳು ಹಾಗೂ ಪೊಲೀಸರು ಸ್ಥಳಕ್ಕೆ ಧಾವಿಸಿದರು. ಬಿಗಿ ಪೊಲೀಸ್ ಬಂದೋಬಸ್ತ್ ನಡುವೆ, ಪಾಲಿಕೆ ಸಿಬ್ಬಂದಿ ಹೈಕೋರ್ಟ್ ವೃತ್ತದಲ್ಲಿ ಅಳವಡಿಸಿದ್ದ ಸಿದ್ದರಾಮಯ್ಯ ಅವರ ಪ್ರತಿಮೆಯನ್ನು ಬೆಳಗಿನಜಾವವೇ ತೆರವುಗೊಳಿಸುವ ಕಾರ್ಯಾಚರಣೆ ನಡೆಸಿದರು.

ವಿಶೇಷವೆಂದರೆ, ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ ಅಂಗವಾಗಿ ಮುಖ್ಯಮಂತ್ರಿಗಳು ಹಾಗೂ ಗಣ್ಯರು ಕಲಬುರಗಿ ಪ್ರವಾಸದಲ್ಲಿದ್ದಾರೆ. ಸಿದ್ದರಾಮಯ್ಯ ಅವರ ಮೂರ್ತಿ ಪ್ರತಿಷ್ಠಾಪನೆ ಮಾಡಲಾಗಿರುವ ಅದೇ ವೃತ್ತದ ಮೂಲಕ ಅಫಜಲಪುರಕ್ಕೆ ತೆರಳಬೇಕಿದ್ದ ಈ ಸಂದರ್ಭದಲ್ಲಿ, ಈ ಅಕ್ರಮ ಪ್ರತಿಮೆ ತೆರವು ಕಾರ್ಯಾಚರಣೆ ನಡೆದಿರುವುದು ಸಾರ್ವಜನಿಕ ಹಾಗೂ ರಾಜಕೀಯ ವಲಯದಲ್ಲಿ ಭಾರಿ ಕುತೂಹಲ ಹಾಗೂ ಚರ್ಚೆಗೆ ಕಾರಣವಾಗಿದೆ. ಅನುಮತಿ ಪಡೆಯದೆ ಸಾರ್ವಜನಿಕ ಸ್ಥಳಗಳಲ್ಲಿ ಈ ರೀತಿ ಮೂರ್ತಿಗಳನ್ನು ಸ್ಥಾಪಿಸುವುದರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕೆಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

# ಪ್ರಿಸ್ಕ್ರಿಪ್ಷನ್ ಔಷಧ ಮಾರಾಟಕ್ಕೆ ಸಿಸಿಟಿವಿ ಕಣ್ಗಾವಲು: ಡ್ರಗ್ಸ್ ರೂಲ್ಸ್‌ಗೆ ತಿದ್ದುಪಡಿ ತರಲು ಕೇಂದ್ರ ಆರೋಗ್ಯ ಸಚಿವಾಲಯದ ಪ್ರಸ್ತಾವನೆ

**ನವದೆಹಲಿ,ಸೆ.17:** ಪ್ರಿಸ್ಕ್ರಿಪ್ಷನ್ ಆಧಾರದಲ್ಲಿ ಮಾರಾಟವಾಗುವ ಔಷಧಗಳ ವಿತರಣೆಯನ್ನು ಮತ್ತಷ್ಟು ಕಟ್ಟುನಿಟ್ಟಾಗಿ ನಿಯಂತ್ರಿಸುವ ಉದ್ದೇಶದಿಂದ ಮೆಡಿಕಲ್ ಸ್ಟೋರ್‌ಗಳಲ್ಲಿ ಸಿಸಿಟಿವಿ ಕಣ್ಗಾವಲು ಕಡ್ಡಾಯಗೊಳಿಸಲು ಕೇಂದ್ರ ಆರೋಗ್ಯ ಸಚಿವಾಲಯ ಪ್ರಸ್ತಾವನೆ ಮುಂದಿಟ್ಟಿದೆ. ಈ ಸಂಬಂಧ ಔಷಧ ನಿಯಮಗಳು, 1945ಕ್ಕೆ ತಿದ್ದುಪಡಿ ತರಲು ಸೆಪ್ಟೆಂಬರ್ 8ರಂದು ಕರಡು ಅಧಿಸೂಚನೆ ಹೊರಡಿಸಲಾಗಿದೆ.



ಕರಡು ನಿಯಮ ಜಾರಿಗೆ ಬಂದರೆ, ನೋಂದಾಯಿತ ವೈದ್ಯರು ನೀಡುವ ಪ್ರಿಸ್ಕ್ರಿಪ್ಷನ್ ಆಧರಿಸಿ ಔಷಧ ಮಾರಾಟ ಮಾಡುವ ಸಗಟು ವಹಿವಾಟು ಹೊರತುಪಡಿಸಿದ ಪರವಾನಗಿ ಹೊಂದಿರುವ ಔಷಧ ಮಾರಾಟ ಮಳಿಗೆಗಳಲ್ಲಿ ಸಿಸಿಟಿವಿ ವ್ಯವಸ್ಥೆ ಅಳವಡಿಸಿ ನಿರ್ವಹಿಸುವುದು ಕಡ್ಡಾಯವಾಗಲಿದೆ. ಮಾರಾಟದ ಪ್ರಕ್ರಿಯೆಯನ್ನು ಪರಿಶೀಲಿಸಲು ಸಾಧ್ಯವಾಗುವ ರೀತಿಯಲ್ಲಿ ಸಿಸಿಟಿವಿ ವ್ಯವಸ್ಥೆ ಇರಬೇಕು ಎಂದು ಪ್ರಸ್ತಾವಿಸಲಾಗಿದೆ.

ಮೆಡಿಕಲ್ ಸ್ಟೋರ್‌ಗಳಲ್ಲಿ ದಾಖಲಾಗುವ ಸಿಸಿಟಿವಿ ದೃಶ್ಯಾವಳಿಗಳನ್ನು ಕನಿಷ್ಠ ಮೂರು ತಿಂಗಳ ಕಾಲ ಸಂರಕ್ಷಿಸಬೇಕು ಎಂದು ಕರಡು ನಿಯಮದಲ್ಲಿ ತಿಳಿಸಲಾಗಿದೆ. ಇದರಿಂದ ಪ್ರಿಸ್ಕ್ರಿಪ್ಷನ್ ಔಷಧಗಳ ಮಾರಾಟಕ್ಕೆ ಸಂಬಂಧಿಸಿದಂತೆ ನಂತರದ ಹಂತದಲ್ಲಿ ಪರಿಶೀಲನೆ ನಡೆಸಲು ಹಾಗೂ ನಿಯಮ ಉಲ್ಲಂಘನೆಗಳಿದ್ದಲ್ಲಿ ವಹಿವಾಟನ್ನು ಪತ್ತೆಹಚ್ಚಲು ಸಾಧ್ಯವಾಗಲಿದೆ.

**H, H1, X ಔಷಧಗಳ ಮೇಲೆ ನಿಗಾ**

ಅನಧಿಕೃತವಾಗಿ H, H1 ಮತ್ತು X ಔಷಧಗಳನ್ನು ಮಾರಾಟ ಮಾಡುವುದನ್ನು ತಡೆಯುವುದು ಈ ಪ್ರಸ್ತಾವನೆಯ ಪ್ರಮುಖ ಉದ್ದೇಶಗಳಲ್ಲಿ ಒಂದಾಗಿದೆ. ವಿಶೇಷವಾಗಿ ಪ್ರಿಸ್ಕ್ರಿಪ್ಷನ್ ಅಗತ್ಯವಿರುವ ಹಾಗೂ ನಿಯಂತ್ರಿತ ಔಷಧಗಳ ಮಾರಾಟದಲ್ಲಿ ಪಾರದರ್ಶಕತೆ ಮತ್ತು ಹೊಣೆಗಾರಿಕೆಯನ್ನು ಹೆಚ್ಚಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಆರೋಗ್ಯ ಸಚಿವಾಲಯ ತಿಳಿಸಿದೆ.

ಈ ವಿಚಾರವನ್ನು ಔಷಧ ನಿಯಂತ್ರಣ ವ್ಯವಸ್ಥೆಯ ತಜ್ಞ ಸಮಿತಿಗಳಲ್ಲೂ ಚರ್ಚಿಸಲಾಗಿತ್ತು. ಔಷಧ ಸಲಹಾ ಸಮಿತಿ ಮೆಡಿಕಲ್ ಸ್ಟೋರ್‌ಗಳಲ್ಲಿ ಸಿಸಿಟಿವಿ ಅಳವಡಿಕೆಯನ್ನು ನಿಯಮ ತಿದ್ದುಪಡಿ ಮೂಲಕ ಕಡ್ಡಾಯಗೊಳಿಸುವ ಸಾಧ್ಯತೆಯನ್ನು ಒಪ್ಪಿಕೊಂಡಿತ್ತು. ಬಳಿಕ ಔಷಧ ತಾಂತ್ರಿಕ ಸಲಹಾ ಮಂಡಳಿ ಮಟ್ಟದಲ್ಲೂ ಪ್ರಸ್ತಾವನೆ ಪರಿಗಣನೆಯಾಗಿದೆ.

ಸದ್ಯ ಅಂತಿಮವಾಗಿ ಕಡ್ಡಾಯಗೊಳಿಸುವ ಪ್ರಸ್ತಾವನೆ ಇನ್ನೂ ಜಾರಿಗೆ ಬಂದಿಲ್ಲ. ಇದು ಕರಡು ನಿಯಮವಾಗಿದ್ದು, ಸಾರ್ವಜನಿಕರು ಹಾಗೂ ಸಂಬಂಧಿತ ವಲಯಗಳಿಂದ ಆಕ್ಷೇಪಣೆ ಮತ್ತು ಸಲಹೆಗಳನ್ನು ಆಹ್ವಾನಿಸಲಾಗಿದೆ. ಕರಡು ಅಧಿಸೂಚನೆಯ ಪ್ರಕಟಣೆಯಿಂದ 30 ದಿನಗಳ ಬಳಿಕ ಈ ಬಗ್ಗೆ ಮುಂದಿನ ಕ್ರಮ ಕೈಗೊಳ್ಳಲಾಗುತ್ತದೆ. ಅಂತಿಮ ಅಧಿಸೂಚನೆಯಲ್ಲಿ ಸರ್ಕಾರ ಸೂಚಿಸುವ ದಿನಾಂಕದಿಂದ ಮಾತ್ರ ನಿಯಮ ಜಾರಿಗೆ ಬರಲಿದೆ.



ಕಲ್ಯಾಣ ಕರ್ನಾಟಕ ವಿಮೋಚನಾ ದಿನದ ಅಂಗವಾಗಿ ಗುರುವಾರ ದೆಹಲಿ ಕನ್ನಡ ಶಿಕ್ಷಣ ಸಂಸ್ಥೆಯಲ್ಲಿ ರಾಷ್ಟ್ರ ಧ್ವಜಾರೋಹಣ ಮಾಡುವ ಮೂಲಕ ಆಚರಿಸಲಾಯಿತು. ದೆಹಲಿ ಕನ್ನಡ ಶಿಕ್ಷಣ ಸಂಸ್ಥೆಯ ಆಡಳಿತ ಮಂಡಳಿ ಸದಸ್ಯರು, ಶಿಕ್ಷಕರು, ವಿದ್ಯಾರ್ಥಿಗಳು ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಕಾರ್ಯಕಾರಿ ಸಮಿತಿ ಮತ್ತು ನವದೆಹಲಿಯ ಕಲ್ಯಾಣ ಕನ್ನಡಿಗರ ಸಾಂಸ್ಕೃತಿಕ ಟ್ರಸ್ಟ್ ಸದಸ್ಯರು ಭಾಗವಹಿಸಿದ್ದರು.

## 6ನೇ ತರಗತಿಯಿಂದ ತ್ರಿಭಾಷಾ ನೀತಿ ಅನುಷ್ಠಾನ ಪರಿಶೀಲಿಸಿ: ಸುಪ್ರೀಂ

**ನವದೆಹಲಿ, ಸೆ. 17:** ಸಿಬಿಎಸ್‌ಇ ಶಾಲೆಗಳಲ್ಲಿ ತ್ರಿಭಾಷಾ ನೀತಿಯನ್ನು ಜಾರಿಗೆ ತರುವ ವಿಷಯಕ್ಕೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ಮಹತ್ವದ ಸಲಹೆಯನ್ನು ನೀಡಿದೆ. ಪ್ರಸ್ತುತ ಶೈಕ್ಷಣಿಕ ಸಾಲಿನಲ್ಲಿ ಏಕಾಏಕಿ ಹೊಸ ಭಾಷಾ ನೀತಿಯನ್ನು ಹೇರಿ ವಿದ್ಯಾರ್ಥಿಗಳಿಗೆ ಆತಂಕ ತರಬಾರದು; ಬದಲಾಗಿ, 6ನೇ ತರಗತಿಯ ವಿದ್ಯಾರ್ಥಿಗಳಿಗೆ ಮುಂದಿನ ವರ್ಷದಿಂದ ಈ ನೀತಿಯನ್ನು ಅನುಷ್ಠಾನಗೊಳಿಸುವ ಬಗ್ಗೆ ಪರಿಶೀಲಿಸುವಂತೆ ಸುಪ್ರೀಂ ಕೋರ್ಟ್ ಸಿಬಿಎಸ್‌ಇ ಮಂಡಳಿಗೆ ಸೂಚಿಸಿದೆ.

ರಾಷ್ಟ್ರೀಯ ಶಿಕ್ಷಣ ನೀತಿ ಹಾಗೂ ರಾಷ್ಟ್ರೀಯ ಪಠ್ಯಕ್ರಮ ಚೌಕಟ್ಟಿನ ಭಾಗವಾಗಿ ಸಿಬಿಎಸ್‌ಇ ಶಿಕ್ಷಣ ಮಂಡಳಿಯು ಮೂರು ಭಾಷೆಗಳನ್ನು ಕಡ್ಡಾಯಗೊಳಿಸುವ ನಿರ್ಧಾರ ಕೈಗೊಂಡಿತ್ತು. ಆದರೆ, ಈ ನೀತಿಯನ್ನು ಮಧ್ಯಂತರದಲ್ಲಿ ಅಥವಾ ತರಾತುರಿಯಲ್ಲಿ ಜಾರಿಗೆ ತರುವುದರಿಂದ ವಿದ್ಯಾರ್ಥಿಗಳ ಮೇಲೆ ಅನಗತ್ಯ ಶೈಕ್ಷಣಿಕ ಒತ್ತಡ ಬೀಳುತ್ತದೆ ಎಂದು ಹಲವು ಪೋಷಕರು ಮತ್ತು ಅರ್ಜಿದಾರರು ನ್ಯಾಯಾಲಯದ ಬಾಗಿಲು ತಟ್ಟಿದ್ದರು.

ಪ್ರಕರಣದ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಅವರನ್ನೊಳಗೊಂಡ ಪೀಠವು, ವಿದ್ಯಾರ್ಥಿಗಳಿಗೆ ಅನುಕೂಲಕರ ವಾತಾವರಣ ಕಲ್ಪಿಸಿ, ಯಾವುದೇ ರೀತಿಯ ಆಶ್ಚರ್ಯ ಅಥವಾ ದಿಢೀರ್ ಬದಲಾವಣೆಗಳನ್ನು ಅವರ ಮೇಲೆ ಹೇರಬೇಡಿ ಎಂದು ಕೇಂದ್ರ ಸರ್ಕಾರ ಮತ್ತು ಸಿಬಿಎಸ್‌ಇಗೆ ಸೂಚಿಸಿತು.

9ನೇ ತರಗತಿಯ ಹಂತದಲ್ಲಿ ಹೊಸ ಭಾಷೆಯನ್ನು ಕಲಿಯಲು ಪ್ರಾರಂಭಿಸುವುದು ವಿದ್ಯಾರ್ಥಿಗಳಿಗೆ ಕಷ್ಟಕರವಾಗಬಹುದು. ಹೀಗಾಗಿ, ಆರಂಭಿಕ ಹಂತವಾದ 6ನೇ ತರಗತಿಯಿಂದಲೇ ಹೊಸ ಭಾಷಾ ಕಲಿಕೆಯನ್ನು ಪರಿಚಯಿಸುವುದು ಸೂಕ್ತ, ಮತ್ತು ಈ ವರ್ಷದ 6ನೇ ತರಗತಿ ವಿದ್ಯಾರ್ಥಿಗಳಿಗೆ ಇದರಿಂದ ವಿನಾಯಿತಿ ನೀಡಿ ಮುಂದಿನ ವರ್ಷದಿಂದ ಕಡ್ಡಾಯಗೊಳಿಸುವ ಬಗ್ಗೆ ಪರಿಶೀಲಿಸಿ ಎಂದು ಕೋರ್ಟ್ ಪ್ರಸ್ತಾಪಿಸಿದೆ. ಇದಕ್ಕೆ ಸ್ಪಂದಿಸಿರುವ ಕೇಂದ್ರ ಸರ್ಕಾರದ ಪರ ವಕೀಲರು, ಈ ವಿಷಯದಲ್ಲಿ ನ್ಯಾಯಾಲಯ ನೀಡಿರುವ ಸಲಹೆಗಳನ್ನು ಆಡಳಿತ ಮಂಡಳಿಯೊಂದಿಗೆ ಚರ್ಚಿಸಿ ಸೂಕ್ತ ನಿರ್ಧಾರ ತಳೆಯುವುದಾಗಿ ತಿಳಿಸಿದ್ದಾರೆ.

## ಭಾರತದ ಮೇಲೆ ಅಮೆರಿಕ ಸುಂಕದ ಬರೆ

**ನವದೆಹಲಿ, ಸೆ.17:** ರಷ್ಯಾದಿಂದ ತೈಲ ಮತ್ತು ಅನಿಲ ಖರೀದಿಸುವುದನ್ನು ಕಡಿಮೆ ಮಾಡುವ ನಿಟ್ಟಿನಲ್ಲಿ ಭಾರತ ಹಾಗೂ ಚೀನಾ ಸೇರಿ ಇತರ ದೇಶಗಳ ಮೇಲೆ ಕಠಿಣ ಸುಂಕ ವಿಧಿಸಲು ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್‌ಗೆ ಅಧಿಕಾರ ನೀಡುವ ಮಸೂದೆಯನ್ನು ಅಮೆರಿಕದ ಜನಪ್ರತಿನಿಧಿಗಳ ಸಭೆ (ಹೌಸ್ ಆಫ್ ರೆಪ್ರೆಸೆಂಟೇಟಿವ್ಸ್) ಕಳೆದ ತಿಂಗಳು ಅಂಗೀಕರಿಸಿದೆ. ಇದೀಗ ಈ ಮಸೂದೆಯು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಸಹಿಗಾಗಿ ಕಳುಹಿಸಲ್ಪಡಲಿದ್ದು, ಅವರು ಸಹಿ ಹಾಕಿದ ಬಳಿಕ ಇದು ಅಧಿಕೃತವಾಗಿ ಕಾನೂನಾಗಿ ಜಾರಿಗೆ ಬರಲಿದೆ.

ಅಮೆರಿಕದ ಈ ನಡೆಯ ಕುರಿತು ಪ್ರತಿಕ್ರಿಯಿಸಿರುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್ ಅವರು ತಮ್ಮ ಕೇಂದ್ರದ ವಿರುದ್ಧ ಕಿಡಿಕಾರಿದ್ದಾರೆ. ಓಲೈಕೆಯು ಎಂದಿಗೂ ಫಲ ನೀಡಿಲ್ಲ, ಮುಂದೆಯೂ ನೀಡುವುದಿಲ್ಲ. ಅಲ್ಲದೆ, ಹೌಡಿ ಮೋದಿ ಎಂದು ಸಂಭ್ರಮಿಸುತ್ತಲೇ ಶರಣಾಗುವ ಪ್ರವೃತ್ತಿ ಮುಂದುವರಿದಿದೆ ಎಂದು ಲೇವಡಿ ಮಾಡಿದ್ದಾರೆ. ಈ ಮಸೂದೆಯು ಮೋದಿ ಸರ್ಕಾರದ ವಿದೇಶಾಂಗ ನೀತಿಯ ಶೋಚನೀಯ ವೈಫಲ್ಯವನ್ನು ಎತ್ತಿ ತೋರಿಸುತ್ತದೆ ಎಂದು ಆರೋಪಿಸಿದ್ದಾರೆ.

# ದೆಹಲಿ ಕರ್ನಾಟಕ ಸಂಘದಲ್ಲಿ ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆ

### ಕಲ್ಯಾಣ ಕರ್ನಾಟಕ ಭಾಗ ಮಹಾನ್ ಚೇತನಗಳು ಜನ್ಮ ತಾಳಿದ ಭೂಮಿ: ರೇಣು ಕುಮಾರ್

**ನವದೆಹಲಿ, ಸೆ.17:** ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆಯ ಅಂಗವಾಗಿ ದೆಹಲಿ ಕರ್ನಾಟಕ ಸಂಘದ ಆವರಣದಲ್ಲಿ ರಾಷ್ಟ್ರಧ್ವಜಾರೋಹಣ ನೆರವೇರಿಸಿ, ಐತಿಹಾಸಿಕ ದಿನವನ್ನು ಗೌರವಪೂರ್ವಕವಾಗಿ ಆಚರಿಸಲಾಯಿತು.ಈ ಸಂದರ್ಭದಲ್ಲಿ ದೆಹಲಿ ಕರ್ನಾಟಕ ಸಂಘದ ಅಧ್ಯಕ್ಷ ಆರ್. ರೇಣು ಕುಮಾರ್ ರಾಷ್ಟ್ರಧ್ವಜಾರೋಹಣ ನೆರವೇರಿಸಿ ಮಾತನಾಡಿ, ಕಲ್ಯಾಣ ಕರ್ನಾಟಕದ ವಿಮೋಚನೆಯು ಈ ಭಾಗದ ಜನರ ಸ್ವಾಭಿಮಾನ, ಹೋರಾಟ ಮತ್ತು ತ್ಯಾಗದ ಪ್ರತೀಕವಾಗಿದೆ ಎಂದು ಹೇಳಿದರು. ಹೈದರಾಬಾದ್ ನಿಜಾಮರ ಆಡಳಿತದಿಂದ ಕಲ್ಯಾಣ ಕರ್ನಾಟಕವನ್ನು ವಿಮೋಚನೆಗೊಳಿಸಲು ಅನೇಕ ಮಹನೀಯರು ಮತ್ತು ಹೋರಾಟಗಾರರು ತಮ್ಮ ಜೀವನವನ್ನೇ ಮುಡಿಪಾಗಿಟ್ಟಿದ್ದರು. ಅವರ ತ್ಯಾಗ, ಹೋರಾಟ ಮತ್ತು ದೇಶಭಕ್ತಿಯನ್ನು ನಾವು ಸದಾ ಸ್ಮರಿಸಬೇಕು. ಇಂದು ನಾವು ಅನುಭವಿಸುತ್ತಿರುವ ಸ್ವಾತಂತ್ರ್ಯ ಮತ್ತು ಪ್ರಜಾಪ್ರಭುತ್ವದ ವಾತಾವರಣವು ಅವರ ತ್ಯಾಗದ ಫಲವಾಗಿದೆ ಎಂದು ಅವರು ಸ್ಮರಿಸಿದರು.ಕಲ್ಯಾಣ ಕರ್ನಾಟಕದ ಅಭಿವೃದ್ಧಿಯಲ್ಲಿ ಶಿಕ್ಷಣ, ಉದ್ಯೋಗ, ಸಾಮಾಜಿಕ ಜಾಗೃತಿ ಹಾಗೂ ನಮ್ಮ ಭಾಷೆ ಮತ್ತು ಸಂಸ್ಕೃತಿಯ ಸಂರಕ್ಷಣೆಗೆ ಹೆಚ್ಚಿನ ಆದ್ಯತೆ ನೀಡಬೇಕಿದೆ. ಕಲ್ಯಾಣ ಕರ್ನಾಟಕದ ಇತಿಹಾಸ ಮತ್ತು ಹೋರಾಟದ ಪರಂಪರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ರೇಣು ಕುಮಾರ್ ಹೇಳಿದರು. ಕಲ್ಯಾಣ ಕರ್ನಾಟಕದ ಜನರ ಒಗ್ಗಟ್ಟು ಮತ್ತು ಪರಸ್ಪರ ಸಹಕಾರದಿಂದ ಈ ಭಾಗವನ್ನು ಮತ್ತಷ್ಟು ಅಭಿವೃದ್ಧಿಯತ್ತ ಕೊಂಡೊಯ್ಯಬಹುದು. ದೆಹಲಿಯಲ್ಲಿರುವ ಕಲ್ಯಾಣ ಕರ್ನಾಟಕದ ಕನ್ನಡಿಗರು ತಮ್ಮ ನೆಲ, ನುಡಿ ಮತ್ತು ಸಂಸ್ಕೃತಿಯೊಂದಿಗೆ ಸದಾ ಸಂಪರ್ಕದಲ್ಲಿದ್ದು, ಈ ಭಾಗದ ಅಭಿವೃದ್ಧಿಗೆ ತಮ್ಮದೇ ಆದ ಕೊಡುಗೆ ನೀಡಬೇಕು ಎಂದು ಅವರು ಕರೆ ನೀಡಿದರು. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಬಸವಕಲ್ಯಾಣದ ಮಾಜಿ ವಿಧಾನಸಭಾ ಸದಸ್ಯ ಮಲ್ಲಿಕಾರ್ಜುನ್ ಖೂಬಾ ಹಾಗೂ ಕಲ್ಯಾಣ ಕನ್ನಡಿಗರ ಸಾಂಸ್ಕೃತಿಕ ಟ್ರಸ್ಟ್‌ನ ಅಧ್ಯಕ್ಷ ಡಾ.ಶಿವಾಜಿ ಭಂಡಾರಕರ ಭಾಗವಹಿಸಿದ್ದರು. ಟ್ರಸ್ಟ್‌ನ ಗೌರವಾಧ್ಯಕ್ಷ ವಿ.ವಿ. ಬಿರಾದರ್, ಕಾರ್ಯದರ್ಶಿ ರಾಜಕುಮಾರ್ ನೀಲೂರ್, ದೆಹಲಿ ಕನ್ನಡ ಶಿಕ್ಷಣ ಸಂಸ್ಥೆ ಗೌರವ ಖಜಾಂಚಿ ಹಾಗೂ ಪ್ರಭಾರ ಕಾರ್ಯದರ್ಶಿ ಕಾಶಿನಾಥ್ ಬಿರಾದರ್ ಹಾಗೂ ಟಸ್ಟ್‌ನ ಪದಾಧಿಕಾರಿಗಳು ಉಪಸ್ಥಿತರಿದ್ದರು. ದೆಹಲಿ ಕರ್ನಾಟಕ ಸಂಘದ ಕಾರ್ಯದರ್ಶಿ ರಾಧಾಕೃಷ್ಣ ಸೇರಿದಂತೆ ಸಂಘದ ಪದಾಧಿಕಾರಿಗಳು ಹಾಗೂ ಸದಸ್ಯರು ಕಾರ್ಯಕ್ರಮದಲ್ಲಿ ಹಾಜರಿದ್ದರು.






# ಮತದಾರರ ಪಟ್ಟಿ ಪರಿಷ್ಕರಣೆ – ಜನರ ಹಕ್ಕು ರಕ್ಷಣೆಗೆ ಶಾಸಕ ರಮೇಶ್ ಬಾಬು ಮನವಿ

**ಬೆಂಗಳೂರು, ಸೆ.17:** ಕರ್ನಾಟಕದಾದ್ಯಂತ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಕಂಡುಬಂದಿರುವ ನ್ಯೂನತೆಗಳು – ರಾಜ್ಯಾದ್ಯಂತ ತಕ್ಷಣದ ಪರಿಶೀಲನೆ, ಗಣತಿಯಲ್ಲಿ ಉಂಟಾಗಿರುವ ದೋಷಗಳ ಸರಿಪಡಿಸುವಿಕೆ ಹಾಗೂ ಪ್ರತಿಯೊಬ್ಬ ಅರ್ಹ ಮತದಾರನ ಮತದಾನದ ಹಕ್ಕಿನ ರಕ್ಷಣೆಗೆ ವಿಧಾನ ಪರಿಷತ್ ಸದಸ್ಯ, ಕೆಪಿಸಿಸಿ ಮಾಧ್ಯಮ ಮತ್ತು ಸಂವಹನ ವಿಭಾಗ ಅಧ್ಯಕ್ಷ ರಮೇಶ್‌ಬಾಬು ಮನವಿ.

ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಪರವಾಗಿ, ಕರ್ನಾಟಕದಾದ್ಯಂತ ಪ್ರಸ್ತುತ ನಡೆಯುತ್ತಿರುವ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (SIR) ಪ್ರಕ್ರಿಯೆಯಲ್ಲಿ ಉದ್ಭವಿಸಿರುವ ಗಂಭೀರ ಆತಂಕಗಳು ಮತ್ತು ಸಮಸ್ಯೆಗಳನ್ನು ತಮ್ಮ ತುರ್ತು ಗಮನಕ್ಕೆ ತರಲು ಬಯಸುತ್ತೇನೆ.

ರಾಜ್ಯದ ವಿವಿಧ ಭಾಗಗಳಿಂದ ಗಣತಿ ನಮೂನೆಗಳು, ಮತದಾರರ ಮ್ಯಾಪಿಂಗ್, ಮತದಾರರನ್ನು ಸ್ಥಳಾಂತರಗೊಂಡವರು ಅಥವಾ ಮೃತರೆಂದು ವರ್ಗೀಕರಿಸಿರುವುದು ಹಾಗೂ ಚುನಾವಣಾ ಅಧಿಕಾರಿಗಳಿಂದ ಸೂಕ್ತ ಪ್ರತಿಕ್ರಿಯೆ ದೊರೆಯದಿರುವ ಬಗ್ಗೆ ವರದಿಯಾಗುತ್ತಿರುವ ಸಮಸ್ಯೆಗಳಿಗೆ ತಮ್ಮ ಕಾರ್ಯಾಲಯದಿಂದ ತುರ್ತುಕ್ರಮದ ಮತ್ತು ಮಧ್ಯಪ್ರವೇಶದ ಅಗತ್ಯವಿದೆ.

ವಿಧಾನಸಭಾ ಕ್ಷೇತ್ರ ಸಂಖ್ಯೆ 153, ಭಾಗ ಸಂಖ್ಯೆ 512ರಲ್ಲಿ ಗುರುತಿಸಲಾಗಿರುವ ನ್ಯೂನ್ಯತೆಗಳು, ನಮ್ಮ ಗಮನಕ್ಕೆ ಬಂದಿರುವ ಸಮಸ್ಯೆಗಳು ಮತ್ತು ಅದರ ಗಾಂಭೀರ್ಯವನ್ನು ಉದಾಹರಣೆಯಾಗಿ ಇಲ್ಲಿ ತೋರಿಸಲಾಗಿದೆ. ಈ ಸಮಸ್ಯೆಯನ್ನು ಪ್ರತ್ಯೇಕ ಪ್ರಕರಣವೆಂದು ಪರಿಗಣಿಸದೆ, ರಾಜ್ಯಾದ್ಯಂತ ಸಮಗ್ರ ಪರಿಶೀಲನೆಯ ಭಾಗವಾಗಿ ಪರಿಶೀಲಿಸಬೇಕಾಗಿದೆ.

ಉದಾಹರಣೆಯ ಪ್ರಕರಣ: ವಿಧಾನಸಭಾ ಕ್ಷೇತ್ರ ಸಂಖ್ಯೆ 153, ಭಾಗ ಸಂಖ್ಯೆ 512

ಈ ನಿರ್ದಿಷ್ಟ ಮತಗಟ್ಟೆ ಭಾಗಕ್ಕೆ ಸಂಬಂಧಿಸಿದಂತೆ ಕೆಳಗಿನ ಅಂಕಿ–ಅಂಶಗಳು ಚುನಾವಣಾ ಆಯೋಗದಿಂದ ವರದಿಯಾಗಿವೆ:

ಒಟ್ಟು ಮತದಾರರು – 1,016
ವಿತರಿಸಲಾದ ಗಣತಿ ನಮೂನೆಗಳು – 1,016
ಸ್ವೀಕರಿಸಲಾದ ಗಣತಿ ನಮೂನೆಗಳು – 654
ಅಪ್ಲೋಡ್ ಮಾಡಲಾದ ಗಣತಿ ನಮೂನೆಗಳು – 654
ಸಲ್ಲಿಕೆಯಾಗದ ಗಣತಿ ನಮೂನೆಗಳು – 04
ಶಾಶ್ವತವಾಗಿ ಸ್ಥಳಾಂತರಗೊಂಡಿದ್ದಾರೆಂದು ವರದಿಯಾದ ಮತದಾರರು – 339
ಮೃತರೆಂದು ವರದಿಯಾದ ಮತದಾರರು – 19
ಹಿಂದಿನ SIR ದಾಖಲೆಗೆ ಮ್ಯಾಪಿಂಗ್ ಆಗದಿರುವುದಾಗಿ ವರದಿಯಾದ ಮತದಾರರು – 265

ಲಭ್ಯವಿರುವ ಮಾಹಿತಿಯ ಪ್ರಕಾರ, ಮಾನ್ಯಗೊಂಡ ಮತದಾರರ ಸಂಖ್ಯೆ 389 ಆಗಿದ್ದು, ಇದು ಒಟ್ಟು ಮತದಾರರ ಸುಮಾರು ಶೇ. 38ರಷ್ಟಿದೆ. ಒಂದು ವಿಧಾನಸಭಾ ಕ್ಷೇತ್ರದ ಒಂದೇ ಮತಗಟ್ಟೆ ಭಾಗದಲ್ಲಿ ಒಟ್ಟು ಮತದಾರರ ಸುಮಾರು ಶೇ. 62ರಷ್ಟು ಮತದಾರರನ್ನು ಹೊರಗಿಟ್ಟಂತೆ ಆಗಿದೆ. ಈ ಅಂಕಿಅಂಶಗಳು ಮತದಾರರ ದಾಖಲೆಗಳ ಸಂಪೂರ್ಣತೆ, ನಿಖರತೆ ಮತ್ತು ಹೊಂದಾಣಿಕೆಯ ಕುರಿತು ಗಂಭೀರ ಪ್ರಶ್ನೆಗಳನ್ನು ಹುಟ್ಟುಹಾಕುತ್ತವೆ.

ಒಟ್ಟು ಮತದಾರರ ಸಂಖ್ಯೆ, ಸ್ವೀಕರಿಸಲಾದ ಗಣತಿ ನಮೂನೆಗಳು, ಮ್ಯಾಪಿಂಗ್ ಆಗದ ಮತದಾರರು ಮತ್ತು ವರದಿಯಾದ ವಿವಿಧ ವರ್ಗಗಳ ನಡುವಿನ ವ್ಯತ್ಯಾಸಗಳಿಗೆ ಸಂಬಂಧಿಸಿದಂತೆ ಮತದಾರರ ಹೆಸರುವಾರು ವಿವರವಾದ ಪರಿಶೀಲನೆಯ ಅಗತ್ಯವಿದೆ. ವಿಶೇಷವಾಗಿ, 389 ಮಾನ್ಯ ಮತದಾರರು ಎಂಬ ವರದಿಯಾದ ಅಂಕಿಅಂಶಕ್ಕೆ ಸಂಬಂಧಿಸಿದಂತೆ ಅಧಿಕೃತ ಸ್ಪಷ್ಟನೆ ಹಾಗೂ ಇತರ ವರ್ಗಗಳೊಂದಿಗೆ ಅದರ ಹೊಂದಾಣಿಕೆಯನ್ನು ನೀಡಬೇಕಾಗಿದೆ.



ಈ ಉದಾಹರಣೆಯು ಕರ್ನಾಟಕದಾದ್ಯಂತ ಇದೇ ರೀತಿಯ ದೂರುಗಳು ಮತ್ತು ನ್ಯೂನ್ಯತೆಗಳನ್ನು ಪರಿಶೀಲಿಸುವ ಅಗತ್ಯವನ್ನು ಸೂಚಿಸುತ್ತದೆ. ಹಿಂದಿನ SIR ದಾಖಲೆ ಯೊಂದಿಗೆ ಮ್ಯಾಪಿಂಗ್ ಆಗದಿರುವ ಕಾರಣಕ್ಕಾಗಿ 265 ಮತದಾರರಿಗೆ ನೋಟಿಸ್ ಗಳನ್ನು ನೀಡಿರುವುದು ಚುನಾವಣಾ ಆಯೋಗದ ಸಂಪೂರ್ಣ ನಿರ್ಲಕ್ಷ್ಯವನ್ನು ತೋರಿಸುತ್ತದೆ.

ಕರ್ನಾಟಕದ ವಿವಿಧ ಭಾಗಗಳಿಂದ ಇದೇ ರೀತಿಯ ಸಮಸ್ಯೆಗಳು ವರದಿಯಾಗುತ್ತಿರುವುದರ ಬಗ್ಗೆ ಏಕಅಅ ಕಳವಳ ವ್ಯಕ್ತಪಡಿಸುತ್ತದೆ. ಅವುಗಳಲ್ಲಿ ಪ್ರಮುಖವಾಗಿ:

* ಗಣತಿ ನಮೂನೆಗಳು ಮತದಾರರಿಗೆ ತಲುಪದಿರುವುದು, ಸಂಗ್ರಹಿಸದಿರುವುದು ಅಥವಾ ಅವುಗಳ ಸರಿಯಾದ ಲೆಕ್ಕಪತ್ರ ನಿರ್ವಹಣೆಯಾಗದಿರುವುದು.
* ಅರ್ಹ ಮತದಾರರನ್ನು ಹಿಂದಿನ ಖಖಖ ದಾಖಲೆಗಳೊಂದಿಗೆ ಮ್ಯಾಪಿಂಗ್ ಆಗದ ಮತದಾರರೆಂದು ತೋರಿಸುತ್ತಿರುವುದು.
* ಸಮರ್ಪಕ ಪರಿಶೀಲನೆಯಿಲ್ಲದೆ ಅರ್ಹ ಮತದಾರರನ್ನು ಶಾಶ್ವತವಾಗಿ ಸ್ಥಳಾಂತರಗೊಂಡವರೆಂದು ವರ್ಗೀಕರಿಸುತ್ತಿರುವುದು.
* ವಿಶ್ವಾಸಾರ್ಹ ದಾಖಲೆಗಳ ಆಧಾರದ ಮೇಲೆ ಮೃತ ಮತದಾರರೆಂದು ವರ್ಗೀಕರಿಸಿರುವುದನ್ನು ದೃಢೀಕರಿಸುವ ಅಗತ್ಯವಿರುವುದು.
* ಮೂಲ ಮತದಾರರ ಪಟ್ಟಿ, ಗಣತಿ ದಾಖಲೆಗಳು ಮತ್ತು ಪರಿಷ್ಕೃತ ಮತದಾರರ ಸ್ಥಿತಿಯ ನಡುವೆ ನ್ಯೂನತೆಗಳಿರುವುದು.
* ವೈಯಕ್ತಿಕ ಮತದಾರರ ಹೆಸರಿನ ಸ್ಥಿತಿಗತಿಗಳ ಕುರಿತು ಮಾಹಿತಿ ಪಡೆಯುವಲ್ಲಿ ಮತದಾರರು ಮತ್ತು ಅವರ ಪ್ರತಿನಿಧಿಗಳು ಎದುರಿಸುತ್ತಿರುವ ತೊಂದರೆಗಳು.
* ಸಂಬಂಧಪಟ್ಟ BLOಗಳು, ಮೇಲ್ವಿಚಾರಕರು, AEROಗಳು ಮತ್ತು EROಗಳಿಂದ ವಿಚಾರಣೆ ಹಾಗೂ ದೂರುಗಳಿಗೆ ಪ್ರತಿಕ್ರಿಯೆ ದೊರೆಯದಿರುವುದು ಅಥವಾ ಸಮರ್ಪಕ ಪ್ರತಿಕ್ರಿಯೆ ನೀಡದಿರುವುದು.ಮತದಾರರ ಪಟ್ಟಿಯ ಸಿದ್ಧತೆ ಮತ್ತು ಪರಿಷ್ಕರಣೆ ಪ್ರಕ್ರಿಯೆಯನ್ನು ಭಾರತದ ಸಂವಿಧಾನ, ಜನತಾ ಪ್ರಾತಿನಿಧ್ಯ ಕಾಯ್ದೆ, 1950, ಮತದಾರರ ನೋಂದಣಿ ನಿಯಮಗಳು, 1960 ಹಾಗೂ ಭಾರತದ ಚುನಾವಣಾ ಆಯೋಗದ ಅನ್ವಯವಾಗುವ ನಿರ್ದೇಶನಗಳಿಗೆ ಅನುಗುಣವಾಗಿ ಕೈಗೊಳ್ಳಬೇಕು.

ಮತದಾರರ ಪಟ್ಟಿಯ ಸಮಗ್ರತೆಯನ್ನು ಕಾಪಾಡಲು ನಿಖರವಾದ ನೋಂದಣಿ ಹಾಗೂ ಅರ್ಹ ಮತದಾರರನ್ನು ಹೊರಗಿಡದಂತೆ ರಕ್ಷಿಸುವುದು ಎರಡೂ ಅಗತ್ಯವಾಗಿವೆ. ಪ್ರತಿಯೊಬ್ಬ ಅರ್ಹ ನಾಗರಿಕನಿಗೂ ತನ್ನ ಅರ್ಹತೆಯನ್ನು ಸಾಬೀತುಪಡಿಸಲು, ಅಗತ್ಯ ದಾಖಲೆಗಳನ್ನು ಸಲ್ಲಿಸಲು, ದಾಖಲೆಗಳಲ್ಲಿನ ದೋಷಗಳನ್ನು ಸರಿಪಡಿಸಿಕೊಳ್ಳಲು ಮತ್ತು ಚುನಾವಣಾ ಪ್ರಕ್ರಿಯೆಯಲ್ಲಿ ಭಾಗವಹಿಸಲು ನ್ಯಾಯಸಮ್ಮತ ಅವಕಾಶ ದೊರೆಯಬೇಕು.

ಆಡಳಿತಾತ್ಮಕ ತೊಂದರೆಗಳು, ಮ್ಯಾಪಿಂಗ್ ದೋಷಗಳು, ಅಪೂರ್ಣ ಗಣತಿ ಅಥವಾ ಮಾಹಿತಿ ವಿನಿಮಯದಲ್ಲಿನ ವೈಫಲ್ಯಗಳಿಂದಾಗಿ ನೈಜ ಮತದಾರರನ್ನು ತಪ್ಪಾಗಿ ಮತದಾರರ ಪಟ್ಟಿಯಿಂದ ಹೊರಗಿಡುವಂತೆ ಆಗಬಾರದು. ಅದೇ ಸಮಯದಲ್ಲಿ, ಮೃತರು ಅಥವಾ ಶಾಶ್ವತವಾಗಿ ಸ್ಥಳಾಂತರಗೊಂಡವರು ಎಂಬ ವರ್ಗಗಳಿಗೆ ಸಂಬಂಧಿಸಿದ ಎಲ್ಲಾ ನಮೂದುಗಳನ್ನು ನಿಗದಿತ ಪ್ರಕ್ರಿಯೆಗಳ ಪ್ರಕಾರ ಪರಿಶೀಲಿಸಬೇಕು.

ಮೇಲಿನ ಅಂಶಗಳು ಮತ್ತು ಆತಂಕಗಳನ್ನು ಗಮನದಲ್ಲಿಟ್ಟುಕೊಂಡು, ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯು ಕೆಳಕಂಡ ಕ್ರಮಗಳನ್ನು ಕೈಗೊಳ್ಳುವಂತೆ ಮನವಿ ಮಾಡುತ್ತದೆ:

1. ತಕ್ಷಣ ರಾಜ್ಯಾದ್ಯಂತ ಪರಿಶೀಲನೆ ನಡೆಸುವುದು.
2. ಮತಗಟ್ಟೆ ಭಾಗವಾರು ಅಂಕಿಅಂಶಗಳ ವರದಿಗಳನ್ನು ಪಡೆಯುವುದು.
3. ಮ್ಯಾಪಿಂಗ್ ಆಗದ ಮತದಾರರ ವಿಶೇಷ ಪರಿಶೀಲನೆ ನಡೆಸುವುದು.
4. ಸ್ಥಳಾಂತರಗೊಂಡವರು ಮತ್ತು ಮೃತರೆಂದು ವರ್ಗೀಕರಿಸಲಾದ ಮತದಾರರ ವಿವರಗಳನ್ನು ಪರಿಶೀಲಿಸುವುದು.
5. ಪರಿಣಾಮಕಾರಿಯಾದ ದೂರು ಪರಿಹಾರ ವ್ಯವಸ್ಥೆಗಳನ್ನು ಸ್ಥಾಪಿಸುವುದು.
6. ಪಾರದರ್ಶಕತೆ ಮತ್ತು ಮಾಹಿತಿಗೆ ಸುಲಭ ಅವಕಾಶ ನೀಡುವುದು .
7. ಅರ್ಹ ಮತದಾರರನ್ನು ತಪ್ಪಾಗಿ ಮತದಾರರ ಪಟ್ಟಿಯಿಂದ ತೆಗೆಯದಂತೆ ತಡೆಯುವುದು.
8. ದೋಷಗಳನ್ನು ಸರಿಪಡಿಸಿಕೊಳ್ಳಲು ಸಾಕಷ್ಟು ಕಾಲಾವಕಾಶ ಒದಗಿಸುವುದು.
9. ಆಡಳಿತಾತ್ಮಕ ಲೋಪಗಳಿಗೆ ಹೊಣೆಗಾರಿಕೆಯನ್ನು ನಿಗದಿಪಡಿಸುವುದು.
10. ನಿಗದಿತ ಕಾಲಮಿತಿಯೊಳಗೆ ಕೈಗೊಂಡ ಕ್ರಮಗಳ ವರದಿಯನ್ನು ಸಲ್ಲಿಸುವುದು.

ವಿಧಾನಸಭಾ ಕ್ಷೇತ್ರ ಸಂಖ್ಯೆ.153, ಭಾಗ.ಸಂಖ್ಯೆ 512ರ ಉದಾಹರಣೆಯು ಪಾರದರ್ಶಕ ಮತ್ತು ಹೊಣೆಗಾರಿಕೆಯುಳ್ಳ ಪರಿಶೀಲನಾ ಪ್ರಕ್ರಿಯೆಯನ್ನು ಎತ್ತಿ ತೋರಿಸುತ್ತದೆ. ಆದ್ದರಿಂದ KPCCಯು ರಾಜ್ಯಾದ್ಯಂತ ಈ ವಿಷಯವನ್ನು ಸಮಗ್ರವಾಗಿ ಪರಿಶೀಲಿಸುವಂತೆ, ವಿಶೇಷವಾಗಿ ಗಂಭೀರ ನ್ಯೂನ್ಯತೆಗಳು ಅಥವಾ ದೂರುಗಳು ವರದಿಯಾಗಿರುವ ಮತಗಟ್ಟೆ ಭಾಗಗಳ ಬಗ್ಗೆ ಹೆಚ್ಚಿನ ಗಮನಹರಿಸುವಂತೆ ಮನವಿ ಮಾಡುತ್ತದೆ.

ಕಾನೂನು ಮತ್ತು ಭಾರತದ ಚುನಾವಣಾ ಆಯೋಗದ ನಿರ್ದೇಶನಗಳಿಗೆ ಅನುಗುಣವಾಗಿ ತಾವು ತ್ವರಿತ ಹಾಗೂ ಸೂಕ್ತ ಕ್ರಮಗಳನ್ನು ಕೈಗೊಳ್ಳುವ ವಿಶ್ವಾಸ ನಮಗಿದೆ. ಗಣತಿ ಪ್ರಕ್ರಿಯೆಯಲ್ಲಿನ ದೋಷ ಅಥವಾ ಲೋಪದ ಕಾರಣದಿಂದ ಯಾವುದೇ ಅರ್ಹ ಮತದಾರನು ತನ್ನ ಪ್ರಜಾಸತ್ತಾತ್ಮಕ ಹಕ್ಕಿನಿಂದ ವಂಚಿತನಾಗದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕೆಂದು ಕೋರುತ್ತೇವೆ ಎಂದು ಶಾಸಕ, ಬೆಂಗಳೂರು ಕೆಪಿಸಿಸಿ ಮಾಧ್ಯಮ ಮತ್ತು ಸಂವಹನ ವಿಭಾಗ ಅಧ್ಯಕ್ಷ ರಮೇಶ್ ಬಾಬು ತಿಳಿಸಿದ್ದಾರೆ.